ನಟಿ ಐಶ್ವರ್ಯಾ ಸಿಂಧೋಗಿ ಅವರು ತಮ್ಮ ಸೋಷಿಯಲ್ ಮೀಡಿಯದಲ್ಲಿ ಅಪ್‌ಲೋಡ್ ಮಾಡುವ ಪೋಸ್ಟ್‌ಗಳಿಗೆ ಕಳೆದ 2 ತಿಂಗಳಿಂದ ಸತತವಾಗಿ ಆಕ್ಷೇಪಾರ್ಹ ಕಮೆಂಟ್‌ಗಳನ್ನು ಮಾಡಲಾಗುತ್ತಿದೆ ಎಂದು ಬೆಂಗಳೂರಿನ ಸಂಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಅದರಲ್ಲೂ ಈ ಕೆಲಸಗಳನ್ನು ತಮ್ಮ ಪರಿಚಿತರೇ ಮಾಡುತ್ತಿದ್ದಾರೆ ಎಂದು ಶಂಕೆ ವ್ಯಕ್ತಪಡಿಸಿ ದೂರು ದಾಖಲಿಸಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ವಾಲಿದ ಕಟ್ಟಡ: ಧ್ವಂಸಕ್ಕೆ ಸೂಚನೆ

ಬೆಂಗಳೂರು: ನಗರದಲ್ಲಿ ಸುಮಾರು ರೂ.200 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ 18 ಅಂತಸ್ತಿನ ಬೃಹತ್ ಕಟ್ಟಡವೊಂದು ವಾಲಿರುವ ಹಿನ್ನೆಲೆಯಲ್ಲಿ, ಕಟ್ಟಡದ ಅಪಾಯಕಾರಿ ಭಾಗವನ್ನು ತೆರವುಗೊಳಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಸೂಚನೆ ನೀಡಿದೆ. ಬೆಂಗಳೂರಿನ ಇತಿಹಾಸದಲ್ಲೇ ಅತಿ ಎತ್ತರದ ಕಟ್ಟಡವೊಂದರ ತೆರವು ಕಾರ್ಯಾಚರಣೆಗೆ ಸಿದ್ಧತೆ ನಡೆಯುತ್ತಿರುವುದು ಇದೇ ಮೊದಲ ಬಾರಿಗೆ ಎಂಬ ಚರ್ಚೆ ನಡೆದಿದೆ.

ಕಟ್ಟಡದ ರಚನೆಯಲ್ಲಿ ಹಾನಿ ಉಂಟಾಗಿರುವ ಹಿನ್ನೆಲೆಯಲ್ಲಿ, ಮುಂದಿನ ದಿನಗಳಲ್ಲಿ ಯಾವುದೇ ರೀತಿಯ ಅನಾಹುತ ಸಂಭವಿಸುವ ಸಾಧ್ಯತೆಯನ್ನು ಪರಿಗಣಿಸಿ, ವಾಲಿರುವ ಭಾಗವನ್ನು ತೆರವುಗೊಳಿಸಲು ಜಿಬಿಎ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಅವೈಜ್ಞಾನಿಕ ನಿರ್ಮಾಣದ ಆರೋಪ ಎದುರಿಸುತ್ತಿರುವ ಈ ಕಟ್ಟಡದಲ್ಲಿ ಒಟ್ಟು 49 ಅಪಾರ್ಟ್‌ಮೆಂಟ್‌ಗಳಿದ್ದು, ಕಟ್ಟಡದ ಒಂದು ಭಾಗ ವಾಲಿರುವುದು ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಕಟ್ಟಡದ ರಚನೆಯಲ್ಲಿ ಹಾನಿ ಉಂಟಾಗಿರುವ ಹಿನ್ನೆಲೆಯಲ್ಲಿ, ಮುಂದಿನ ದಿನಗಳಲ್ಲಿ ಯಾವುದೇ ರೀತಿಯ ಅನಾಹುತ ಸಂಭವಿಸುವ ಸಾಧ್ಯತೆಯನ್ನು ಪರಿಗಣಿಸಿ, ವಾಲಿರುವ ಭಾಗವನ್ನು ತೆರವುಗೊಳಿಸಲು ಜಿಬಿಎ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಎಸ್‌ಎನ್‌ಎನ್ ರಾಜ್ ಕಾರ್ಪ್ ಒಡೆತನದಲ್ಲಿ ನಿರ್ಮಾಣವಾಗಿರುವ ಕಟ್ಟಡಕ್ಕೆ ಸಂಬಂಧಿಸಿದಂತೆ ಜಿಬಿಎ ಮುಖ್ಯ ಆಯುಕ್ತರು ಕಟ್ಟಡದ ಮಾಲೀಕರೊಂದಿಗೆ ಸಭೆ ನಡೆಸಿದ್ದಾರೆ. ಸಭೆಯಲ್ಲಿ ಕಟ್ಟಡದ ಅಪಾಯಕಾರಿ ಹಾಗೂ ವಾಲಿರುವ ಭಾಗವನ್ನು ತೆರವುಗೊಳಿಸುವಂತೆ ಸೂಚಿಸಲಾಗಿದ್ದು, ಇದಕ್ಕೆ ಕಟ್ಟಡದ ಮಾಲೀಕರು ಸಹ ಒಪ್ಪಿಗೆ ಸೂಚಿಸಿದ್ದಾರೆ ಎಂದು ತಿಳಿದುಬಂದಿದೆ. ತೆರವು ಕಾರ್ಯ ಆರಂಭಿಸುವ ಮುನ್ನ ಸಾರ್ವಜನಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಜಿಬಿಎಯಿಂದ ಅಗತ್ಯ ಅನುಮತಿಗಳನ್ನು ಪಡೆಯಲಾಗಿದ್ದು, ತೆರವು ಕಾರ್ಯಾಚರಣೆಗೆ ತಗಲುವ ಸಂಪೂರ್ಣ ವೆಚ್ಚವನ್ನು ಸಂಬಂಧಪಟ್ಟ ಸಂಸ್ಥೆಯೇ ಭರಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ನೀಟ್ ವಿವಾದಕ್ಕೆ ಸದನ ಬಲಿ

ನವದೆಹಲಿ: ಸಂಸತ್ತಿನ ಮಳೆಗಾಲದ ಅಧಿವೇಶನದ ನಾಲ್ಕನೇ ದಿನವಾದ ಗುರುವಾರ ಎನ್‌ಡಿಎ ಹಾಗೂ ವಿರೋಧ ಪಕ್ಷಗಳ ಸಂಸದರು ಸಂಸತ್ ಆವರಣದ ಹೊರಗೆ ಪರಸ್ಪರ ಪ್ರತಿಭಟನೆ ನಡೆಸಿ, ಘೋಷಣೆಗಳನ್ನು ಕೂಗಿದ ಘಟನೆ ನಡೆದಿದೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಹಾಗೂ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸೇರಿದಂತೆ ವಿರೋಧ ಪಕ್ಷಗಳ ಸಂಸದರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದರು.

ವಿರೋಧ ಪಕ್ಷಗಳ ಪ್ರತಿಭಟನೆಗೆ ಪ್ರತಿಯಾಗಿ ಎನ್‌ಡಿಎ ಸಂಸದರೂ ಪ್ರತಿಭಟನೆ ನಡೆಸಿದ್ದು, ಎರಡೂ ಬಣಗಳ ನಡುವೆ ಪರಸ್ಪರ ಘೋಷಣೆಗಳ ಸಮರ ನಡೆಯಿತು. ಜುಲೈ 21ರಂದು ಪ್ರಧಾನಿ ನಿವಾಸದ ಬಳಿ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಗೆ ವಿರೋಧವಾಗಿ ಎನ್‌ಡಿಎ ಸಂಸದರು ಪ್ರತಿಭಟನೆ ನಡೆಸಿದರು. ಇದೇ ವೇಳೆ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ ಇಂಡಿಯಾ ಮೈತ್ರಿಕೂಟದ ಸಂಸದರು ಪ್ರತಿಭಟನೆ ಮುಂದುವರಿಸಿದರು. ಪ್ರತಿಭಟನೆಯ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಎನ್‌ಡಿಎ ಸಂಸದರ ಸಮೀಪ ತೆರಳಿದಾಗ, ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸದಂತೆ ಭದ್ರತಾ ಸಿಬ್ಬಂದಿ ಮಧ್ಯಪ್ರವೇಶಿಸಿ ಅವರನ್ನು ತಡೆದರು. ಸಂಸತ್ ಆವರಣದ ಹೊರಗಿನ ಪ್ರತಿಭಟನೆಯ ಬೆನ್ನಲ್ಲೇ ಸಂಸತ್ತಿನ ಒಳಗೂ ಗದ್ದಲ ಮುಂದುವರಿಯಿತು. ಸದನದಲ್ಲಿ ಉಂಟಾದ ಗದ್ದಲದ ಹಿನ್ನೆಲೆಯಲ್ಲಿ ಲೋಕಸಭೆ ಮತ್ತು ರಾಜ್ಯಸಭೆಯ ಕಲಾಪಗಳನ್ನು ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಲಾಯಿತು.



# ಕೈ ವಿರುದ್ಧ ಬಿಜೆಪಿ ಬೃಹತ್ ಪ್ರತಿಭಟನೆ

ಬೆಂಗಳೂರು: ಬಿಜೆಪಿ ಶಾಸಕರ ಮೇಲೆ ನಿನ್ನೆ ನಡೆದ ಹಲ್ಲೆಯನ್ನು ಖಂಡಿಸಿ ಇಂದು ಪಕ್ಷದ ವತಿಯಿಂದ ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕೆಪಿಸಿಸಿ ಕಚೇರಿ ಬಳಿ ಪ್ರತಿಭಟನೆಗೆ ಮುಂದಾಗಿದ್ದ ಕೊತ್ವಾಲ್ ರಾಮಚಂದ್ರನ ಶಿಷ್ಯರಾದ ಕಾಂಗ್ರೆಸ್ಸಿಗರು ನಮ್ಮ ಪಕ್ಷದ ಶಾಸಕರ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಮುಖಂಡರು ಖಂಡಿಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ವಿಪಕ್ಷ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಈ ಪ್ರತಿಭಟನೆ ಮತ್ತು ಧರಣಿ ನಡೆಯಿತು. ಕೊತ್ವಾಲ್ ರಾಮಚಂದ್ರನ ಗೂಂಡಾ ಸಂಸ್ಕೃತಿಯನ್ನು ಬಿತ್ತುವ ಕೆಲಸವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಮಾಡುತ್ತಿದ್ದಾರೆ ಎಂದು ಆಕ್ಷೇಪಿಸಲಾಯಿತು. ಶಾಸಕರು, ವಿಧಾನಪರಿಷತ್ ಸದಸ್ಯರು ಮತ್ತು ಪಕ್ಷದ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ತಮಿಳುನಾಡು ಸಿಎಂ ವಿಜಯ್‌ಗೆ ಕರ್ನಾಟಕದಿಂದ ಮಾತುಕತೆಗೆ ಆಹ್ವಾನ

ಬೆಂಗಳೂರು: ಕಾವೇರಿ ನೀರು ಹಂಚಿಕೆ ಹಾಗೂ ಮೇಕೆದಾಟು ಯೋಜನೆ ವಿಚಾರದಲ್ಲಿ ಕರ್ನಾಟಕ ಮತ್ತು ತಮಿಳುನಾಡು ನಡುವಿನ ಭಿನ್ನಾಭಿಪ್ರಾಯಗಳಿಗೆ ಮಾತುಕತೆಯ ಮೂಲಕ ಪರಿಹಾರ ಕಂಡುಕೊಳ್ಳಲು ರಾಜ್ಯ ಸರ್ಕಾರ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಆಗಸ್ಟ್ 3ರಂದು ಬೆಂಗಳೂರಿಗೆ ಆಗಮಿಸಿ ಮಾತುಕತೆ ನಡೆಸುವಂತೆ ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರಿಗೆ ಕರ್ನಾಟಕ ಸರ್ಕಾರ ಆಹ್ವಾನ ನೀಡಿದೆ ಎಂದು ತಿಳಿದುಬಂದಿದೆ.

ಈ ವಿಚಾರಕ್ಕೆ ಸಂಬಂಧಿಸಿದಂತೆ ಕರ್ನಾಟಕ ಮತ್ತು ತಮಿಳುನಾಡು ಸರ್ಕಾರಗಳ ನಡುವೆ ಪತ್ರ ವ್ಯವಹಾರ ನಡೆದಿದ್ದರೂ, ಕರ್ನಾಟಕದ ಆಹ್ವಾನಕ್ಕೆ ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರಿಂದ ಈವರೆಗೆ ಯಾವುದೇ ಸ್ಪಷ್ಟ ಪ್ರತಿಕ್ರಿಯೆ ಬಂದಿಲ್ಲ ಎನ್ನಲಾಗಿದೆ. ಹೀಗಾಗಿ ಅವರು ಕರ್ನಾಟಕದ ಆಹ್ವಾನವನ್ನು ಸ್ವೀಕರಿಸುತ್ತಾರೆಯೇ ಎಂಬುದು ಕುತೂಹಲಕ್ಕೆ ಕಾರಣವಾಗಿದೆ. ಒಂದೊಮ್ಮೆ ವಿಜಯ್ ಅವರು ಮಾತುಕತೆಗೆ ಆಗಮಿಸಿದರೆ, ಕಾವೇರಿ ನೀರು ಹಂಚಿಕೆ, ಮೇಕೆದಾಟು ಯೋಜನೆ ಸೇರಿದಂತೆ ಉಭಯ ರಾಜ್ಯಗಳ ನಡುವೆ ದೀರ್ಘಕಾಲದಿಂದ ಇರುವ ಜಲ ವಿವಾದಗಳಿಗೆ ಪರಿಹಾರ ಕಂಡುಕೊಳ್ಳುವ ಕುರಿತು ಎರಡೂ ರಾಜ್ಯಗಳ ಮುಖ್ಯಮಂತ್ರಿಗಳು ಮಹತ್ವದ ಚರ್ಚೆ ನಡೆಸುವ ಸಾಧ್ಯತೆಯಿದೆ.

ಇನ್ನೊಂದೆಡೆ, ಕರ್ನಾಟಕದಲ್ಲಿ ಮಳೆಯ ಕೊರತೆಯಿಂದ ಬರ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ ತಮಿಳುನಾಡಿಗೆ ನೀರು ಹರಿಸದಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚನೆ ನೀಡಿದೆ ಎನ್ನಲಾಗಿದೆ. ಜುಲೈ 26ರ ಬಳಿಕ ಕರ್ನಾಟಕದಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂಬ ಮುನ್ಸೂಚನೆಯ ಹಿನ್ನೆಲೆಯಲ್ಲಿ ಪರಿಸ್ಥಿತಿಯನ್ನು ಗಮನಿಸಿ ಮುಂದಿನ ನಿರ್ಧಾರ ಕೈಗೊಳ್ಳಲು ಪ್ರಾಧಿಕಾರ ಮುಂದಾಗಿದೆ.



ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಸಗೋಡು ಜಯಸಿಂಹ ನೇತೃತ್ವದ ಪದಾಧಿಕಾರಿಗಳ ನಿಯೋಗವು ಗುರುವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ವಿಧಾನಸೌಧ ಕಚೇರಿಯಲ್ಲಿ ಗುರುವಾರ ಭೇಟಿಯಾಗಿ ಅಭಿನಂದನೆ ಸಲ್ಲಿಸಿತು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ವಿಪ್ರ ವಿಕಾಸ ಮತ್ತು 2026-27ರ ಕೈಪಿಡಿ ಬಿಡುಗಡೆ ಮಾಡಿದರು. ಪದಾಧಿಕಾರಿಗಳಾದ ದೀಪಶ್ರೀ ಕೆ.ಕಶ್ಯಪ್ ನಂದನ್, ಪಿ. ಶ್ರೀನಿವಾಸ ಮೂರ್ತಿ, ಸಿ.ಎನ್. ನಾಗೇಶ್ ಮತ್ತಿತರರು ಪಾಲ್ಗೊಂಡಿದ್ದರು.

## ಶಾಸಕರ ಮೇಲೆ ಹಲ್ಲೆ: ಕ್ರಮಕ್ಕೆ ಮನವಿ

ಬೆಂಗಳೂರು: ಕೆಪಿಸಿಸಿ ಕಚೇರಿ ಮುಂದೆ ನಿನ್ನೆ ಪ್ರತಿಭಟನೆ ನಡೆಸಿದ ಬಿಜೆಪಿ ಶಾಸಕರ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ ಕ್ರಮಕ್ಕೆ ಒತ್ತಾಯಿಸುವ ಮನವಿಯನ್ನು ಇಂದು ಬಿಜೆಪಿ ನಿಯೋಗವು ಮಾನ್ಯ ರಾಜ್ಯಪಾಲರಿಗೆ ಸಲ್ಲಿಸಿದೆ.



ಶಾಸಕರ ಮೇಲಿನ ಹಲ್ಲೆಯ ಸಂಬಂಧ ಜಾಮೀನುರಹಿತ ವಿವಿಧ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿ ತಕ್ಷಣ ಬಂಧಿಸುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಸೂಚಿಸುವಂತೆ ಕೋರಲಾಗಿದೆ. ಶಾಸಕರ ಪ್ರಾಣಕ್ಕೆ ಭದ್ರತೆ ನೀಡಲು ವಿಫಲರಾದ ಸ್ಥಳದಲ್ಲಿದ್ದ ಹಿರಿಯ ಪೊಲೀಸ್ ಅಧಿಕಾರಿಗಳ ವಿರುದ್ಧ ತನಿಖೆಗೆ ಆದೇಶಿಸಿ, ಅಮಾನತು ಮಾಡಲು ಸೂಚಿಸಬೇಕು. ವಿಪಕ್ಷ ನಾಯಕರ ಭದ್ರತೆ ಹೆಚ್ಚಿಸಲು ಸೂಚನೆ ನೀಡುವಂತೆ ಕೋರಲಾಗಿದೆ.

ಕರ್ನಾಟಕದಲ್ಲಿ ಕುಸಿದಿರುವ ಕಾನೂನು– ಸುವ್ಯವಸ್ಥೆ, ಸಂವಿಧಾನಾತ್ಮಕ ಬಿಕ್ಕಟ್ಟಿನ ಬಗ್ಗೆ ಭಾರತದ ಗೌರವಾನ್ವಿತ ರಾಷ್ಟ್ರಪತಿಗಳಿಗೆ ವಿಶೇಷ ವರದಿ ಸಲ್ಲಿಸುವಂತೆ ಮನವಿ ಮಾಡಲಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ವಿಪಕ್ಷ ನಾಯಕ ಆರ್.ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ತೆರಳಿದ ನಿಯೋಗವು ಈ ಮನವಿ ಸಲ್ಲಿಸಿತು.

## ‘ಸಿಎಸ್‌ಆರ್ ನಿಧಿಯ ಪ್ರತಿ ಪೈಸೆಯೂ ಗ್ರಾಮೀಣ ಪ್ರಾಥಮಿಕ ಶಿಕ್ಷಣಕ್ಕೆ ಬಳಕೆ’

ಬೆಂಗಳೂರು: ರಾಜ್ಯದಲ್ಲಿ ಲಭ್ಯವಿರುವ ಸುಮಾರು 10 ಸಾವಿರ ಕೋಟಿ ರೂ. ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ನಿಧಿಯ ಪ್ರತಿಯೊಂದು ಪೈಸೆಯನ್ನೂ ಗ್ರಾಮೀಣ ಭಾಗದ ಪ್ರಾಥಮಿಕ ಶಿಕ್ಷಣದ ಅಭಿವೃದ್ಧಿಗೆ ವಿನಿಯೋಗಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಕೆ.ಜಿ. ರಸ್ತೆಯಲ್ಲಿರುವ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಜಾಗತಿಕ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಮತ್ತು ಸುಸ್ಥಿರ ಅಭಿವೃದ್ಧಿ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು ಶಿಕ್ಷಣ ಕ್ಷೇತ್ರಕ್ಕೆ ಬಳಸುವ ಕುರಿತು ಈಗಾಗಲೇ ನಿರ್ಧಾರ ಕೈಗೊಂಡಿದೆ. ಕೆಲವು ಉದ್ಯಮಿಗಳು ತಮ್ಮ ಸಾಮಾಜಿಕ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿಭಾಯಿಸುತ್ತಿದ್ದರೂ, ಸುಮಾರು ಶೇ.50ರಷ್ಟು ಉದ್ಯಮಿಗಳು ಈ ನಿಧಿಯನ್ನು ಸಮರ್ಪಕವಾಗಿ ಬಳಸುತ್ತಿಲ್ಲ ಎಂಬ ದೂರುಗಳಿವೆ. ಹೀಗಾಗಿ ನಿಧಿ ಯಾವ ಕ್ಷೇತ್ರಗಳಲ್ಲಿ ಮತ್ತು ಯಾವ ಉದ್ದೇಶಗಳಿಗೆ ಬಳಕೆಯಾಗುತ್ತಿದೆ ಎಂಬುದನ್ನು ಪರಿಶೀಲಿಸಲು ಪ್ರತ್ಯೇಕ ಅಧಿಕಾರಿಗಳ ತಂಡ ರಚಿಸಲಾಗುವುದು ಎಂದು ತಿಳಿಸಿದರು.

ಗ್ರಾಮೀಣ ಭಾಗದ ಮಕ್ಕಳಿಗೂ ನಗರ ಪ್ರದೇಶದ ಮಕ್ಕಳಿಗೆ ದೊರೆಯುವ ಗುಣಮಟ್ಟದ ಶಿಕ್ಷಣ ಸಿಗಬೇಕು. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹೊಸ ನೀತಿ ರೂಪಿಸುತ್ತಿದ್ದು, ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು ಪ್ರಾಥಮಿಕ ಶಿಕ್ಷಣಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಬಳಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಸುಮಾರು 2 ಸಾವಿರ ಸ್ಥಳಗಳನ್ನು ಗುರುತಿಸಲಾಗಿದ್ದು, ಪ್ರತಿ ಸಾಂಸ್ಥಿಕ ಸಂಸ್ಥೆಯು ಈ ಸ್ಥಳಗಳಲ್ಲಿ ಉತ್ತಮ ಮೂಲಸೌಕರ್ಯ ಹೊಂದಿರುವ ಶಾಲೆಗಳನ್ನು ನಿರ್ಮಿಸಲು ಮುಂದಾಗಬೇಕು. ನಿರ್ಮಿಸಿ, ತಮ್ಮ ಸಂಸ್ಥೆಯ ಹೆಸರನ್ನು ಶಾಲೆಗೆ ನೀಡಬಹುದು. ಬೆಂಗಳೂರಿನಲ್ಲಿ ಟೊಯೋಟಾ ಸಂಸ್ಥೆಯು ಈಗಾಗಲೇ 7ರಿಂದ 8 ಶಾಲೆಗಳನ್ನು ನಿರ್ಮಿಸುತ್ತಿದ್ದು, ಪ್ರತಿ ಶಾಲೆಗೆ 10ರಿಂದ 15 ಕೋಟಿ ರೂ. ವೆಚ್ಚ ಮಾಡುತ್ತಿದೆ. ಜಿಲ್ಲಾಡಳಿತದ ಮೂಲಕ ಅಗತ್ಯ ಜಾಗ ಒದಗಿಸಲಾಗುವುದು. ಸಂಪೂರ್ಣ ಶಾಲೆ ನಿರ್ಮಿಸಲು ಸಾಧ್ಯವಾಗದ ಸಂಸ್ಥೆಗಳು ಶಾಲೆಯ ನಿರ್ದಿಷ್ಟ ಭಾಗದ ನಿರ್ಮಾಣಕ್ಕೆ ಸಹಕರಿಸಬಹುದು. ಇದಕ್ಕಾಗಿ ವಿಶೇಷ ವೇದಿಕೆ ರೂಪಿಸಲಾಗುವುದು ಎಂದು ಹೇಳಿದರು.

## ‘ಪ್ರಶ್ನೆ ಪತ್ರಿಕೆ ಸೋರಿಕೆ: ಕೇಂದ್ರ ಸರ್ಕಾರ ಯಾರನ್ನೂ ಕಾಪಾಡಬಾರದು’

ಬೆಂಗಳೂರು: ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಈಗ ಮಾತನಾಡುವ ಬದಲು ಆರಂಭದಲ್ಲೇ ಮಾತನಾಡಬೇಕಿತ್ತು. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಯಾರನ್ನೂ ಕಾಪಾಡುವ ಪ್ರಶ್ನೆಯೇ ಕೇಂದ್ರ ಸರ್ಕಾರದ ಮುಂದಿರಬಾರದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗ್ರಹಿಸಿದ್ದಾರೆ.

ಬೆಂಗಳೂರಿನ ಕೆ.ಜಿ. ರಸ್ತೆಯ ಬಳಿ ಗುರುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿಯವರ ಮಕ್ಕಳೂ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ದೇಶದ ಯುವಜನತೆಯ ಭವಿಷ್ಯ ಹಾಳಾಗುತ್ತಿದೆ.

ಈ ವೈಫಲ್ಯವನ್ನು ಬಿಜೆಪಿ ಒಪ್ಪಿಕೊಳ್ಳಬೇಕು. ಒಬ್ಬ ವ್ಯಕ್ತಿ ರಾಜೀನಾಮೆ ನೀಡುವುದರಿಂದ ಸಮಸ್ಯೆ ಬಗೆಹರಿಯುವುದಿಲ್ಲ. ಪ್ರಶ್ನೆ ಪತ್ರಿಕೆಗಳು ಸೋರಿಕೆಯಾದಾಗ ಇಂತಹ ಘಟನೆಗಳಿಗೆ ಯಾರಾದರೂ ಜವಾಬ್ದಾರಿ ಹೊರಬೇಕಲ್ಲವೇ? ಇದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು.



ಪ್ರಶ್ನೆ ಪತ್ರಿಕೆ ಸೋರಿಕೆ ಕುರಿತು ಸಂಸತ್ತಿನಲ್ಲಿ ಚರ್ಚೆಯಾಗಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲ ವಿಚಾರಗಳ ಬಗ್ಗೆಯೂ ಚರ್ಚೆ ನಡೆಯಬೇಕು. ಟೀಕೆಗಳು ಬಂದಾಗ ಅವುಗಳನ್ನು ಒಪ್ಪಿಕೊಂಡು ತಪ್ಪುಗಳನ್ನು ತಿದ್ದಿಕೊಳ್ಳಬೇಕು. ನಾವು ಯುವಕರ ಭವಿಷ್ಯದ ಬಗ್ಗೆ ಆಲೋಚಿಸಬೇಕಿದೆ. ಈಗಾಗಲೇ ದೇಶದಲ್ಲಿ ಸುಮಾರು 100ಕ್ಕೂ ಹೆಚ್ಚು ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗಿವೆ ಎಂದು ಹೇಳಿದರು.

ಪ್ರಶ್ನೆ ಪತ್ರಿಕೆ ಸೋರಿಕೆ ಯಾವುದೇ ರಾಜಕೀಯ ಪಕ್ಷಕ್ಕೆ ಸಂಬಂಧಿಸಿದ ವಿಚಾರವಲ್ಲ. ಇದು ದೇಶದ ಭವಿಷ್ಯಕ್ಕೆ ಸಂಬಂಧಿಸಿದ ಗಂಭೀರ ವಿಷಯವಾಗಿದೆ. ವಿದ್ಯಾರ್ಥಿಗಳಿಗೆ ಪಾರದರ್ಶಕ, ಶಕ್ತಿಯುತ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಮಾಡುವುದು ಎಲ್ಲರ ಜವಾಬ್ದಾರಿಯಾಗಿದೆ. ಯಾವುದೇ ಪರೀಕ್ಷೆ ನಡೆದರೂ ಅದು ಸಂಪೂರ್ಣ ಪಾರದರ್ಶಕವಾಗಿರಬೇಕು. ಇಡೀ ವಿಶ್ವವೇ ಭಾರತದ ಯುವಜನತೆಯ ಭವಿಷ್ಯದ ಬಗ್ಗೆ ಗಮನಹರಿಸಿದೆ. ನಮ್ಮ ದೇಶ ಪ್ರತಿಭಾವಂತರ ನಾಡಾಗಿದ್ದು, ಇಡೀ ಜಗತ್ತಿನಲ್ಲಿ ಭಾರತದಷ್ಟು ಪ್ರತಿಭಾವಂತರು ಎಲ್ಲಿಯೂ ಇಲ್ಲ ಎಂಬುದನ್ನು ಅನೇಕರು ಒಪ್ಪಿಕೊಂಡಿದ್ದಾರೆ. ಹೀಗಾಗಿ ಜಾಗತಿಕ ಮಟ್ಟದಲ್ಲಿ ದೇಶದ ಶಿಕ್ಷಣ ವ್ಯವಸ್ಥೆಯ ಗುಣಮಟ್ಟವನ್ನು ಕಾಪಾಡಿಕೊಳ್ಳಬೇಕಿದೆ ಎಂದು ಶಿವಕುಮಾರ್ ಹೇಳಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಭಟನೆ ನಡೆಸುವುದು ಪ್ರತಿಪಕ್ಷಗಳು, ಯುವಜನತೆ ಸೇರಿದಂತೆ ಪ್ರತಿಯೊಬ್ಬರ ಹಕ್ಕಾಗಿದೆ. ಆದರೆ ಪ್ರತಿಭಟನಾಕಾರರ ಮೇಲೆ ಲಾಠಿಚಾರ್ಜ್ ಮಾಡಿ ತೊಂದರೆ ನೀಡಲಾಗಿದೆ. ಮಾಧ್ಯಮಗಳ ಮೇಲೂ ನಿರ್ಬಂಧ ಹೇರಿ, ಧಮ್ಕಿ ನೀಡಿ ಸುದ್ದಿಗಳು ಪ್ರಸಾರವಾಗದಂತೆ ತಡೆಯಲಾಗಿದೆ ಎಂಬ ಆರೋಪಗಳಿವೆ.

ಅಲ್ಲಿದ್ದವರು ಚಿತ್ರೀಕರಿಸಿದ ದೃಶ್ಯಗಳು ಯೂಟ್ಯೂಬ್ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿವೆ.

ಮಾಧ್ಯಮಗಳು ಪ್ರಜಾಪ್ರಭುತ್ವದ ಪ್ರಮುಖ ಅಂಗವಾಗಿರುವಾಗ ಈ ಬಗ್ಗೆ ಪ್ರಶ್ನೆ ಮಾಡಬೇಕಿತ್ತು. ನೀವು ಏಕೆ ಪ್ರತಿಭಟನೆ ಮಾಡಲಿಲ್ಲ? ಪ್ರಶ್ನೆ ಮಾಡದಿರುವುದೂ ನಿಮ್ಮ ತಪ್ಪು. ಸಾಮಾಜಿಕ ಜಾಲತಾಣಗಳಲ್ಲಿ ದೃಶ್ಯಗಳು ಹರಿದಾಡಿದ ಬಳಿಕ ಮಾಧ್ಯಮಗಳು ವಿಷಯವನ್ನು ಕೈಗೆತ್ತಿಕೊಂಡಿವೆ. ಇದು ಹೊಸ ತಲೆಮಾರಿನ ಹೋರಾಟವಾಗಿದೆ ಎಂದು ಅವರು ಹೇಳಿದರು.

ನಾವೂ ಪ್ರಶ್ನೆ ಪತ್ರಿಕೆ ಸೋರಿಕೆ ವಿರುದ್ಧ ಪ್ರತಿಭಟನೆ ನಡೆಸಿದ್ದೇವೆ. ಆದರೆ ಮಂಗಳವಾರ ಕಾಂಗ್ರೆಸ್ ಕಚೇರಿ ಬಳಿ ಮೊಟ್ಟೆ ಹೊಡೆದಿರುವುದನ್ನು ಸರಿಯೆಂದು ಹೇಳುವುದಿಲ್ಲ. ಕಾನೂನಿನ ಪ್ರಕಾರ ಯಾವ ಕ್ರಮ ಕೈಗೊಳ್ಳಬೇಕು ಎಂಬುದನ್ನು ನಮ್ಮ ಗೃಹ ಸಚಿವರು ಈಗಾಗಲೇ ತಿಳಿಸಿದ್ದಾರೆ. ಬಿಜೆಪಿಯವರು ಹಿಂದೆ ಏನೇನು ಮಾಡಿದ್ದಾರೆ ಎಂಬುದನ್ನೂ ನೆನಪಿನಲ್ಲಿಟ್ಟುಕೊಳ್ಳಬೇಕು. ಲಾಠಿ, ಮಚ್ಚು ಹಾಗೂ ರೈಫಲ್‌ಗಳು ಪತ್ತೆಯಾಗಿದ್ದವು. ಪೊನ್ನಂಪೇಟೆಯ ಶಾಲಾ ಆವರಣದಲ್ಲಿ ರೈಫಲ್ ತರಬೇತಿ ನೀಡಲಾಗಿತ್ತು. ನಿಮ್ಮ ಇತಿಹಾಸವೂ ಇದೆ ಎಂದು ಶಿವಕುಮಾರ್ ತಿರುಗೇಟು ನೀಡಿದರು.

ರಾಜ್ಯದಲ್ಲಿ ಕೊತ್ವಾಲ್ ಆಡಳಿತ ನಡೆಯುತ್ತಿದೆ ಎಂಬ ಬಿಜೆಪಿ ಆರೋಪದ ಕುರಿತು ಪ್ರತಿಕ್ರಿಯಿಸಿದ ಅವರು, ಅವರ ಖುಷಿಗೆ ಏನು ಬೇಕಾದರೂ, ಹೇಗೆ ಬೇಕಾದರೂ ಮಾತನಾಡಿಕೊಳ್ಳಲಿ. ನಾನು ಈ ಸ್ಥಾನಕ್ಕೆ ಬರಲು ವಿದ್ಯಾರ್ಥಿ ನಾಯಕನಾಗಿ ಬೆಳೆದವನು. ಹಳ್ಳಿಯಲ್ಲಿ ಹುಟ್ಟಿದ ನಾನು ಪರಿಶುದ್ಧ ರಾಜಕಾರಣ ಹಾಗೂ ಆಡಳಿತ ನಡೆಸುತ್ತಿದ್ದೇನೆ. ಇದನ್ನು ಅವರಿಂದ ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದರೆ ನಾನೇನು ಮಾಡಲು ಸಾಧ್ಯವಿಲ್ಲ ಎಂದು ವ್ಯಂಗ್ಯವಾಡಿದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
24/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಸ್ಥಾನದ ಅಭ್ಯರ್ಥಿಯಾಗಿ ಜಾಣಗೆರೆ

ಬೆಂಗಳೂರು: ಮುಂಬರುವ ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಸ್ಥಾನದ ಅಭ್ಯರ್ಥಿಯಾಗಿ 'ಕನ್ನಡ ನಾಡು – ನುಡಿ ಜಾಗೃತ ಸಮಿತಿ'ಯ ಒಮ್ಮತದ ಅಭ್ಯರ್ಥಿಯಾಗಿ ಸಾಹಿತಿ, ಪತ್ರಕರ್ತ, ಕನ್ನಡಪರ ಹೋರಾಟಗಾರ ಜಾಣಗೆರೆ ವೆಂಕಟರಾಮಯ್ಯ ಆಯ್ಕೆಯಾಗಿದ್ದಾರೆ.

ಗುರುವಾರ ಬೆಂಗಳೂರಿನಲ್ಲಿ ನಡೆದ ಸಾಹಿತಿಗಳು, ಕನ್ನಡಪರ ಹೋರಾಟಗಾರರ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. 112 ವರ್ಷಗಳ ಕನ್ನಡ ಸಾಹಿತ್ಯ ಪರಿಷತ್ತು ಇವತ್ತು ಅತಂತ್ರವಾಗಿದೆ. ಭ್ರಷ್ಟಾಚಾರದ ಆಪಾದನೆಯಲ್ಲಿ ಅಧ್ಯಕ್ಷ ಸ್ಥಾನ ಹಾಗೂ ಪ್ರಾಥಮಿಕ ಸದಸ್ಯತ್ವ ಕಳೆದು ಕೊಂಡ ಮಹೇಶ ಜೋಶಿ ವಿರುದ್ಧ ಹೋರಾಡಿದ ಸದಸ್ಯರಲ್ಲಿ ಜಾಣಗೆರೆ ಪ್ರಮುಖ ಪತ್ರವಹಿಸಿದ್ದರು. ಕಸಾಪಕ್ಕೆ ಎರಡು ಅವಧಿಯಲ್ಲಿ ಅಧಿಕಾರಶಾಹಿಗಳಿಂದ ಸಾಕಷ್ಟು ಹಾನಿಯಾಗಿದ್ದು ಮುಂದೆಯೂ ಇದು ಪುನರುಕ್ತಿ ಆಗಬಾರದು. ಕಸಾಪದ ಪರಂಪರೆ, ಇತಿಹಾಸ, ಘನತೆ, ಗೌರವ ಕಾಪಾಡಲು ಸಾಹಿತಿಗಳು ಬದ್ಧರಾಗಿದ್ದಾರೆ ಎಂದು ಜಾಗೃತ ಸಮಿತಿ ತಿಳಿಸಿದೆ.



ಸಾಹಿತ್ಯ ಮತ್ತು ಪತ್ರಿಕೋದ್ಯಮ ಕ್ಷೇತ್ರಗಳೆರಡರಲ್ಲೂ ಬರವಣಿಗೆ ಕೃಷಿ ಮಾಡುತ್ತಾ ಬಂದಿರುವ ಜಾಣಗೆರೆಯವರು ಕತೆ, ಕಾದಂಬರಿ, ಇತಿಹಾಸ ಕಥನ, ಜೀವನ ಸಂಕಥನ, ಪ್ರವಾಸ ಕಥನ, ವಿಚಾರ ಮಂಥನ ಮುಂತಾದ ಪ್ರಕಾರಗಳಲ್ಲಿ ಕೃತಿಗಳನ್ನು ರಚಿಸಿದ್ದಾರೆ. ಈಗಾಗಲೇ ಸುಮಾರು 41 ಕೃತಿಗಳನ್ನು ಪ್ರಕಟಿಸಿದ್ದಾರೆ. ಪತ್ರಿಕೋದ್ಯಮ ಕ್ಷೇತ್ರದಲ್ಲೂ ಹೋರಾಟಗಳಲ್ಲಿಮಹತ್ವದ ಸಾಧನೆ ಮಾಡಿದ್ದಾರೆ. ಕನ್ನಡ ಪರ ದಶಕಗಳ ಕಾಲದಿಂದ ಸಕ್ರಿಯವಾಗಿದ್ದು ಅನೇಕ ಬಾರಿ ಸೆರೆವಾಸವನ್ನೂ ಅನುಭವಿಸಿದ್ದಾರೆ.

ಸಾಹಿತ್ಯ ಕೃಷಿಗಾಗಿ 2012ರಲ್ಲಿ ಕರ್ನಾಟಕ ಸರ್ಕಾರದಿಂದ 'ರಾಜ್ಯೋತ್ಸವ ಪ್ರಶಸ್ತಿ' ಸಂದಾಯವಾಗಿದೆ. ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ 'ಮಹಾನದಿ' ಮತ್ತು 'ಮಹಾಯಾನ' ಕೃತಿಗಳಿಗೆ ಉತ್ತಮ ಕಾದಂಬರಿ ಬಹುಮಾನಗಳು ಲಭಿಸಿವೆ. ಕನ್ನಡ ಪುಸ್ತಕ ಪ್ರಾಧಿಕಾರದಿಂದ 'ಜಿ.ಪಿ. ರಾಜರತ್ನಂ ಸಾಹಿತ್ಯ ಪರಿಚಾರಕ ಪ್ರಶಸ್ತಿ' ಬಂದಿದೆ. ಅದರ ಜೊತೆಗೆ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ 'ಗೌರವ ಪ್ರಶಸ್ತಿ' ಸಂದಿದೆ


ಪತ್ರಿಕೋದ್ಯಮ ಕೃಷಿಗಾಗಿ ಮೈಸೂರಿನ 'ಹೆಚ್.ಕೆ. ವೀರಣ್ಣಗೌಡ ಪತ್ರಿಕೋದ್ಯಮ ಪ್ರಶಸ್ತಿ', 'ಮಹಾನದಿ' ಕಾದಂಬರಿಗೆ ತುಮಕೂರಿನ 'ವೀಚಿ ಸಾಹಿತ್ಯ ಪ್ರಶಸ್ತಿ', 'ಜೀವಜಲ' ಕಾದಂಬರಿಗೆ ನಾಡೋಜ ಡಾ. ಬರಗೂರು ಪ್ರತಿಷ್ಠಾನದಿಂದ 'ಶ್ರೀಮತಿ ರಾಜಲಕ್ಷ್ಮಿ ಬರಗೂರು ಪುಸ್ತಕ ಪ್ರಶಸ್ತಿ', 'ಜಲಯುದ್ಧ' ಕಾದಂಬರಿಗೆ 'ಸ್ವಾಭಿಮಾನಿ ಪುಸ್ತಕ ಪ್ರಶಸ್ತಿ'ಗಳ ಜೊತೆಗೆ ಬೆಂಗಳೂರಿನ ಕನ್ನಡ ಜನಶಕ್ತಿ ಸಂಘಟನೆಯಿಂದ 'ಶಾಂತವೇರಿ ಗೋಪಾಲಗೌಡ ಪ್ರಶಸ್ತಿ', ಅರಸು ವಿಚಾರ ವೇದಿಕೆಯಿಂದ 'ಅರಸುಶ್ರೀ ಪ್ರಶಸ್ತಿ', ಕಟ್ಟೆ ಬಳಗದಿಂದ 'ಕನ್ನಡ ಕಟ್ಟೆ ಪ್ರಶಸ್ತಿ', ಮಂಡ್ಯದ 'ಇಂಡುವಾಳು ಹೆಚ್. ಹೊನ್ನಯ್ಯ ಸಮಾಜಸೇವಾ ಪ್ರಶಸ್ತಿ' ಮತ್ತು ಬಿಎಂಶ್ರೀ ಪ್ರತಿಷ್ಠಾನದಿಂದ 'ವಿ. ನಾಗರಾಜರಾವ್ ಸಮೂಹ ಮಾಧ್ಯಮ ಪ್ರಶಸ್ತಿ', ಕಸಾಪದಿಂದ 'ಫಾದರ್ ಚಸರಾ ಕನ್ನಡ ಸಂಸ್ಕೃತಿ ದತ್ತಿ ಪ್ರಶಸ್ತಿ', ಕರಾರಸಾಸಂ ಕನ್ನಡ ಕ್ರಿಯಾ ಸಮಿತಿಯಿಂದ 'ಕರ್ನಾಟಕ ಚೂಡಾಮಣಿ ಪ್ರಶಸ್ತಿ' ಹಾಗೂ ಕುವೆಂಪು ಕಲಾನಿಕೇತನದಿಂದ 'ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ' ಮುಂತಾದವು ಬಂದಿವೆ.

'ಮಾಯಾನಗರಿಯ ಮಹಾಶಿಲ್ಪಿ ಬೆಂಗಳೂರು ಕೆಂಪೇಗೌಡ' ಕೃತಿಯು ಹಲವು ಮುದ್ರಣಗಳನ್ನು ಕಂಡಿದ್ದಲ್ಲದೆ, ರೇಡಿಯೋ ರೂಪಕ ನಾಟಕವಾಗಿ ರಾಜ್ಯದ ಎಲ್ಲ ಬಾನುಲಿ ಕೇಂದ್ರಗಳಿಂದ 20 ಕಂತುಗಳಲ್ಲಿ ಪ್ರಸಾರವಾಗಿದೆ. ಇದೇ ಇತಿಹಾಸ ಕಥನವನ್ನು ಆಧರಿಸಿ 'ಕೆಂಪಾಂಬುಧಿ' ಹೆಸರಿನಲ್ಲಿ ಚಲನಚಿತ್ರ ನಿರ್ಮಾಣವಾಗುತ್ತಿದೆ.

# 'ವಿಂಡೋ ಸೀಟ್' ಸೀಸನ್ 2 ಮುಂದುವರಿಕೆ

ಬೆಂಗಳೂರು

ಇಂಡಿ–ಪಾಪ್ ಕಲಾವಿದೆ ಸಿಮ್ರನ್ ಚೌಧರಿ ಅವರನ್ನು ಒಳಗೊಂಡ ಸೀಸನ್ 2ರ ಮೊದಲ ಸಂಚಿಕೆಗೆ ದೊರೆತ ಯಶಸ್ವಿ ಪ್ರತಿಕ್ರಿಯೆಯ ಬಳಿಕ, ಫ್ಲಿಕ್ಸ್‌ಬಸ್ ಇಂಡಿಯಾ ತನ್ನ ಪ್ರಮುಖ ಸಂಗೀತ ವೇದಿಕೆಯಾದ 'ವಿಂಡೋ ಸೀಟ್'ನ ಎರಡನೇ ಸಂಚಿಕೆಯನ್ನು ಖ್ಯಾತ ತೆಲುಗು ಇಂಡಿ ಗಾಯಕಿ,




ಗೀತರಚನೆಗಾರ್ತಿ ಹಾಗೂ ಹಿನ್ನೆಲೆ ಗಾಯಕಿ ದಾಮಿನಿ ಭಟ್ಲಾ ಅವರೊಂದಿಗೆ ಬಿಡುಗಡೆ ಮಾಡಿದೆ. ಗ್ರ್ಯಾಮಿ ಪ್ರಶಸ್ತಿಯ ಮತದಾರ ಸದಸ್ಯೆಯಾಗಿ ಗುರುತಿಸಿಕೊಂಡಿರುವ ದಾಮಿನಿ, ಭಾರತದ ಸ್ವತಂತ್ರ ಸಂಗೀತ ಕ್ಷೇತ್ರದಲ್ಲಿ ವಿಶಿಷ್ಟ ಧ್ವನಿಯಾಗಿ ಗುರುತಿಸಿಕೊಂಡಿದ್ದು, ತಮ್ಮ ಸಂಗೀತದ ಮೂಲಕ ಹೃದಯಸ್ಪರ್ಶಿ ಕಥನಗಳು ಮತ್ತು ವೈಯಕ್ತಿಕ ಅನುಭವಗಳನ್ನು ಪರಿಣಾಮಕಾರಿಯಾಗಿ ಅಭಿವ್ಯಕ್ತಿಸುತ್ತಿದ್ದಾರೆ. ಸರಣಿಯ ಮೂಲ ಆಶಯಕ್ಕೆ ಅನುಗುಣವಾಗಿ ಈ ಸಂಚಿಕೆಯು ಸಂಗೀತ ಪ್ರದರ್ಶನವನ್ನು ಆತ್ಮೀಯ ಕಥನದ ಅನುಭವವಾಗಿ ರೂಪಿಸಿದ್ದು, ಸಂಗೀತ, ನೆನಪುಗಳು ಮತ್ತು ಅರ್ಥಪೂರ್ಣ ಮಾನವೀಯ ಬಾಂಧವ್ಯಗಳಿಗೆ ವಿಶೇಷ ಸ್ಥಾನ ನೀಡಿದೆ.

ಹೊಸ ಸಂಚಿಕೆಯಲ್ಲಿ ದಾಮಿನಿ ಅವರು ಪ್ರೀತಿ, ಆತ್ಮಚೇತನ ಮತ್ತು ಗುಣಮುಖತೆಯ ವಿಭಿನ್ನ ಆಯಾಮಗಳನ್ನು ಪ್ರತಿಬಿಂಬಿಸುವ ಮೂರು ವೈಯಕ್ತಿಕ ಹಾಡುಗಳನ್ನು ಪ್ರಸ್ತುತಪಡಿಸಿದ್ದಾರೆ. ಕಾರ್ಯಕ್ರಮವು ಇನ್ನೂ ಬಿಡುಗಡೆಯಾಗದ 'ಸೀತಾಕಾಲಂ' ಹಾಡಿನ ವಿಶೇಷ ಪ್ರಥಮ ಪ್ರದರ್ಶನದೊಂದಿಗೆ ಆರಂಭವಾಗುತ್ತದೆ. ಪ್ರೇಮವಿಯೋಗದ ನಂತರದ ಭಾವನಾತ್ಮಕ ಪಯಣವನ್ನು ಸೂಕ್ಷ್ಮವಾಗಿ ಚಿತ್ರಿಸುವ ಈ ಹಾಡು ಪ್ರೇಕ್ಷಕರಿಗೆ ಮನಮುಟ್ಟುವ ಅನುಭವ ನೀಡುತ್ತದೆ. ಸಂಚಿಕೆಯ ಭಾವನಾತ್ಮಕ ಆಳವನ್ನು ಮತ್ತಷ್ಟು ಹೆಚ್ಚಿಸುವ ವಿಶೇಷ ಅಂಶವೆಂದರೆ.

# ದಕ್ಷಿಣ ಭಾರತದಲ್ಲಿ ಅಸ್ತಿತ್ವ ಬಲಪಡಿಸಲು ಕ್ಯಾಪ್ರಿ ಲೋನ್ಸ್ ಹೆಜ್ಜೆ

ಬೆಂಗಳೂರು

ಕ್ಯಾಪ್ರಿ ಲೋನ್ಸ್ ಬ್ರ್ಯಾಂಡ್ ಹೆಸರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಮುಖ ಬ್ಯಾಂಕಿಂಗೇತರ ಹಣಕಾಸು ಸಂಸ್ಥೆ ಕ್ಯಾಪ್ರಿ ಗ್ಲೋಬಲ್ ಕ್ಯಾಪಿಟಲ್ ಲಿಮಿಟೆಡ್ (ಸಿಜಿಸಿಎಲ್), ದಕ್ಷಿಣ ಭಾರತದಲ್ಲಿ ತನ್ನ ಅಸ್ತಿತ್ವವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಜನಪ್ರಿಯ ನಟಿ ಹಾಗೂ ಉದ್ಯಮಿ ನಯನತಾರಾ ಅವರನ್ನು ಬ್ರ್ಯಾಂಡ್ ಅಂಬಾಸಿಡರ್ ಆಗಿ ನೇಮಕ ಮಾಡಿದೆ.

ಈಗಾಗಲೇ ಬ್ರ್ಯಾಂಡ್‌ನೊಂದಿಗೆ ಗುರುತಿಸಿಕೊಂಡಿರುವ ಖ್ಯಾತ ನಟ ಪಂಕಜ್ ತ್ರಿಪಾಠಿ ಅವರೊಂದಿಗೆ ನಯನತಾರಾ ಕೂಡ ಕ್ಯಾಪ್ರಿ ಲೋನ್ಸ್‌ನ ಬ್ರ್ಯಾಂಡ್ ಅಂಬಾಸಿಡರ್ ಆಗಿ ಕಾರ್ಯನಿರ್ವಹಿಸಲಿದ್ದಾರೆ. ಈ ಸಹಯೋಗದ ಮೂಲಕ ದೇಶದ ವಿವಿಧ ಭಾಗಗಳ ಜನರೊಂದಿಗೆ ಬಲವಾದ ಮತ್ತು ನಿಕಟವಾದ ಬಾಂಧವ್ಯ ಬೆಳೆಸಿಕೊಳ್ಳುವ ಕ್ಯಾಪ್ರಿ ಲೋನ್ಸ್‌ನ ಬದ್ಧತೆ ಮತ್ತಷ್ಟು ಗಟ್ಟಿಯಾಗಲಿದೆ ಎಂದು ಸಂಸ್ಥೆ ತಿಳಿಸಿದೆ.




ದೇಶದ ವಿವಿಧ ಗ್ರಾಹಕ ವರ್ಗಗಳೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿಕೊಳ್ಳುವ ಸಂಸ್ಥೆಯ ದೂರದೃಷ್ಟಿಗೆ ನಯನತಾರಾ ಮತ್ತು ಪಂಕಜ್ ತ್ರಿಪಾಠಿ ಅವರ ಸಹಯೋಗ ಮತ್ತಷ್ಟು ಬಲ ನೀಡಲಿದೆ. ಈ ಸಹಭಾಗಿತ್ವವು ಕ್ಯಾಪ್ರಿ ಲೋನ್ಸ್‌ನ ಬ್ರ್ಯಾಂಡ್ ಪಯಣದಲ್ಲಿ ಪ್ರಮುಖ ಮೈಲಿಗಲ್ಲಾಗಿದ್ದು, ನಂಬಿಕಸ್ಥ, ಎಲ್ಲರನ್ನೂ ಒಳಗೊಂಡ ಹಾಗೂ ಸ್ಥಳೀಯ ಮಟ್ಟದಲ್ಲಿ ಜನರನ್ನು ತಲುಪುವ ಹಣಕಾಸು ಸೇವಾ ಬ್ರ್ಯಾಂಡ್ ನಿರ್ಮಿಸುವ ಸಂಸ್ಥೆಯ ಬದ್ಧತೆಯನ್ನು ಮತ್ತಷ್ಟು ಬಲಪಡಿಸಲಿದೆ.

ಈ ಕುರಿತು ಮಾತನಾಡಿದ ಕ್ಯಾಪ್ರಿ ಗ್ಲೋಬಲ್ ಕ್ಯಾಪಿಟಲ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಶರ್ಮಾ, "ಕ್ಯಾಪ್ರಿ ಲೋನ್ಸ್‌ನಲ್ಲಿ ಪ್ರತಿಯೊಂದು ಹಣಕಾಸಿನ ಪಯಣವೂ ನಂಬಿಕೆಯಿಂದಲೇ ಆರಂಭವಾಗುತ್ತದೆ ಎಂದು ನಾವು ಸದಾ ನಂಬಿದ್ದೇವೆ.

ದೇಶದಾದ್ಯಂತ ನಮ್ಮ ಸಂಸ್ಥೆ ಬೆಳೆಯುತ್ತಿರುವ ಸಂದರ್ಭದಲ್ಲಿ, ನಮ್ಮ ಗಮನ ಕೇವಲ ವಿಸ್ತರಣೆಯ ಮೇಲಷ್ಟೇ ಸೀಮಿತವಾಗಿಲ್ಲ. ಜನರೊಂದಿಗೆ ಅರ್ಥಪೂರ್ಣ ಸಂಬಂಧಗಳನ್ನು ಬೆಳೆಸಿಕೊಳ್ಳುವುದು ಮತ್ತು ಅವರ ಆಕಾಂಕ್ಷೆಗಳನ್ನು ಈಡೇರಿಸುವಲ್ಲಿ ನಂಬಿಕಸ್ಥ ಪಾಲುದಾರರಾ ಗುವುದು ನಮ್ಮ ಪ್ರಮುಖ ಉದ್ದೇಶವಾಗಿದೆ" ಎಂದು ಹೇಳಿದ್ದಾರೆ.

# ಎಸ್‌ಐಟಿ ತನಿಖೆ ಸ್ವಾಗತಿಸಿದ ಸಮತಾ ಸೈನಿಕ ದಳ

ಬೆಂಗಳೂರು: ಕನಕಪುರ ಮುಖ್ಯರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಆಶ್ರಮದ ವಿರುದ್ಧ ಸರ್ಕಾರಿ ಭೂಮಿ, ಗೋಮಾಳ, ಕೆರೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸೇರಿದ ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಆರೋಪಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡ ರಚಿಸಿರುವ ಕ್ರಮವನ್ನು ಸಮತಾ ಸೈನಿಕ ದಳ ಸ್ವಾಗತಿಸಿದೆ.




ನಗರದ ಫಸ್ಟ್ ಕ್ಲಬ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಮತಾ ಸೈನಿಕ ದಳದ ರಾಜ್ಯ ಕಾರ್ಯಾಧ್ಯಕ್ಷ ಡಾ. ಜಿ. ಗೋವಿಂದಯ್ಯ, ಸರ್ವೆ ನಂಬರ್ 46 ಮತ್ತು 133ರಲ್ಲಿ ಸರ್ಕಾರಿ ಗೋಮಾಳ, ಕೆರೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯಗಳಿಗೆ ಸೇರಿದ ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಆರೋಪದ ಕುರಿತು ತಮ್ಮ ಸಂಘಟನೆ ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿದೆ. ಇದೀಗ ಸರ್ಕಾರ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ವಿಶೇಷ ತನಿಖಾ ತಂಡ ರಚಿಸಿರುವುದು ಸ್ವಾಗತಾರ್ಹ ಬೆಳವಣಿಗೆ ಎಂದು ಹೇಳಿದರು.

ವಿಶೇಷ ತನಿಖಾ ತಂಡದ ತನಿಖೆ ಯಾವುದೇ ಒತ್ತಡಕ್ಕೆ ಮಣಿಯದೆ ನಿಷ್ಪಕ್ಷಪಾತವಾಗಿ ನಡೆಯಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸೇರಿದ ಭೂಮಿಯನ್ನು ಪಿಟಿಸಿಎಲ್ ಕಾಯ್ದೆಯಡಿ ಮೂಲ ಮಾಲೀಕರಿಗೆ ಮರಳಿಸಬೇಕು.

ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಕೆರೆ, ಗೋಮಾಳ ಮತ್ತು ಸರ್ಕಾರಿ ಭೂಮಿಯನ್ನು ಕೂಡಲೇ ಸರ್ಕಾರದ ವಶಕ್ಕೆ ಪಡೆಯಬೇಕು ಎಂದು ಅವರು ಆಗ್ರಹಿಸಿದರು.

ವಿಶೇಷ ತನಿಖಾ ತಂಡದ ತನಿಖೆಯನ್ನು 90 ದಿನಗಳೊಳಗೆ ಪೂರ್ಣಗೊಳಿಸಬೇಕು, ಅಕ್ರಮ ಒತ್ತುವರಿಯಲ್ಲಿರುವ ಭೂಮಿಯನ್ನು ತಕ್ಷಣ ಜಪ್ತಿ ಮಾಡಬೇಕು ಹಾಗೂ ವಿದ್ಯಾದಾನದ ಹೆಸರಿನಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮ ಹಣ ವಸೂಲಿಗೆ ಕಡಿವಾಣ ಹಾಕಬೇಕು ಎಂದು ಸಂಘಟನೆ ಸರ್ಕಾರವನ್ನು ಒತ್ತಾಯಿಸಿತು. ತಮ್ಮ ಬೇಡಿಕೆಗಳು ಈಡೇರುವವರೆಗೆ ಜುಲೈ 17ರಿಂದ ಆರಂಭಿಸಿರುವ ಅನಿರ್ದಿಷ್ಟಾವಧಿ ಧರಣಿಯನ್ನು ಮುಂದುವರಿಸುವುದಾಗಿ ಸಮತಾ ಸೈನಿಕ ದಳದ ಮುಖಂಡರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಮತಾ ಸೈನಿಕ ದಳದ ರಾಜ್ಯ ಚಳುವಳಿ ಮುಖಂಡರಾದ ನಾಗೇಶ್, ಅರ್ಜುನ್, ಗೋಪಾಲಯ್ಯ, ವೆಂಕಟರಮಣಪ್ಪ, ಡಾ. ಚಂದ್ರಶೇಖರ್, ಜಿ.ಕೆ. ಗೋಪಾಲ್, ಕೆಂಚಯ್ಯ, ಪರಮೇಶ್ವರ್ ಎಂ. ಸೇರಿದಂತೆ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಯುವ ಸಂಗ್ರಾಮದಿಂದ ಮೋದಿ ಸರ್ಕಾರ ಪತನ ಸನ್ನಿಹಿತ

ಬೆಂಗಳೂರು: ದೇಶದ ಅಂತಃಸತ್ವವನ್ನು ಕಲಕಿರುವ ಜಂತರ್ ಮಂತರ್ ಪ್ರತಿಭಟನೆ ಸ್ವಾತಂತ್ರ್ಯ ಸಂಗ್ರಾಮದ ನಂತರ ಅತಿದೊಡ್ಡ ಯುವ ಸಂಗ್ರಾಮವಾಗಿದ್ದು, ಈ ಹೋರಾಟದ ಮೂಲಕ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ವಾಧಿಕಾರಿ ಆಡಳಿತ ಕೊನೆಗೊಳ್ಳುವ ಕಾಲ ಸನ್ನಿಹಿತವಾಗಿದೆ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ಹೇಳಿದ್ದಾರೆ.

ಕೇಂದ್ರ ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು ಕೇಂದ್ರ ಗೃಹ ಸಚಿವ ಅಮಿತ್ ಶಾ, ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಪಡೆಯದಿದ್ದರೆ ಯುವ ಸಂಗ್ರಾಮ ಮತ್ತಷ್ಟು ಪ್ರಕೋಪಕ್ಕೆ ತಲುಪಲಿದೆ. ಹೋರಾಟದ ಕಿಚ್ಚಿಗೆ ಸರ್ವಾಧಿಕಾರಿಗಳೆಲ್ಲಾ ಭಸ್ಮವಾಗಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಡಾ. ಆನಂದ ಕುಮಾರ್, ಆಗ ವಿದ್ಯಾರ್ಥಿಗಳ ಪಾಲಿಗೆ ವಿದ್ಯಾರ್ಥಿ ನಾಯಕರಾಗಿದ್ದ ಧರ್ಮೇಂದ್ರ ಪ್ರಧಾನ್, ಈಗ ಖಳನಾಯಕರಾಗಿದ್ದಾರೆ. ಪ್ರಧಾನ್ ಶಿಕ್ಷಣ ಸಚಿವರಾಗುತ್ತಿದ್ದಂತೆ ಪಠ್ಯಕ್ರಮ, ಬೋಧನಾ ವಿಧಾನ, ಕುಲಪತಿಗಳ ಆಯ್ಕೆ ಎಲ್ಲವೂ ಕೇಸರಿಮಯವಾಯಿತು. 2024ರಲ್ಲಿ ನೀಟ್ ಪ್ರಶ್ನೆಪರೀಕ್ಷೆ ಸೋರಿಕೆಯಾಗಿ ದೇಶದಾದ್ಯಂತ ಸುದ್ದಿಯಾಯಿತು. 2026ರಲ್ಲಿ ಮತ್ತೊಮ್ಮೆ ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯಾಗಿ ಹದಿನೇಳು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಳ್ಳುವಂತಾಯಿತು. ದೇಶದ ಶಕ್ತಿ ಎಂದು ಬಣ್ಣಿಸುವ ಯುವಜನತೆಯ ಭವಿಷ್ಯಕ್ಕೇ ಕತ್ತಲು ಆವರಿಸಿತು. ಆದರೆ ಮೋದಿ ಸರ್ಕಾರ ಧರ್ಮೇಂದ್ರ ಪ್ರಧಾನ್ ಅವರನ್ನು ಎಲ್ಲಾ ಹಂತದಲ್ಲೂ ರಕ್ಷಿಸುತ್ತಿದೆ ಎಂದು ಆರೋಪಿಸಿದ್ದಾರೆ.



ವಿದ್ಯಾರ್ಥಿಗಳಿಗೆ ಲಾಠಿ, ಭೂಟಿನೇಟು ಬೀಳಲು ಕೇಂದ್ರ ಸಚಿವ ಅಮಿತ್ ಶಾ ಅವರೇ ನೇರ ಕಾರಣ. ದೇಶದ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಹಲವು ಭಾರಿ ಸೋತಿರುವ ಅಮಿತ್ ಶಾ ಸಚಿವರಾಗಿ ಮುಂದುವರೆಯುವ ನೈತಿಕತೆ ಕಳೆದುಕೊಂಡಿದ್ದಾರೆ. ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ನಡೆದ ಹಿಂಸಾಚಾರಕ್ಕೆ ಅಮಿತ್ ಶಾ ನೇರ ಖಾರಣವಾಗಿದ್ದು, ಇದು ಖಂಡನೀಯ. ವಿದ್ಯಾರ್ಥಿಗಳ ಹೋರಾಟಕ್ಕೆ ಎದೆಗೆ ಎದೆಗೊಟ್ಟು ಪ್ರಧಾನಿ ಮನೆ ಮುಂದೆ ಪ್ರತಿಭಟನೆ ನಡೆಸಿದ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಅಧಿನಾಯಕ ಪ್ರಿಯಾಂಕ ಗಾಂಧಿ ಯುವ ಸಮೂಹಕ್ಕೆ ಬೆಂಬಲವಾಗಿದ್ದಾರೆ. ಸದನದ ಒಳಗೆ, ಸದನದ ಹೊರಗಡೆ ವಿದ್ಯಾರ್ಥಿ ಹೋರಾಟಕ್ಕೆ ಧೀಶಕ್ತಿಯಾಗಿ ಹೊರ ಹೊಮ್ಮಿದ್ದಾರೆ.

ವಿದ್ಯಾರ್ಥಿಗಳು ಪ್ರತಿಭಟನೆ ಮಾಡುತ್ತಿರುವ ಕಾರಣಗಳೇ ದೇಶದ ಭವಿಷ್ಯವನ್ನು ನಿರ್ಧರಿಸುತ್ತದೆ. ವಿದ್ಯಾರ್ಥಿಗಳ ಮಾತುಗಳನ್ನು ಕಿವಿಗೊಟ್ಟು ಕೇಳಿ, ಗ್ರಹಿಸುವ ತಾಳ್ಮೆ ಸರ್ಕಾರಕ್ಕೆ ಇಲ್ಲವಾಗಿರುವುದು ದುರಂತ. ಪ್ರತಿಭಟನೆಗಳನ್ನು ಶಾಂತಿಯುತವಾಗಿ ಮತ್ತು ನಿಯಮಾನುಸಾರ ನಡೆಸಲು ಅನುಕೂಲಕರ ಪರಿಸ್ಥಿತಿಯನ್ನು ಸೃಷ್ಟಿಸುವುದು ಸರ್ಕಾರದ ಕರ್ತವ್ಯ ಮತ್ತು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಸಮಸ್ಯೆಗಳಿಗೆ ದೀರ್ಘಕಾಲದ ಪರಿಹಾರ ಒದಗಿಸಬೇಕು. ಹಿಂಸೆಯ ಮೂಲಕ ಬದಲಾವಣೆ ಸಾಧ್ಯವಿಲ್ಲ ಎಂಬುದನ್ನು ಮನಗಾಣಬೇಕು ಎಂದಿದ್ದಾರೆ.

ಈ ಹೋರಾಟದಲ್ಲಿ ವಿದ್ಯಾರ್ಥಿಗಳ ಭದ್ರತೆಗಾಗಿ ತಕ್ಷಣ ಕ್ರಮಗಳನ್ನು ತೆಗೆದುಕೊಳ್ಳಬೇಕು. ಶಾಂತಿಯುತ ಹೋರಾಟಕ್ಕೆ ಸೂಕ್ತ ವೇದಿಕೆ ನಿರ್ಮಿಸಬೇಕು. ಕೇಂದ್ರದ ಯುವ ಶಕ್ತಿ ವಿರೋಧಿ ಧೋರಣೆಗೆ ಜಗತ್ತಿನಾದ್ಯಂತ ಭಾರೀ ವಿರೋಧ ವ್ಯಕ್ತವಾಗುತ್ತಿದ್ದು, ಈ ಹೋರಾಟ ಜ್ವಾಲಾಮುಖಿ ಸ್ವರೂಪ ಪಡೆಯಲಿದೆ. ಹಾಗಾಗಿ ಈಗಲೇ ಎಚ್ಚೆತ್ತುಕೊಂಡು ಧರ್ಮೇಂದ್ರ ಪ್ರಧಾನ್, ಅಮಿತ್ ಶಾ ರಾಜೀನಾಮೆ ಪಡೆಯದಿದ್ದರೆ ಪ್ರಧಾನಿ ನರೇಂದ್ರ ಮೋದಿ ಅವರ ಖುರ್ಚಿಗೆ ಕುತ್ತು ಬರಲಿದೆ ಎಂದು ಡಾ. ಆನಂದ ಕುಮಾರ್ ಎಚ್ಚರಿಕೆ ನೀಡಿದ್ದಾರೆ.

# ಬೆಂಗಳೂರಿನಲ್ಲಿ 10 ಪಟ್ಟು ವಿಸರಣೆಗೆ ಬರ್ಗರ್‌ಸಿಂಗ್ ಸಜ್ಜು

ಬೆಂಗಳೂರು




ಭಾರತದ ಪ್ರಮುಖ ಸ್ವದೇಶಿ ಬರ್ಗರ್ ಸರಣಿಗಳಲ್ಲಿ ಒಂದಾಗಿರುವ ಬರ್ಗರ್ ಸಿಂಗ್, ಬೆಂಗಳೂರಿನಲ್ಲಿ ತನ್ನ ವ್ಯವಹಾರವನ್ನು 10 ಪಟ್ಟು ವಿಸ್ತರಿಸುವ ಮಹತ್ವಾಕಾಂಕ್ಷೆಯ ಯೋಜನೆಯನ್ನು ಘೋಷಿಸಿದೆ. ಸದ್ಯ ನಗರದಲ್ಲಿ 8 ಮಳಿಗೆಗಳನ್ನು ನಡೆಸುತ್ತಿರುವ ಸಂಸ್ಥೆ, ನಿರ್ಮಾಣ ಕಾರ್ಯದ ಅಂತಿಮ ಹಂತದಲ್ಲಿರುವ 5 ಹೊಸ ಮಳಿಗೆಗಳನ್ನು ಶೀಘ್ರದಲ್ಲೇ ಆರಂಭಿಸಲು ಸಿದ್ಧತೆ ನಡೆಸಿದೆ.

ಬೆಂಗಳೂರಿನಲ್ಲಿ ಒಟ್ಟು 80 ಮಳಿಗೆಗಳನ್ನು ಸ್ಥಾಪಿಸುವ ಗುರಿಯನ್ನು ಹೊಂದಿರುವ ಸಂಸ್ಥೆ, ಇದರ ಜೊತೆಗೆ ಕರ್ನಾಟಕದಾದ್ಯಂತ ಮತ್ತಷ್ಟು 100 ಹೊಸ ಮಳಿಗೆಗಳನ್ನು ತೆರೆಯಲು ಯೋಜನೆ ರೂಪಿಸಿದೆ. ಈ ಮೂಲಕ ದೇಶದ ಯಾವುದೇ ನಗರದಲ್ಲಿ ಸಂಸ್ಥೆ ಕೈಗೊಂಡಿರುವ ಅತ್ಯಂತ ವೇಗದ ವಿಸ್ತರಣೆಯಾಗಿ ಇದು ಗುರುತಿಸಿಕೊಳ್ಳಲಿದೆ.

ಪ್ರಸ್ತುತ ಬರ್ಗರ್ ಸಿಂಗ್ ದೇಶದ 100ಕ್ಕೂ ಅಧಿಕ ನಗರಗಳಲ್ಲಿ 200ಕ್ಕೂ ಹೆಚ್ಚು ಮಳಿಗೆಗಳನ್ನು ಹೊಂದಿದೆ. ಭಾರತೀಯ ಗ್ರಾಹಕರ ರುಚಿಗೆ ಅನುಗುಣವಾಗಿ ರೂಪಿಸಲಾದ ಬರ್ಗರ್‌ಗಳನ್ನು ಕೈಗೆಟುಕುವ ದರದಲ್ಲಿ ಒದಗಿಸುವ ಮೂಲಕ ಸಂಸ್ಥೆ ದೇಶದ ಆಹಾರ ಉದ್ಯಮದಲ್ಲಿ ತನ್ನದೇ ಆದ ಸ್ಥಾನವನ್ನು ನಿರ್ಮಿಸಿಕೊಂಡಿದೆ. ಸ್ಥಳೀಯ ರುಚಿ ಮತ್ತು ಕೈಗೆಟುಕುವ ಬೆಲೆಯ ಸಂಯೋಜನೆಯು ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯಲು ಪ್ರಮುಖ ಕಾರಣವಾಗಿದೆ.

ಇತರ ನಗರಗಳಿಗೆ ಹೋಲಿಸಿದರೆ ಬೆಂಗಳೂರಿನಲ್ಲಿ ಸಂಸ್ಥೆಯು ಅತ್ಯಂತ ವೇಗದ ಬೆಳವಣಿಗೆಯನ್ನು ದಾಖಲಿಸಿದೆ ಎಂದು ಬರ್ಗರ್ ಸಿಂಗ್ ತಿಳಿಸಿದೆ. ಈ ಹಿನ್ನೆಲೆಯಲ್ಲಿ ನಗರದಲ್ಲಿ ತನ್ನ ವಿಸ್ತರಣೆಯ ವೇಗವನ್ನು ಮತ್ತಷ್ಟು ಹೆಚ್ಚಿಸಲು ನಿರ್ಧರಿಸಲಾಗಿದೆ. ಈಗಾಗಲೇ 8 ಮಳಿಗೆಗಳು ಕಾರ್ಯನಿರ್ವಹಿಸುತ್ತಿದ್ದು, ನಿರ್ಮಾಣದ ಅಂತಿಮ ಹಂತದಲ್ಲಿರುವ 5 ಹೊಸ ಮಳಿಗೆಗಳು ಶೀಘ್ರದಲ್ಲೇ ಗ್ರಾಹಕರ ಸೇವೆಗೆ ಲಭ್ಯವಾಗಲಿವೆ. ಮುಂದಿನ ಹಂತದಲ್ಲಿ ನಗರದ ವಿವಿಧ ಭಾಗಗಳಲ್ಲಿ ತನ್ನ ವ್ಯಾಪ್ತಿಯನ್ನು ವಿಸ್ತರಿಸುವ ಮೂಲಕ ಒಟ್ಟು 80 ಮಳಿಗೆಗಳನ್ನು ಸ್ಥಾಪಿಸುವ ಗುರಿಯನ್ನು ಸಂಸ್ಥೆ ಹೊಂದಿದೆ.

# ಕುಶಾಲ್ಸ್‌ನ '9 ಟು ಶೈನ್' ವರ್ಕ್‌ವೇರ್ ಆಭರಣ ಸಂಗ್ರಹ

ಬೆಂಗಳೂರು

ಸಭೆಗಳು, ಕಾಫಿ ವಿರಾಮಗಳು, ಗ್ರಾಹಕರ ಪ್ರಸ್ತುತಿಗಳು, ವಿಚಾರ ಸಂಕಿರಣಗಳು ಹಾಗೂ ಕಚೇರಿ ನಂತರದ ಕಾರ್ಯಕ್ರಮಗಳು ಸೇರಿದಂತೆ ವೃತ್ತಿಪರ ಮಹಿಳೆಯರ ದಿನನಿತ್ಯದ ಪ್ರತಿಯೊಂದು ಸಂದರ್ಭಕ್ಕೂ ಹೊಂದುವಂತಹ ಆಭರಣಗಳ ಅಗತ್ಯವನ್ನು ಮನಗಂಡಿರುವ ಭಾರತದ ಪ್ರಮುಖ ಫ್ಯಾಷನ್ ಆಭರಣ ಬ್ರ್ಯಾಂಡ್ ಕುಶಾಲ್ಸ್ ಫ್ಯಾಷನ್ ಜ್ಯುವೆಲ್ಲರಿ, ತನ್ನ ಹೊಸ '9 ಟು ಶೈನ್' ವರ್ಕ್‌ವೇರ್ ಆಭರಣ ಸಂಗ್ರಹವನ್ನು ಪರಿಚಯಿಸಿದೆ. ಈ ಅಭಿಯಾನದ ವಿಶೇಷತೆಯೆಂದರೆ, ತಮ್ಮ ಆಭರಣಗಳಷ್ಟೇ ಸಹಜವಾಗಿ ಆತ್ಮವಿಶ್ವಾಸವನ್ನೂ ಧರಿಸುವ ನೈಜ ವೃತ್ತಿಪರ ಮಹಿಳೆಯರನ್ನು ಒಳಗೊಂಡಿರುವುದು.




ವಾಸ್ತವಿಕತೆಯನ್ನು ಕೇಂದ್ರವಾಗಿಟ್ಟುಕೊಂಡು ರೂಪಿಸಲಾಗಿರುವ ಈ ಅಭಿಯಾನದಲ್ಲಿ ಉದ್ಯಮಿಗಳು, ಮಾನವ ಸಂಪನ್ಮೂಲ ವೃತ್ತಿಪರರು, ವೈದ್ಯಕೀಯ ಸಂಶೋಧಕರು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳೆಯರು ಭಾಗಿಯಾಗಿದ್ದಾರೆ. ಪ್ರತಿಯೊಬ್ಬರೂ ತಮ್ಮದೇ ಆದ ಕಥೆ, ವ್ಯಕ್ತಿತ್ವ ಮತ್ತು ವಿಶಿಷ್ಟ ಶೈಲಿಯನ್ನು ಅಭಿಯಾನದ ಮೂಲಕ ವ್ಯಕ್ತಪಡಿಸುತ್ತಿದ್ದು, ಆಭರಣಗಳು ಕೇವಲ ವಿಶೇಷ ಸಂದರ್ಭಗಳಿಗೆ ಸೀಮಿತವಾಗಿರದೆ, ಇಂದಿನ ವೃತ್ತಿಪರ ಮಹಿಳೆಯರ ದೈನಂದಿನ ವ್ಯಕ್ತಿತ್ವದ ಅವಿಭಾಜ್ಯ ಭಾಗವಾಗಿವೆ ಎಂಬ ಸಂದೇಶವನ್ನು ಸಾರಲಾಗಿದೆ.

ಪ್ರತಿದಿನದ ಮನಸ್ಥಿತಿ ಮತ್ತು ಉಡುಗೆ ಶೈಲಿಗೆ ಹೊಂದಿಕೊಳ್ಳುವಂತೆ ವಿನ್ಯಾಸಗೊಳಿಸಲಾಗಿರುವ '9 ಟು ಶೈನ್' ಸಂಗ್ರಹವು ಇಂದಿನ ಮಹಿಳೆಯರು ಆಭರಣಗಳನ್ನು ಧರಿಸುವ ವೈವಿಧ್ಯಮಯ ಶೈಲಿಗಳನ್ನು ಸಂಭ್ರಮಿಸುತ್ತದೆ. ಕೆಲವು ದಿನಗಳಲ್ಲಿ ಪವರ್ ಸೂಟ್‌ಗಳು ಆದ್ಯತೆಯಾಗಿದ್ದರೆ, ಇನ್ನು ಕೆಲವು ದಿನಗಳಲ್ಲಿ ಸಾಂಪ್ರದಾಯಿಕ ಉಡುಪುಗಳು, ಹೊಂದಾಣಿಕೆಯ ಉಡುಗೆಗಳ ಸಮೂಹ ಅಥವಾ ಸರಳ ಡೆನಿಮ್‌ಗಳು ಆಯ್ಕೆಯಾಗುತ್ತವೆ. ಯಾವುದೇ ರೀತಿಯ ಉಡುಗೆ ಅಥವಾ ಕಚೇರಿ ನಿಯಮಾವಳಿ ಇದ್ದರೂ, ಪ್ರತಿಯೊಂದು ಶೈಲಿ, ಮನಸ್ಥಿತಿ ಮತ್ತು ವ್ಯಕ್ತಿತ್ವಕ್ಕೆ ಪೂರಕವಾಗುವಂತೆ ಈ ಸಂಗ್ರಹವನ್ನು ವಿಶೇಷವಾಗಿ ವಿನ್ಯಾಸಗೊಳಿಸಲಾಗಿದೆ.

# ಕಿಯಾ ಇಂಡಿಯಾ ಸೈರೋಸ್ ಇವಿ ಬಿಡುಗಡೆ

ಬೆಂಗಳೂರು

ಕಿಯಾ ಇಂಡಿಯಾ ಸಂಸ್ಥೆಯು ತನ್ನ ಹೊಸ ಸೈರೋಸ್ ಇವಿ ಎಲೆಕ್ಟ್ರಿಕ್ ವಾಹನವನ್ನು ಭಾರತೀಯ ಮಾರುಕಟ್ಟೆಗೆ ಪರಿಚಯಿಸಿದ್ದು, ರೂ.13.49 ಲಕ್ಷದ ಆಕರ್ಷಕ ಆರಂಭಿಕ ಎಕ್ಸ್–ಶೋರೂಂ ಬೆಲೆಯನ್ನು ನಿಗದಿಪಡಿಸಿದೆ.



ವಿಸ್ತೃತ ಶ್ರೇಣಿಯ 42 ಕಿಲೋವ್ಯಾಟ್‌ಅವರ್ ಬ್ಯಾಟರಿ ರೂಪಾಂತರವು ರೂ.13.49 ಲಕ್ಷದಿಂದ ಆರಂಭವಾಗಲಿದ್ದು, 51.4 ಕಿಲೋವ್ಯಾಟ್‌ಅವರ್ ಬ್ಯಾಟರಿ ಹೊಂದಿರುವ ರೂಪಾಂತರದ ಬೆಲೆ ರೂ.16.99 ಲಕ್ಷ ಎಕ್ಸ್–ಶೋರೂಂನಿಂದ ಆರಂಭವಾಗಲಿದೆ. ಉದ್ಯಮದಲ್ಲೇ ವಿಶಿಷ್ಟವಾದ ಪ್ರಯೋಜನಗಳು, ದೀರ್ಘ ಶ್ರೇಣಿ ಮತ್ತು ಸುಧಾರಿತ ತಂತ್ರಜ್ಞಾನಗಳೊಂದಿಗೆ ಗ್ರಾಹಕರ ಎಲೆಕ್ಟ್ರಿಕ್ ವಾಹನ ಮಾಲೀಕತ್ವದ ಅನುಭವವನ್ನು ಮರು ವ್ಯಾಖ್ಯಾನಿಸುವ ಗುರಿಯನ್ನು ಸೈರೋಸ್ ಇವಿ ಹೊಂದಿದೆ. ಕಿಯಾ ಇಂಡಿಯಾ ಸೈರೋಸ್ ಇವಿಗಾಗಿ ಉದ್ಯಮದ ಅತ್ಯುತ್ತಮ ಖಚಿತ ಮರುಖರೀದಿ ಕಾರ್ಯಕ್ರಮವನ್ನು ಪರಿಚಯಿಸಿದೆ. ಇದರ ಅಡಿಯಲ್ಲಿ ಮೂರು ವರ್ಷಗಳ ಬಳಿಕ ವಾಹನದ ಮೌಲ್ಯದ ಶೇ.80ರವರೆಗೆ ಪರಿಚಯಾತ್ಮಕ ಮರುಮಾರಾಟ ಮೌಲ್ಯವನ್ನು ನೀಡುವ ವ್ಯವಸ್ಥೆ ಇದೆ. ಇದರ ಜೊತೆಗೆ ರೂ.7.99 ಲಕ್ಷದಿಂದ ಆರಂಭವಾಗುವ ಬ್ಯಾಟರಿ–ಆಸ್–ಎ–ಸರ್ವಿಸ್ ಯೋಜನೆಯನ್ನೂ ಪರಿಚಯಿಸಲಾಗಿದ್ದು, ಬ್ಯಾಟರಿ ಕಂತು ರೂ.3.3 ಪ್ರತಿ ಕಿಲೋಮೀಟರ್‌ನಿಂದ ಆರಂಭವಾಗಲಿದೆ.

ವಾಹನದ ಬ್ಯಾಟರಿ ಕಾರ್ಯಕ್ಷಮತೆ ಮತ್ತು ದೀರ್ಘಕಾಲೀನ ವಿಶ್ವಾಸಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಅನಿಯಮಿತ ಕಿಲೋಮೀಟರ್‌ಗಳೊಂದಿಗೆ 15 ವರ್ಷಗಳವರೆಗೆ ಹೈ ವೋಲ್ಟೇಜ್ ಬ್ಯಾಟರಿ ಖಾತರಿ ಒದಗಿಸಲಾಗಿದೆ.

# ವಾರ್ಟಿಸ್ ಪ್ಲಾಟ್‌ಫಾರ್ಮ್ಸ್‌ಗೆ ಎಫ್‌ವೈ26ರಲ್ಲಿ ರೂ.96.22 ಕೋಟಿ ನಿವ್ವಳ ಲಾಭ

ಬೆಂಗಳೂರು

ಚಿಲ್ಲರೆ ಸಾಲ ಪಾಲುದಾರಿಕೆ, ಡಿಜಿಟಲ್ ಸಾಲ ವಿತರಣೆ ಮತ್ತು ಸಾಲ ತಂತ್ರಜ್ಞಾನ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಾರ್ಟಿಸ್ ಪ್ಲಾಟ್‌ಫಾರ್ಮ್ಸ್ 2025–26ನೇ ಹಣಕಾಸು ವರ್ಷದ ಲೆಕ್ಕಪರಿಶೋಧಿತ ಏಕೀಕೃತ ಹಣಕಾಸು ಫಲಿತಾಂಶಗಳನ್ನು ಪ್ರಕಟಿಸಿದೆ. ಕಂಪನಿಯು ಲೆನ್ಡೆನ್ಕ್ಲಬ್, ಇನ್ಸ್ಟಾಮನಿ ಹಾಗೂ ವಾರ್ಟಿಸ್ ಒನ್ ಎಂಬ ಮೂರು ಪ್ರಮುಖ ವೇದಿಕೆಗಳ ಮೂಲಕ ತನ್ನ ಕಾರ್ಯಾಚರಣೆ ನಡೆಸುತ್ತಿದೆ.

2025–26ನೇ ಹಣಕಾಸು ವರ್ಷದಲ್ಲಿ ಕಂಪನಿಯ ನಿವ್ವಳ ಲಾಭವು ರೂ.96.22 ಕೋಟಿಗೆ ತಲುಪಿದ್ದು, ಹಿಂದಿನ ಹಣಕಾಸು ವರ್ಷದಲ್ಲಿ ದಾಖಲಾಗಿದ್ದ ರೂ.34 ಕೋಟಿಗೆ ಹೋಲಿಸಿದರೆ ಶೇ.180ಕ್ಕೂ ಅಧಿಕ ಬೆಳವಣಿಗೆ ಸಾಧಿಸಿದೆ. ಇದೇ ಅವಧಿಯಲ್ಲಿ ಕಂಪನಿಯ ಒಟ್ಟು ಆದಾಯವು ರೂ.366.58 ಕೋಟಿಗೆ ಏರಿಕೆಯಾಗಿದ್ದು, ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇ.55ರಷ್ಟು ಹೆಚ್ಚಳ ದಾಖಲಿಸಿದೆ. ಕಂಪನಿಯ ಇಬಿಐಟಿಡಿಎ ಕೂಡ ರೂ.50 ಕೋಟಿಯಿಂದ ರೂ.124.9 ಕೋಟಿಗೆ ಏರಿಕೆಯಾಗಿದ್ದು, ಎರಡು ಪಟ್ಟು ಅಧಿಕ ಬೆಳವಣಿಗೆ ಕಂಡಿದೆ.

ಹಣಕಾಸು ವರ್ಷದಲ್ಲಿ ವಾರ್ಟಿಸ್ ಪ್ಲಾಟ್‌ಫಾರ್ಮ್ಸ್‌ನ ವಿವಿಧ ವೇದಿಕೆಗಳು ಒಟ್ಟಾರೆಯಾಗಿ ರೂ.5,000 ಕೋಟಿಗೂ ಅಧಿಕ ವಹಿವಾಟು ಮೌಲ್ಯವನ್ನು ಸುಗಮಗೊಳಿಸಿವೆ. ಕಂಪನಿಯ ಒಟ್ಟು ಆದಾಯದಲ್ಲಿ ಲೆನ್ಡೆನ್ಕ್ಲಬ್ ಶೇ.54ರಷ್ಟು, ಇನ್ಸ್ಟಾಮನಿ ಶೇ.43ರಷ್ಟು ಹಾಗೂ ವಾರ್ಟಿಸ್ ಒನ್ ಶೇ.2ರಷ್ಟು ಕೊಡುಗೆ ನೀಡಿವೆ. ಉಳಿದ ಶೇ.1ರಷ್ಟು ಆದಾಯವು ಸಮೂಹದ ಇತರೆ ಕಂಪನಿಗಳಿಂದ ಬಂದಿದೆ.

ಮುಂದಿನ ದಿನಗಳಲ್ಲಿ ಡಿಜಿಟಲ್ ಸಾಲ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲು ಕಂಪನಿ ಮುಂದಾಗಿದೆ. ಹಣಕಾಸು ಫಲಿತಾಂಶಗಳಲ್ಲಿನ ಗಮನಾರ್ಹ ಸುಧಾರಣೆಯು ಕಂಪನಿಯ ಡಿಜಿಟಲ್ ಸಾಲ ಮತ್ತು ಹಣಕಾಸು ತಂತ್ರಜ್ಞಾನ ವ್ಯವಹಾರಗಳ ವಿಸ್ತರಣೆಗೆ ಮತ್ತಷ್ಟು ವೇಗ ನೀಡುವ ನಿರೀಕ್ಷೆ ಮೂಡಿಸಿದೆ.

# ಗಿಗ್ ಕಾರ್ಮಿಕರ ಕಲ್ಯಾಣ ಶುಲ್ಕ ಪಾವತಿಸಿದ ಐಎಎಮ್‌ಎಐ ಸದಸ್ಯ ಸಂಸ್ಥೆಗಳು

ಬೆಂಗಳೂರು

ಭಾರತೀಯ ಇಂಟರ್ನೆಟ್ ಮತ್ತು ಮೊಬೈಲ್ ಒಕ್ಕೂಟ (ಐಎಎಮ್‌ಎಐ) ಹಾಗೂ ಅದರ ಸದಸ್ಯ ಸಂಸ್ಥೆಗಳಾದ ಸ್ವಿಗ್ಗಿ, ಝೆಪ್ಟೋ, ಮೀಶೋ, ಅರ್ಬನ್ ಕಂಪನಿ ಮತ್ತು ಎಟರ್ನಲ್ ಸಂಸ್ಥೆಗಳು, ಕರ್ನಾಟಕ ಹೈಕೋರ್ಟ್ ನಿರ್ದೇಶನದಂತೆ ಗಿಗ್ ಕಾರ್ಮಿಕರ ಕಲ್ಯಾಣ ಶುಲ್ಕವನ್ನು ಪಾವತಿಸಿರುವುದಾಗಿ ತಿಳಿಸಿವೆ.

IAMAI
Internet And Mobile Association Of India

ಡಿಜಿಟಲ್ ವೇದಿಕೆಗಳ ಮೂಲಕ ಜೀವನ ನಿರ್ವಹಿಸುತ್ತಿರುವ ಗಿಗ್ ಹಾಗೂ ಪಾರ್ಟ್‌ಟೈಮ್ ಕಾರ್ಮಿಕರ ಕ್ಷೇಮಾಭಿವೃದ್ಧಿ, ಸುರಕ್ಷತೆ ಮತ್ತು ಆರ್ಥಿಕ ಭದ್ರತೆಗೆ ತಮ್ಮ ಸಂಸ್ಥೆಗಳು ಸಂಪೂರ್ಣವಾಗಿ ಬದ್ಧವಾಗಿವೆ ಎಂದು ಐಎಎಮ್‌ಎಐ ಸದಸ್ಯ ಸಂಸ್ಥೆಗಳು ಪುನರುಚ್ಚರಿಸಿವೆ.

ಕಳೆದ ಹಲವು ವರ್ಷಗಳಿಂದ ದೇಶಾದ್ಯಂತ ಪ್ರತಿತಿಂಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವ 60 ಲಕ್ಷಕ್ಕೂ ಹೆಚ್ಚು ಗಿಗ್ ಕಾರ್ಮಿಕರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು, ಸದಸ್ಯ ಸಂಸ್ಥೆಗಳು ತಮ್ಮದೇ ಆದ ವಿವಿಧ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ಯೋಜನೆಗಳನ್ನು ರೂಪಿಸಿ, ಅವುಗಳಿಗೆ ನಿರಂತರವಾಗಿ ಧನಸಹಾಯ ನೀಡುತ್ತಿವೆ ಎಂದು ಐಎಎಮ್‌ಎಐ ತಿಳಿಸಿದೆ.

ಗಿಗ್ ಕಾರ್ಮಿಕರಿಗೆ ಆರೋಗ್ಯ ವಿಮೆ, ವಿಪತ್ತು ಪರಿಹಾರ, ಉಚಿತ ತರಬೇತಿ ಹಾಗೂ ಸುರಕ್ಷತಾ ಉಪಕರಣಗಳನ್ನು ಒದಗಿಸುವ ಮೂಲಕ ಅವರ ಹಿತರಕ್ಷಣೆಗೆ ಸಂಸ್ಥೆಗಳು ನಿರಂತರವಾಗಿ ಶ್ರಮಿಸುತ್ತಿವೆ. ಇದೇ ಸಂದರ್ಭದಲ್ಲಿ ಕರ್ನಾಟಕ ಹೈಕೋರ್ಟ್‌ನ ನಿರ್ದೇಶನವನ್ನು ಸಂಪೂರ್ಣವಾಗಿ ಗೌರವಿಸಿ, ಗಿಗ್ ಕಾರ್ಮಿಕರ ಕಲ್ಯಾಣ ನಿಧಿಗೆ ಅಗತ್ಯ ವಂತಿಗೆಯನ್ನು ಪಾವತಿಸಲಾಗಿದೆ ಎಂದು ಸಂಸ್ಥೆಗಳು ಸ್ಪಷ್ಟಪಡಿಸಿವೆ.

# ಬರಪೀಡಿತ ತಾಲೂಕು ಎಂದು ಘೋಷಿಸಲು ರಾಜೀವ್‌ಗೌಡ ಒತ್ತಾಯ

ಶಿಡ್ಲಘಟ್ಟ

ಬರಪರಿಸ್ಥಿತಿ ವೀಕ್ಷಣೆಗಾಗಿ ಆಗಮಿಸಿದ್ದ ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಕಾಂಗ್ರೆಸ್ ಮುಖಂಡ ಬಿ.ವಿ.ರಾಜೀವ್‌ಗೌಡ ಹಾಗೂ ಕಾರ್ಯಕರ್ತರು, ರೈತರು ಭೇಟಿ ಮಾಡಿ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ಒತ್ತಾಯಿಸಿದರು.

ಚಿಕ್ಕಬಳ್ಳಾಪುರ–ಶಿಡ್ಲಘಟ್ಟದ ಗಡಿಭಾಗದಲ್ಲಿ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಗೆಹೂವಿನ ಹಾರ ಹಾಕಿ ಸ್ವಾಗತಿಸಿದರು.

ಈ ವೇಳೆ ತಾಲೂಕಿನಲ್ಲಿ ಮಳೆ ಬೆಳೆ ಸ್ಥಿತಿಗತಿಯನ್ನು ವಿವರಿಸಿದ ಕಾಂಗ್ರೆಸ್ ಮುಖಂಡ ರಾಜೀವ್‌ಗೌಡ ಮಾತನಾಡಿ, ತಾಲೂಕಿನಲ್ಲಿ ಈ ವರ್ಷ ಮುಂಗಾರು ಅವಧಿಯಲ್ಲಿ ಮಳೆಯೆ ಬಿದ್ದಿಲ್ಲ. ವಾಡಿಕೆ ಮಳೆ ಬೀಳದ ಕಾರಣ ಇದುವರೆಗೂ ಶೇ 5ರಷ್ಟು ಕೂಡ ಬಿತ್ತನೆ ಕಾರ್ಯ ಆಗೇ ಇಲ್ಲ ಎಂದರು.



ತಾಲೂಕಿನಲ್ಲಿ 20 ಸಾವಿರ ಹೆಕ್ಟೇರ್‌ನಲ್ಲಿ ರಾಗಿ, ಜೋಳ, ನೆಲಗಡಲೆ, ಅವರೆ ಅಲಸಂಧಿ ಇನ್ನಿತರೆ ಬೆಳೆಗಳನ್ನು ಮಳೆ ಆಶ್ರಯದಲ್ಲಿ ಬಿತ್ತನೆ ಮಾಡಬೇಕಿತ್ತಾದರೂ ಮಳೆ ಕೊರತೆಯಿಂದ ಇದುವರೆಗೂ ಬಿತ್ತನೆ ಕಾರ್ಯ ನಡಸಲು ಆಗಿಲ್ಲ ಎಂದು ಹೇಳಿದರು. ಇದರಿಂದ ಈಗಾಗಲೆ ಜನ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ರಾಸುಗಳಿಗೆ ಮೇವಿನ ಕೊರತೆಯ ಬಿಸಿ ತಟ್ಟತೊಡಗಿದೆ. ಹಾಲು ಉತ್ಪಾದನೆ ಪ್ರಮಾಣ ಕುಸಿಯುತ್ತದೆ. ಅಂತರ್ಜಲ ಮಟ್ಟ ಕುಸಿತದಿಂದ ಕೊಳವೆಬಾವಿಗಳಲ್ಲೂ ನೀರಿನಮಟ್ಟ ಕುಸಿಯುವುದರಿಂದ ನೀರಾವರಿ ಬೆಳೆಗಳ ಉತ್ಪಾಧನೆ ಮೇಲೂ ಪರಿಣಾಮ ಬೀರಲಿದೆ ಎಂದು ಆತಂಕ ವ್ಯಕ್ತಪಡಿಸಿದರು. ರೇಷ್ಮೆ ಮತ್ತು ಹೈನುಗಾರಿಕೆಯನ್ನು ಹೆಚ್ಚು ಅವಲಂಬಿಸಿರುವ ತಾಲೂಕಿನಲ್ಲಿ ಮಳೆ ಅಭಾವದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು ಕೂಡಲೆ ಬರಪೀಡಿತ ತಾಲೂಕು ಎಂದು ಘೋಷಿಸಬೇಕು, ಸಂಕಷ್ಟಕ್ಕೆ ಸಿಲುಕಿರುವ ರೈತರ ನೆರವಿಗೆ ಸರಕಾರ ನಿಲ್ಲಬೇಕೆಂದು ಮನವಿ ಮಾಡಿದರು.

ಡಾ.ಜಿ.ಪರಮೇಶ್ವರ್ ಮಾತನಾಡಿ, ಈಗಾಗಲೆ ಬರ ಪರಿಸ್ಥಿತಿಯನ್ನು ವೀಕ್ಷಿಸಲು ಆಗಮಿಸಿದ್ದು ಸರಕಾರಕ್ಕೆ ವರದಿ ನೀಡಿ ಅಗತ್ಯ ಕ್ರಮ ಕೈಗೊಳ್ಳುತ್ತೇವೆ. ಅಗತ್ಯ ಮಾಹಿತಿಯನ್ನು ಸಂಬಂಧಿಸಿದ ಅಧಿಕಾರಿಗಳಿಂದ ಪಡೆದುಕೊಳ್ಳುತ್ತಿದ್ದೇವೆ ಎಂದರು. ನಮ್ಮ ಸರಕಾರವು ಸದಾ ರೈತರಪರ ಇರುತ್ತದೆ. ಯಾವೊಬ್ಬ ರೈತರೂ ಆತಂಕ ಪಡುವ ಅಗತ್ಯವಿಲ್ಲ ಎಂದು ಧೈರ್ಯ ತುಂಬಿದರು.

## ಎಪಿಎಂಸಿ ಟೊಮೋಟೊ ಮಾರುಕಟ್ಟೆ ಸ್ಥಳಾಂತರಿಸುವಂತೆ ಆಗ್ರಹ

ಚಿಂತಾಮಣಿ



ನಗರದ ಮಧ್ಯಭಾಗದಲ್ಲಿ ಇರುವ ಎಪಿಎಂಸಿ ಟೊಮೋಟೊ ಮಾರುಕಟ್ಟೆಯನ್ನು ಕೂಡಲೇ ನಗರದ ಬೇರೊಂದು ಪ್ರದೇಶಕ್ಕೆ ಸ್ಥಳಾಂತರಿಸುವಂತೆ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಆಗ್ರಹಿಸಿ ತಾಲೂಕು ದಂಡಾಧಿಕಾರಿ ಹಾಗೂ ಎಪಿಎಂಸಿ ಕಾರ್ಯದರ್ಶಿಯವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದೆ.

ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಚಿಂತಾಮಣಿ ತಾಲೂಕು ಘಟಕದ ಅಧ್ಯಕ್ಷ ಅಬ್ದುಲ್ ಖಯ್ಯೂಂ ನೇತೃತ್ವದಲ್ಲಿ ಮನವಿಪತ್ರ ಸಲ್ಲಿಸಲಾಗಿದ್ದು, ಈ ಮಾರುಕಟ್ಟೆ ನಗರ ಮಧ್ಯೆ ಭಾಗದಲ್ಲಿ ಇರುವುದರಿಂದ ಮಾರುಕಟ್ಟೆಗೆ ಪ್ರತಿನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ಲಾರಿಗಳು, ಟ್ರಾಕ್ಟರ್ ಹಾಗೂ ಸರಕು ಸಾಗಣೆ ವಾಹನಗಳು ಆಗಮಿಸುತ್ತಿದ್ದು, ಕೂಡಲೇ ನಗರ ಹೊರವಲಯದ ಬೇರೊಂದು ಪ್ರದೇಶಕ್ಕೆ ಸ್ಥಳಾಂತರಿಸಿ ಸಾರ್ವಜನಿಕರಿಗೆ ಹಾಗೂ ಸಂಚಾರ ವ್ಯವಸ್ಥೆಗೆ ಆಗುತ್ತಿರುವ ತೊಂದರೆಗೆ ಕಡಿವಾಣ ಹಾಕುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.ಈ ಸಂದರ್ಭದಲ್ಲಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ತಾಲೂಕು ಘಟಕದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಹಾಜರಿದ್ದರು.

## ಎಸ್‌ಐಆರ್- ಶೇ. 100 ರಷ್ಟು ಪ್ರಗತಿ ಡಿಸಿ ಶುಭ ಕಲ್ಯಾಣ್

ತುಮಕೂರು

ಜಿಲ್ಲೆಯಲ್ಲಿ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಎಸ್‌ಐಆರ್‌ಗೆ ಸಂಬಂಧಿಸಿದಂತೆ ಜಿಲ್ಲೆಯ 2627 ಮತಗಟ್ಟೆಗಳ ಒಟ್ಟು 22,98,879 ಮತದಾರರಿಗೆ ಗಣತಿ ನಮೂನೆಗಳನ್ನು ವಿತರಣೆ ಮಾಡುವ ಮೂಲಕ ಶೇ.100ರಷ್ಟು ಪ್ರಗತಿ ಸಾಧಿಸಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಮತದಾರರಿಂದ ಭರ್ತಿ ಮಾಡಿದ ಗಣತಿ ನಮೂನೆಗಳ ಸಂಗ್ರಹಣೆ ಹಾಗೂ ಅವುಗಳ ಗಣಕೀಕರಣ ಕಾರ್ಯವನ್ನು ಸಹ ಜಿಲ್ಲೆಯಾದ್ಯಂತ ತ್ವರಿತಗತಿಯಲ್ಲಿ ಕೈಗೊಳ್ಳಲಾಗುತ್ತಿದೆ. ಈ ಪ್ರಕ್ರಿಯೆಯನ್ನು ಸುಗಮವಾಗಿ ಹಾಗೂ ನಿಖರವಾಗಿ ಪೂರ್ಣಗೊಳಿಸಲು ಮತಗಟ್ಟೆ ಮಟ್ಟದ ಅಧಿಕಾರಿಗಳು ಮತ್ತು ಮೇಲ್ವಿಚಾರಕರು ಶ್ರಮವಹಿಸಿ ಕಾರ್ಯನಿರ್ವಹಿಸುತ್ತಿದ್ದಾರೆ.

ಜಿಲ್ಲೆಯಲ್ಲಿ ಶೇ.100ರಷ್ಟು ಉತ್ತಮ ಸಾಧನೆ ಮಾಡಿದ ಮತಗಟ್ಟೆಗಳ ಃಐಔಗಳನ್ನು ತಾಲ್ಲೂಕು ಮಟ್ಟದಲ್ಲಿ ಪ್ರೋತ್ಸಾಹಿಸಿ, ಅವರ ಸೇವೆಯನ್ನು ಗುರುತಿಸಿ ಗೌರವಿಸಲಾಗುತ್ತಿದೆ.

ಜಿಲ್ಲೆಯ ಗುಬ್ಬಿ, ಚಿಕ್ಕನಾಯಕನಹಳ್ಳಿ, ಶಿರಾ, ಹಾಗೂ ಕೊರಟಗೆರೆ ತಾಲ್ಲೂಕುಗಳಲ್ಲಿ ಉತ್ತಮ ಸಾಧನೆ ಮಾಡಿದ 11 ಮತಗಟ್ಟೆ ಮಟ್ಟದ ಅಧಿಕಾರಿಗಳನ್ನು ಸನ್ಮಾನಿಸಿ ಅಭಿನಂದಿಸಲಾಗಿದೆ. ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿಯೂ ಶೀಘ್ರದಲ್ಲೇ ಗಣಕೀಕರಣ ಕಾರ್ಯವನ್ನು ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ–2026 ಕಾರ್ಯಕ್ರಮವನ್ನು ನಿಗದಿತ ಅವಧಿಯೊಳಗೆ ಯಶಸ್ವಿಯಾಗಿ ಪೂರ್ಣಗೊಳಿಸಲು ಜಿಲ್ಲಾಡಳಿತ ಕ್ರಮವಹಿಸುತ್ತಿದೆ ಎಂದು ಅವರು ತಿಳಿಸಿದ್ದಾರೆ.

## 'ಪರ್ಯಾಯವಿಲ್ಲದೆ ಫುಟ್‌ಪಾತ್' ತೆರವಿಗೆ ವಿರೋಧ

ತುಮಕೂರು

ನಗರದ ವಿವಿಧ ಪ್ರದೇಶಗಳಲ್ಲಿ ನಗರಪಾಲಿಕೆ ಅಧಿಕಾರಿಗಳು ಫುಟ್‌ಪಾತ್ ಅಂಗಡಿಗಳ ತೆರವು ಕಾರ್ಯಾಚರಣೆ ಆರಂಭಿಸಿದ್ದಾರೆ. ಫುಟ್‌ಪಾತ್ ವ್ಯಾಪಾರಿಗಳಿಗೆ ಪರ್ಯಾಯ ಸ್ಥಳದ ವ್ಯವಸ್ಥೆ ಮಾಡದೆ ಅವರನ್ನು ತೆರವು ಮಾಡಿಸಬಾರದು ಎಂದು ಶ್ರಮಜೀವಿ ಬೀದಿಬದಿ ವ್ಯಾಪಾರಿಗಳ ಸಂಘದ ರಾಜ್ಯಾಧ್ಯಕ್ಷ ಎಂ. ಗೋಪಿ ಮನವಿ ಮಾಡಿದ್ದಾರೆ.

ನಗರದೆಲ್ಲೆಡೆ ಸುಮಾರು 5 ಸಾವಿರಕ್ಕೂ ಹೆಚ್ಚು ಫುಟ್‌ಪಾತ್ ವ್ಯಾಪಾರಿಗಳು ಹಲವಾರು ವರ್ಷಗಳಿಂದ ವ್ಯಾಪಾರ ಮಾಡಿಕೊಂಡು ಬದುಕು ಕಟ್ಟಿಕೊಂಡಿದ್ದಾರೆ.

ಈಗ ಏಕಾಏಕಿ ಅವರನ್ನು ಎತ್ತಂಗಡಿ ಮಾಡಿದರೆ ಅವರ ಬದುಕು ಬೀದಿಪಾಲಾಗುತ್ತದೆ. ಎಷ್ಟೂ ಜನ ಫುಟ್‌ಪಾತ್ ವ್ಯಾಪಾರಿಗಳು ಪ್ರಧಾನ ಮಂತ್ರಿಗಳ ಯೋಜನೆಯಡಿ ಸಾಲ ಪಡೆದಿದ್ದಾರೆ, ಖಾಸಗಿ ಸಂಸ್ಥೆಗಳಿಂದ ಸಾಲ ಪಡೆದು ವ್ಯವಹಾರ



ನಡೆಸುತ್ತಿದ್ದಾರೆ. ಈಗ ತೆರವು ಮಾಡಿದರೆ ಸಾಲ ಮರುಪಾವತಿಗೆ ಹಾಗೂ ಜೀವನ ನಿರ್ವಹಣೆಗೆ ಕಷ್ಟವಾಗುತ್ತದೆ ಎಂದು ಹೇಳಿದ್ದಾರೆ.

ಆರ್ಥಿಕವಾಗಿ ದುರ್ಬಲರಾಗಿರುವವರು, ಅನೇಕ ವಿಕಲಚೇತನರು ಫುಟ್‌ಪಾತ್‌ನಲ್ಲಿ ವ್ಯಾಪಾರ ಮಾಡಿಕೊಂಡು ಜೀವನ ನಿರ್ವಹಣೆ ಮಾಡುತ್ತಿದ್ದಾರೆ. ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸುತ್ತಿದ್ದಾರೆ. ಈಗ ಅವರನ್ನು ಜಾಗ ಖಾಲಿ ಮಾಡಿಸಿದರೆ ಅವರ ಜೀವನ ಅಸ್ತವ್ಯಸ್ತವಾಗುತ್ತದೆ. ಫುಟ್‌ಪಾತ್ ವ್ಯಾಪಾರಿಗಳ ಬದುಕು ರಕ್ಷಣೆ ಮಾಡಲು ಅವರಿಗೆ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಎಂ. ಗೋಪಿ ವಿನಂತಿ ಮಾಡಿದ್ದಾರೆ.

ಸಂಘದ ರಾಜ್ಯ ಉಪಾಧ್ಯಕ್ಷ ಆದಿಲ್ ಬಾಷಾ, ಪ್ರಧಾನ ಕಾರ್ಯದರ್ಶಿ ರಾಜಣ್ಣ, ಮಹಿಳಾ ಘಟಕ ಅಧ್ಯಕ್ಷೆ ಜಿ. ರಮ್ಯಶ್ರೀ ಅವರು ಫುಟ್‌ಪಾತ್ ವ್ಯಾಪಾರ ತೆರವು ಮಾಡದಂತೆ ಮನವಿ ಮಾಡಿದ್ದಾರೆ.

## ಉಚಿತ ಆರೋಗ್ಯ ಶಿಬಿರ

ದೇವನಹಳ್ಳಿ

ಇಂದಿನ ಹುಟ್ಟುಹಬ್ಬ ಆಚರಣೆಗಳು ಕೇವಲ ಆಡಂಬರಗಳಿಂದ ಕೂಡಿರುತ್ತದೆ ಆದರೆ ಗ್ರಾಮದ ಜನರಿಗೆ ಉಚಿತ ಆರೋಗ್ಯ ಶಿಬಿರ ಮತ್ತು ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ಶಿಬಿರಗಳಂತಹ ಸಮಾಜಮುಖಿ ಕಾರ್ಯಗಳನ್ನು ಮಾಡುವುದರ ಮೂಲಕ ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ .ವೆಂಕಟೇಶ್ ಅರ್ಥಪೂರ್ಣವಾಗಿ ಹುಟ್ಟುಹಬ್ಬ ಆಚರಣೆ ಮಾಡಿ ಇಂದಿನ ಯುವಕರಿಗೆ ಮಾದರಿಯಾಗಿದ್ದಾರೆ ಎಂದು ಆಹಾರ ಸಚಿವ ಕೆ.ಎಚ್ ಮುನಿಯಪ್ಪ ಹೇಳಿದರು.

ತಾಲೂಕಿನ ಚನ್ನರಾಯಪಟ್ಟಣ ಹೋಬಳಿಯ ದಿನ್ನೂರು ಗ್ರಾಮದಲ್ಲಿರುವ ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ. ವೆಂಕಟೇಶ್ ರವರ ಸ್ವಗೃಹದಲ್ಲಿ ನಡೆದ ವೇದಿಕೆ ಕಾರ್ಯಕ್ರಮದಲ್ಲಿ "ಕೆ ವೆಂಕಟೇಶ್ ಅವರ ಹುಟ್ಟು ಹಬ್ಬದ ಪ್ರಯುಕ್ತ ಸಚಿವರ ನೇತೃತ್ವದಲ್ಲಿ ಗ್ರಾಮದ ಮಹಿಳೆಯರಿಗೆ ಹೊಲಿಗೆ ಯಂತ್ರ ಮತ್ತು ವಿದ್ಯಾರ್ಥಿಗಳಿಗೆ ಕ್ರೀಡಾಕಿಟ್ ವಿತರಣೆ ಮಾಡಿ ನಂತರ ಮಾತನಾಡಿದರು.

ಹುಟ್ಟುಹಬ್ಬವನ್ನು ಕೇವಲ ಕೇಕ್ ಕತ್ತರಿಸುವುದಕ್ಕೆ ಸೀಮಿತ ಗೊಳಿಸದೆ, ನಿಮ್ಮ ಬದುಕಿಗೆ ಮೌಲ್ಯವನ್ನು ತರುವಂತಹ ಸಮಾಜ ಮುಖಿ ಕಾರ್ಯಗಳು, ಕೃತಜ್ಞತಾ ಭಾವನೆಗಳು ಮತ್ತು ವೈಯಕ್ತಿಕ ಬೆಳವಣಿಗೆಯ ಸಂಕಲ್ಪಗಳ ಮೂಲಕ ಆಚರಿಸಿಕೊಳ್ಳುವುದು ನಿಜಕ್ಕೂ ಅರ್ಥಪೂರ್ಣ, ಗ್ರಾಮದ ಜನರಿಗೆ ಆರೋಗ್ಯದ ಕುರಿತು ಅರವು ಮೂಡಿಸಿ ಶಿಬಿರವನ್ನು ಆಯೋಜನೆ ಮಾಡಿರುವುದು, ಯುವ ವಿದ್ಯಾರ್ಥಿಗಳಿಗೆ ನಾಯಕತ್ವದ ಕುರಿತು ಅರಿವು ಮೂಡಿಸಿರುವುದು,ಗ್ರಾಮದ ಮಹಿಳೆಯರು ಮತ್ತು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಅಗತ್ಯವಾದ ಸೌಲಭ್ಯಗಳನ್ನು ಕಲ್ಪಿಸಿರುವುದು ಅತ್ಯಂತಸಂತೋಷದಾಯಕ.

ವೆಂಕಟೇಶ್ ಅವರ ಇಂತಹ ಇನ್ನಷ್ಟು ಸಮಾಜಮುಖಿ ಕಾರ್ಯಗಳು ಹೀಗೆ ಮುಂದುವರೆಯಲಿ ಎಂದು ಶುಭ ಹಾರೈಸಿದರು. ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ. ವೆಂಕಟೇಶ್ ನಮ್ಮ ಸುತ್ತಮುತ್ತಲಿನ ಪರಿಸರದ ಸ್ವಾಸ್ಥ್ಯವನ್ನು ಕಾಪಾಡಿಕೊಳ್ಳುವುದು ಹಾಗೂ ಉತ್ತಮ ಸಮಾಜ ನಿರ್ಮಾಣದಲ್ಲಿ ನಮ್ಮ ಕರ್ತವ್ಯಗಳನ್ನು ನಿಭಾಯಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿರುತ್ತದೆ ಎಂದರು.

## ಕನ್ನಪ್ಪನಹಳ್ಳಿ ಸರ್ಕಾರಿ ಶಾಲೆಯಲ್ಲಿ ಶಾಲಾಭಿವೃದ್ಧಿ ಸಮಿತಿ ಅಸ್ತಿತ್ವಕ್ಕೆ



ಚಿಂತಾಮಣಿ

ತಾಲೂಕಿನ ಅಬ್ಲೂಡು ಸಿಆರ್‌ಸಿಗೆ ಸೇರಿದ ಕನ್ನಪ್ಪನಹಳ್ಳಿ ಗ್ರಾಮದ ಸರ್ಕಾರಿ ಆಂಗ್ಲ ಮತ್ತು ಕನ್ನಡ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನವಾಗಿ ಮುಂದಿನ ಮೂರು ವರ್ಷಗಳವರೆಗೆ ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿಯನ್ನು ರಚಿಸಲಾಯಿತು.

ಈ ಸಭೆಯಲ್ಲಿ ಮಕ್ಕಳ ಪೋಷಕರು ಭಾಗವಹಿಸಿ ಅಧ್ಯಕ್ಷರನ್ನಾಗಿ ವೆಂಕಟೇಶ್, ಉಪಾಧ್ಯಕ್ಷರನ್ನಾಗಿ ಅಶ್ವಿನಿ ಮಂಜುನಾಥರನ್ನು ಆಯ್ಕೆ ಮಾಡಿದ್ದು ಮತ್ತು ನೂತನ ಸದಸ್ಯರಾಗಿ ಮೀನಾ, ರುಕ್ಮಿಣಿ, ಕವಿತಾ, ಸಂಜನಾ, ರಾಘವೇಂದ್ರ, ನಳಿನ, ಹರೀಶ್, ಶ್ರೀನಿವಾಸ್, ಅಶೋಕ್, ಮಮತ,ರೂಪ, ಗಿರಿಜಾ, ರಾಜಪ್ಪ, ಸುರೇಶ್, ಗಂಗಾಧರ್, ಸೂರ್ಯ ಕಲಾ ರವರನ್ನು ಆಯ್ಕೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯ ಶಿಕ್ಷಕ ಕೆ.ಎನ್. ಮಂಜುನಾಥ್ ನೂತನ ಅಧ್ಯಕ್ಷರು ಮತ್ತು ಸದಸ್ಯರಿಗೆ ಎಸ್‌ಡಿಎಮ್‌ಸಿ ಜವಾಬ್ದಾರಿಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿ ನಿಮ್ಮ ಅವಧಿಯಲ್ಲಿ ಶಾಲೆಯ ಅಭಿವೃದ್ಧಿಗಾಗಿ ಸಹಕರಿಸಬೇಕೆಂದು ತಿಳಿಸಿದರು.

ಸಹ ಶಿಕ್ಷಕಿಯ ಸಿ.ಸುಧಾಶ್ರೀ ಮಾತನಾಡಿ, ಪೋಷಕರು ಮಕ್ಕಳು ಶಾಲೆಗೆ ಗೈರು ಹಾಜರಾಗದಂತೆ ಹಾಗೂ ಮಕ್ಕಳ ಕಲಿಕೆಯ ಕಡೆಗೆ ಹೆಚ್ಚು ಒತ್ತು ನೀಡಬೇಕೆಂದು ತಿಳಿಸಿದರು.

ಮತ್ತೋರ್ವ ಸಹ ಶಿಕ್ಷಕಿ ವಿ.ಎ. ಸೌಮ್ಯ ಮಕ್ಕಳು ಮನೆಯಲ್ಲಿ ಮಕ್ಕಳು ಮನೆಯಲ್ಲಿ ಮೊಬೈಲ್ ಬಳಸದಂತೆ ಪೋಷಕರು ಎಚ್ಚರ ವಹಿಸಬೇಕೆಂದು ಮತ್ತು ಶಾಲೆಗೆ ಸ್ವಚ್ಛವಾಗಿ ಸಮವಸ್ತ್ರದೊಂದಿಗೆ ಹಾಜರಾಗಬೇಕೆಂದು ತಿಳಿಸಿದರು.

ನೂತನ ಅಧ್ಯಕ್ಷರಾದ ವೆಂಕಟೇಶ್ ಮಾತನಾಡಿ, ನನ್ನ ಅವಧಿಯಲ್ಲಿ ಶಾಲೆಯ ಅಭಿವೃದ್ಧಿಗಾಗಿ ಶ್ರಮಿಸುತ್ತೇನೆ ಎಂದು ತಿಳಿಸಿದರು.

ಈ ಸಭೆಯಲ್ಲಿ ನೂತನ ಸದಸ್ಯರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು, ಈ ಕಾರ್ಯಕ್ರಮದಲ್ಲಿ ಮಕ್ಕಳ ಪೋಷಕರು, ಅಂಗನವಾಡಿ ಕಾರ್ಯಕರ್ತೆ, ಅಡುಗೆ ಸಿಬ್ಬಂದಿ, ಅತಿಥಿ ಶಿಕ್ಷಕಿ ಪುಷ್ಪಲತಾ, ಶಾಲಾ ಸಿಬ್ಬಂದಿಯವರು ಭಾಗವಹಿಸಿದ್ದರು.

## ಸ್ಪರ್ಧಾತ್ಮಕ ಪರೀಕ್ಷಾ ಕಾರ್ಯಾಗಾರಕ್ಕೆ ಉತ್ತಮ ಸ್ಪಂದನೆ

ಬಂಗಾರಪೇಟೆ

ಕರ್ನಾಟಕ ರಾಜ್ಯ ಸರ್ಕಾರ ಮುಂದಿನ ಎರಡು ವರ್ಷಗಳಲ್ಲಿ ಸುಮಾರು 2 ಲಕ್ಷ ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡುವ ಉದ್ದೇಶದಿಂದ ಪೊಲೀಸ್ ಕಾನ್ಸ್ಟೇಬಲ್, ಗ್ರಾಮ ಲೆಕ್ಕಾಧಿಕಾರಿ ಸೇರಿದಂತೆ ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಆರಂಭಿಸಿರುವ ಹಿನ್ನೆಲೆಯಲ್ಲಿ, ಬಂಗಾರಪೇಟೆ ಕ್ಷೇತ್ರದ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರ ಪ್ರೇರಣೆಯಿಂದ ತಾಲೂಕಿನ ಬಡ ಹಾಗೂ ನಿರುದ್ಯೋಗಿ ವಿದ್ಯಾರ್ಥಿಗಳಿಗಾಗಿ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ಕಾರ್ಯಾಗಾರ ಆಯೋಜಿಸಿರುವುದು ಶ್ಲಾಘನೀಯ ಎಂದು ಅಕ್ಕ ಅಕಾಡೆಮಿಯ ಮುಖ್ಯಸ್ಥ ಡಾ. ಶಿವಕುಮಾರ್ ಹೇಳಿದರು.

ತಾಲೂಕಿನ ಎಸ್.ಎನ್. ಸಿಟಿ ಸನ್ಮಾರ್ಗ ಕನ್ವೆನ್ಷನ್ ಹಾಲ್‌ನಲ್ಲಿ ಆಯೋಜಿಸಿದ್ದ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಅವರು, ತಾಲೂಕಿನ ಎಲ್ಲಾ ನಿರುದ್ಯೋಗಿ ಯುವಕ–ಯುವತಿಯರು ಸರ್ಕಾರಿ ಉದ್ಯೋಗ ಪಡೆದುಕೊಳ್ಳಬೇಕು ಎಂಬ ಉದ್ದೇಶದಿಂದ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರು ಒಂದು ವಾರಗಳ ಕಾಲ ಉಚಿತ ತರಬೇತಿ ಕಾರ್ಯಾಗಾರ ನಡೆಸುವಂತೆ ಮನವಿ ಮಾಡಿದ್ದು, ಅದಕ್ಕೆ ಅಕ್ಕ ಅಕಾಡೆಮಿ ಸಂತೋಷದಿಂದ ಸ್ಪಂದಿಸಿದೆ ಎಂದು ತಿಳಿಸಿದರು.




ಜಿಲ್ಲೆಯ ವಿವಿಧ ಭಾಗಗಳಿಂದ ಹಾಗೂ ತಾಲೂಕಿನ ಸುಮಾರು 300ಕ್ಕೂ ಹೆಚ್ಚು ಪದವಿ ವಿದ್ಯಾರ್ಥಿಗಳು ಮತ್ತು ಪದವಿ ಪೂರ್ಣಗೊಳಿಸಿರುವ ಯುವಕರು ಪ್ರತಿದಿನ ಕಾರ್ಯಾಗಾರದಲ್ಲಿ ಭಾಗವಹಿಸುತ್ತಿದ್ದು, ಅವರ ಉತ್ಸಾಹ ಹಾಗೂ ಸ್ಪರ್ಧಾತ್ಮಕ ಮನೋಭಾವ ಗಮನಾರ್ಹವಾಗಿದೆ ಎಂದು ಹೇಳಿದರು.

ಒಂದು ತಾಲೂಕು ಅಭಿವೃದ್ಧಿಯಾಗಬೇಕಾದರೆ ಅಲ್ಲಿನ ಯುವಕರು ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಪ್ರತಿಭಾವಂತ ಅಧಿಕಾರಿಗಳು ರೂಪುಗೊಂಡಾಗ ಮಾತ್ರ ಸಮಾಜ ಮತ್ತು ತಾಲೂಕಿನ ಅಭಿವೃದ್ಧಿಗೆ ವೇಗ ಸಿಗುತ್ತದೆ. ಅಂತಹ ಉತ್ತಮ ಉದ್ದೇಶದೊಂದಿಗೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರು ಕೈಗೊಂಡಿರುವ ಈ ಕಾರ್ಯಕ್ರಮ ನಿಜಕ್ಕೂ ಮಾದರಿಯಾಗಿದೆ. ಬಸವಣ್ಣನವರ ಕಾಲದಲ್ಲಿ ಅನ್ನದಾಸೋಹಕ್ಕೆ ಮಹತ್ವವಿದ್ದರೆ, ಇಂದಿನ ಕಾಲದಲ್ಲಿ ಶಿಕ್ಷಣ ಮತ್ತು ಜ್ಞಾನವನ್ನು ಹಂಚುವ 'ಅಕ್ಷರ ದಾಸೋಹ' ಅತ್ಯಂತ ಪುಣ್ಯದ ಕಾರ್ಯವಾಗಿದೆ ಎಂದು ಡಾ. ಶಿವಕುಮಾರ್ ಅಭಿಪ್ರಾಯಪಟ್ಟರು.

ಬಳಿಕ ಎಸ್.ಎನ್. ಸಿಟಿ ಸನ್ಮಾರ್ಗ ಕನ್ವೆನ್ಷನ್ ಹಾಲ್‌ನಲ್ಲಿ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರ ಪ್ರೇರಣೆಯಿಂದ ಆಯೋಜಿಸಿದ್ದ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ಕಾರ್ಯಾಗಾರದಲ್ಲಿ ಅಕ್ಕ ಅಕಾಡೆಮಿಯ ಮುಖ್ಯಸ್ಥ ಡಾ. ಶಿವಕುಮಾರ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಟಿಎಪಿಎಂಎಸ್ ಉಪಾಧ್ಯಕ್ಷ ಅ.ನಾ. ಹರೀಶ್, ಚಿಕ್ಕ ಅಂಕಂಡಹಳ್ಳಿ ಗ್ರಾ.ಪಂ. ಮಾಜಿ ಅಧ್ಯಕ್ಷ ಹರೀಶ್ ಕುಮಾರ್, ಪ್ರಾಧ್ಯಾಪಕ ಪ್ರಸನ್ನ ಕುಮಾರ್, ಕರ್ನಾಟಕ ರಕ್ಷಣಾ ವೇದಿಕೆಯ ರಾಮ್ ಪ್ರಸಾದ್, ಶಫೀಕ್ ಅಕ್ಕ ಅಕಾಡೆಮಿಯ ಪ್ರಾಧ್ಯಾಪಕರು. ಟಿಎಪಿಎಂಎಸ್ ಉಪಾಧ್ಯಕ್ಷ ಅ.ನಾ. ಹರೀಶ್, ಮಾಜಿ ಅಧ್ಯಕ್ಷ ಹರೀಶ್ ಕುಮಾರ್,

## ವಿವಿಧ ಸಂಘಟನೆಗಳ ಮುಖಂಡರು ಬರಗಾಲವನ್ನು ಘೋಷಿಸುವಂತೆ ಆಗ್ರಹ



ಶಿಡ್ಲಘಟ್ಟ

ತಾಲೂಕಿನಲ್ಲಿ ಈ ವರ್ಷ ಮುಂಗಾರು ಮಳೆಗಾಲದ ಅವಧಿಯಲ್ಲಿ ವಾಡಿಕೆ ಮಳೆ ಬೀಳದೆ ಇದುವರೆಗೂ ಮುಂಗಾರು ಮಳೆಗಾಲದ ಬಿತ್ತನೆಕಾರ್ಯ ಆಗಿಲ್ಲ. ಹಾಗಾಗಿ ಸರಕಾರವು ಕೂಡಲೆ ಬರ ಘೋಷಣೆ ಮಾಡಿ ಬರ ಪರಿಸ್ಥಿತಿ ಎದುರಿಸಲು ಅಗತ್ಯ ಕ್ರಮಕ್ಕೆ ಮುಂದಾಗಬೇಕೆಂದು ಜೀವಿಕ ಸಂಘಟನೆಯ ತಾಲೂಕು ಸಂಚಾಲಕ ಪಿ.ಶ್ರೀನಿವಾಸ್ ಸರಕಾರಕ್ಕೆ ಆಗ್ರಹಿಸಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ತಾಲೂಕಿನಲ್ಲಿ ಶೇ 70–80 ಮಂದಿ ಕೃಷಿಯನ್ನು ನಂಬಿದ್ದು ಮಳೆಯ ಅಭಾವದಿಂದ ಈ ವರ್ಷ ಬಿತ್ತನೆ ಕಾರ್ಯ ನಡೆದೇ ಇಲ್ಲ ಎಂದರು. ಇದರಿಂದ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಹಾಗೂ ರಾಸುಗಳಿಗೆ ಮೇವಿನ ಕೊರತೆ ಎದುರಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಹಾಗಾಗಿ ಬರ ಘೋಷಣೆ ಮಾಡಿ ಪಹಣಿ ಹೊಂದಿರುವ ಪ್ರತಿ ರೈತನಿಗೂ 50 ಸಾವಿರ ಪರಿಹಾರ ನೀಡಬೇಕು, ಪ್ರತಿ ಗ್ರಾಮದಲ್ಲೂ ತೊಟ್ಟಿ ನಿರ್ಮಿಸಿ ಅದರಲ್ಲಿ ನೀರು ತುಂಬಿಸಿ ಜಾನುವಾರುಗಳಿಗೆ ನೀರಿನ ವ್ಯವಸ್ಥೆ ಮಾಡಬೇಕು, ರಾಮ್‌ಜಿ ನರೇಗಾದಲ್ಲಿ ಕೂಲಿ ದಿನಗಳನ್ನು ಹೆಚ್ಚಿಸಬೇಕು ಮತ್ತು ಕೂಲಿ ಹಣವನ್ನು ಕೂಡ ಹೆಚ್ಚಿಸಬೇಕೆಂದು ಆಗ್ರಹಿಸಿದರು.ನ್ಯಾಯ ಬೆಲೆ ಅಂಗಡಿಗಳ ಮೂಲಕ ಕೇವಲ ಅಕ್ಕಿ ರಾಗಿ ಮಾತ್ರವಲ್ಲದೆ ದಿನ ನಿತ್ಯ ಬಳಸುವ ದಿನಸಿ ಪದಾರ್ಥಗಳನ್ನು ರಿಯಾಯಿತಿ ದರದಲ್ಲಿ ರೈತರು, ಜನ ಸಾಮಾನ್ಯರಿಗೆ ವಿತರಬೇಕು, ಪ್ರತಿ ಹೋಬಳಿಯಲ್ಲೂ ಮೇವಿನ ಬ್ಯಾಂಕುಗಳನ್ನು ತೆರೆಯಬೇಕು ಎಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಜೀತದಾಳು ಮತ್ತು ಕೃಷಿ ಕಾರ್ಮಿಕರ ಒಕ್ಕೂಟದ ಅಧ್ಯಕ್ಷ ಎಸ್.ಗೊಲ್ಲಹಳ್ಳಿಯ ನರಸಿಂಹಪ್ಪ, ಲುಂಬಿನಿ ಎಜುಕೇಷನ್ ಅಂಡ್ ಡೆವಲಪ್‌ಮೆಂಟ್ ಟ್ರಸ್ಟ್ನ ಅಧ್ಯಕ್ಷ ಮೂರ್ತಿ ಮೈತ್ರಿ, ಜೀವಿಕ ಸಂಘಟನೆಯ ಮುನಿಯಪ್ಪ ಹಾಜರಿದ್ದರು.

## 'ವಿದ್ಯಾರ್ಥಿಗಳು ಸಮಾಜದ ಆದರ್ಶ ನಾಗರಿಕರಾಗಲಿ'

ಕೋಲಾರ

ವಿದ್ಯಾರ್ಥಿಗಳು ಸುಸಂಸ್ಕೃತವಂತರಾಗಿ ಸಮಾಜಕ್ಕೆ ತಮ್ಮದೇ ಕೊಡುಗೆ ನೀಡಲು ಮುಂದಾಗಬೇಕೆಂದು ಕುಂಬಾರರ ಅಭಿವೃದ್ಧಿ ನಿಗಮದ ಅಧ್ಯಕ್ಷ ಡಾ.ಶ್ರೀನಿವಾಸನ್ ವೇಲು ಹೇಳಿದರು.

ನಗರದ ಕೆ.ಇ.ಬಿ ಸಮುದಾಯ ಭವನದಲ್ಲಿ ಕೋಲಾರ ಜಿಲ್ಲಾ ಕುಂಬಾರರ ಸಾರ್ವಜನಿಕ ವಿದ್ಯಾರ್ಥಿ ನಿಲಯ, ಜಿಲ್ಲಾ ಕುಂಬಾರರ ಸಂಘ ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯ್ಲುಲಿ ಅತಿ ಹೆಚ್ಚು ಅಂಕಗಳಿಸಿರುವ ಕುಂಬಾರ ಜನಾಂಗದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ರಾಜ್ಯ ಹಾಗೂ ಜಿಲ್ಲಾಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಜೀವನದಲ್ಲಿ ಉತ್ತಮ ನಡತೆ, ವಿದ್ಯೆ, ವಿನಯ ಮೈಗೂಡಿಸಿ ಕೊಂಡು ಉನ್ನತ ಸ್ಥಾನಗಳನ್ನು ಅಲಂಕರಿಸಿ ಪೋಷಕರಿಗೆ ಗೌರವ ತರಬೇಕು. ಸಮಾಜದ ನೆರವಿಗೆ ತಮ್ಮ ಕೈಲಾದ ಸಹಾಯ ಹಸ್ತ ನೀಡಬೇಕೆಂದು ಕಿವಿ ಮಾತು ಹೇಳಿದರು.

ಜಿಲ್ಲಾ ಕುಂಬಾರರ ಸಾರ್ವಜನಿಕ ವಿದ್ಯಾರ್ಥಿ ನಿಲಯದ ಗೌರವಾಧ್ಯಕ್ಷ ವೆಂಕಟಸ್ವಾಮಿ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಮುಖ್ಯ ರೈಲ್ವೆ ಸಾರಿಗೆ ಯೋಜನಾಧಿಕಾರಿ ಹೆಚ್.ಎಂ.ದಿನೇಶ್, ಹಿರಿಯ ವಿಜ್ಞಾನಿ ಡಾ. ಸಿದ್ಧಪ್ಪಶೆಟ್ಟಿ, ಕರ್ನಾಟಕ ಲೋಕಾಯುಕ್ತ ಡಿ.ವೈ.ಎಸ್.ಪಿ ಟಿ.ಸಿ.ವೆಂಕಟೇಶ್, ಅಧ್ಯಕ್ಷ ಎ.ತಬಲ ನಾರಾಯಣಸ್ವಾಮಿ, ಕಲ್ಲಂಡೂರು ಶ್ರೀನಿವಾಸಪ್ಪ ಇನ್ನಿತರರು ಇದ್ದರು.

## ಹೈಡ್ರೋಪೋನಿಕ್ಸ್, ಸೌರಶಾಖ ಘಟಕಕ್ಕೆ ಸಹಾಯಧನ: ಆಗಸ್ಟ್ 3ರೊಳಗೆ ಅರ್ಜಿ ಸಲ್ಲಿಸಿ

ಮಾಲೂರು



ಹಣ್ಣು ಮತ್ತು ತರಕಾರಿಗಳನ್ನು ಒಣಗಿಸಲು ಸೌರಶಾಖ ಘಟಕ ತರಕಾರಿ ಬೆಳೆಗಳನ್ನು ಬೆಳೆಯಲು ಹೈಡ್ರೋಪೋನಿಕ್ಸ್ ಮತ್ತು ಏರೋಪೋನಿಕ್ ಹಾಗೂ ಕೃಷಿ ಯಂತ್ರೋಪಕರಣ ಖರೀದಿಗೆ ವಾರ್ಷಿಕ ಗುರಿ ನಿಗದಿಪಡಿಸಲಾಗಿದೆ ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕಿ ದಿವ್ಯ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಗೆ ಮಾಹಿತಿ ನೀಡಿ 2026–27ನೇ ಸಾಲಿನ ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳ ಅಡಿ ಸಹಾಯಧನ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಹಣ್ಣು ಮತ್ತು ತರಕಾರಿಗಳನ್ನು ಒಣಗಿಸಲು ಸೌರ ಶಾಖ ಘಟಕ ಸರಕಾರಿ ಬೆಳೆಗಳನ್ನು ಬೆಳೆಯಲು ಹೈಡ್ರೋಪೋನಿಕ್ ಮತ್ತು ಏರೋಪೋನಿಕ್ಸ್ ಹಾಗೂ ಕೃಷಿ ಯಂತ್ರೋಪಕರಣಗಳ ಖರೀದಿಗೆ ವಾರ್ಷಿಕ ಗುರಿ ನಿಗದಿ ಪಡಿಸಲಾಗಿದೆ. ಆಸಕ್ತ ರೈತರು ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ, ಆಧಾರ್ ಕಾರ್ಡ್, ಜೆರಾಕ್ಸ್ ಪ್ರತಿ, ಬ್ಯಾಂಕ್ ಪಾಸ್ ಬುಕ್ ಜೆರಾಕ್ಸ್ ಪ್ರತಿ, ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ರೈತರು ಆಗಿದ್ದಲ್ಲಿ ಆರ್‌ಡಿ ಸಂಖ್ಯೆ ಹೊಂದಿರುವ ಜಾತಿ ಪ್ರಮಾಣ ಪತ್ರದೊಂದಿಗೆ ಆಗಸ್ಟ್ 3ರ ಒಳಗೆ ಅರ್ಜಿಯನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಕಚೇರಿ ಮಾಲೂರು ಇಲ್ಲಿ ಸಲ್ಲಿಸಬಹುದಾಗಿದೆ ಆಸಕ್ತ ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಹೇಳಿದರು.

## ಒಗ್ಗೂಡಿ ಸಮುದಾಯದ ಸಾಧಕರನ್ನು ಗುರುತಿಸಿ: ಜಿ.ಪಂ ಸಿಇಒ

ಬೆಂಗಳೂರು ಗ್ರಾಮಾಂತರ ಜಿಲ್ಲೆ

ಸಮಾಜದ ಅಭಿವೃದ್ಧಿ ಕೇವಲ ಜನಸಂಖ್ಯೆಯಿಂದ ನಿರ್ಧಾರವಾಗುವುದಿಲ್ಲ, ಶಿಕ್ಷಣ, ಸಂಘಟನೆ, ಆಡಳಿತಾತ್ಮಕ ಪ್ರಾತಿನಿಧ್ಯ ಮತ್ತು ರಾಜಕೀಯ ಪಾಲ್ಗೊಳ್ಳುವಿಕೆಯ ಮೂಲಕವೇ ಸಮುದಾಯದ ನಿಜವಾದ ಪ್ರಗತಿ ಸಾಧ್ಯ. ಈ ವಾಸ್ತವವನ್ನು ಮನಗಂಡು ಗಾಣಿಗ ಸಮುದಾಯದ ಮುಖಂಡರು, ಸಮಾಜಸೇವಕರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಒಗ್ಗೂಡಿ ಸಮುದಾಯದ ಸಾಧಕರನ್ನು ಗುರುತಿಸಿ ಗೌರವಿಸುವ ಮೂಲಕ ಹೊಸ ಸಾಮಾಜಿಕ ಸಂದೇಶ ಸಾರಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಬಳಿ ಇರುವ ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಅಖಿಲ ಕರ್ನಾಟಕ ಜ್ಯೋತಿನಗರ ವೈಶ್ಯ ಗಾಣಿಗ ಸಂಘ, ಪದಾಧಿಕಾರಿಗಳಿಂದ ಅಭಿನಂದನೆ ಸ್ವೀಕರಿಸಿ ಜಿ.ಪಂ ಸಿಇಒ ಡಾ.ವಾಸಂತಿ ಅಮರ್ ಮಾತನಾಡಿದರು.



ಉನ್ನತ ಹುದ್ದೆಗಳಲ್ಲಿ ನಮ್ಮ ಮಕ್ಕಳೂ ಇರಬೇಕು ಸಮುದಾಯದ ಸಾಮಾಜಿಕ ಸ್ಥಿತಿಗತಿಯ ಬಗ್ಗೆ ಆತ್ಮಾವಲೋಕನದ ಅಗತ್ಯವಿದೆ ಎಂಬ ಸಂದೇಶ ನೀಡಿದರು. ನಾನು ಗಾಣಿಗ ಸಮುದಾಯದವಳಾಗಿದ್ದು, ಸಮುದಾಯದವರು ನನ್ನನ್ನು ಗುರುತಿಸಿ ಗೌರವಿಸಿರುವುದು ಸಂತಸ ತಂದಿದೆ. ನಮ್ಮ ಸಮುದಾಯದಲ್ಲಿ ಸರ್ಕಾರಿ ಸೇವೆಯಲ್ಲಿರುವವರ ಸಂಖ್ಯೆ ಇನ್ನೂ ಕಡಿಮೆಯಿದೆ. ಈ ಪರಿಸ್ಥಿತಿ ಬದಲಾಗಬೇಕು. ನಮ್ಮ ಮಕ್ಕಳು ಉತ್ತಮ ಶಿಕ್ಷಣ ಪಡೆದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಆಡಳಿತ ವ್ಯವಸ್ಥೆಯಲ್ಲಿ, ಶಿಕ್ಷಣ ಕ್ಷೇತ್ರದಲ್ಲಿ ಹಾಗೂ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ನಮ್ಮ ಸಮುದಾಯದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಕಾಣಿಸಿಕೊಳ್ಳಬೇಕು" ಎಂದು ಕರೆ ನೀಡಿದರು. ಸಂಘಟನೆಯ ಕೊರತೆಯೇ ಹಿಂದುಳಿಯುವಿಕೆಗೆ ಕಾರಣವೇ? ಗಾಣಿಗ ಸಮುದಾಯವು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಹಲವು ಸವಾಲುಗಳನ್ನು ಎದುರಿಸುತ್ತಿರುವ ಸಮುದಾಯಗಳಲ್ಲಿ ಒಂದಾಗಿದೆ. ಪ್ರತಿಭೆ ಮತ್ತು ಸಾಮರ್ಥ್ಯವಿದ್ದರೂ ಸೂಕ್ತ ಅವಕಾಶ, ಮಾರ್ಗದರ್ಶನ ಹಾಗೂ ಸಂಘಟಿತ ಬೆಂಬಲದ ಕೊರತೆಯಿಂದ ಅನೇಕರು ಉನ್ನತ ಮಟ್ಟಕ್ಕೆ ತಲುಪಲು ಸಾಧ್ಯವಾಗದೆ ಹಿಂದುಳಿದಿದ್ದಾರೆ.

ಕಾರ್ಯಕ್ರಮದಲ್ಲಿ ಸಮಾಜಸೇವಕ ಜಿ.ಎನ್.ವೇಣುಗೋಪಾಲ್, ಪೋಷಕ, ಜಿ.ಎಸ್.ಅಮರನಾಥ್, ರೇಖಾ ವೇಣುಗೋಪಾಲ್, ಪೇರೆಸಂದ್ರ ವಿಜಯಕುಮಾರ್, ಗೌರವಾಧ್ಯಕ್ಷ ರಮೇಶ್, ಅವಣಿ ಬಾಬು, ಹಿರಿಯ ಪತ್ರಕರ್ತರಾದ ಪ್ರಕಾಶ್, ನಾರಾಯಣಸ್ವಾಮಿ, ಮೋಹಿತ್ ವೆಂಕಟರಾಮಶೆಟ್ಟಿ, ಷಣ್ಮುಗ ಶೆಟ್ಟಿ, ಮುರಳಿ ಕೃಷ್ಣ, ರಾಮಕೃಷ್ಣ, ಮಹಿಳಾ ಘಟಕದ ಅಧ್ಯಕ್ಷೆ ಮಾಧವಿ, ವಿಜಯಕುಮಾರ್, ಲಕ್ಷ್ಮೀದೇವಿ, ಸೇರಿದಂತೆ ಸಮುದಾಯದ ಮುಖಂಡರು ಹಾಗೂ ಪದಾಧಿಕಾರಿಗಳು ಹಾಜರಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
24/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ‘ನಾವೆಲ್ಲರೂ ಒಗ್ಗೂಡಿ ಡ್ರಗ್ಸ್ ಮುಕ್ತ ಸಮಾಜ ನಿರ್ಮಿಸಲು ಪಣ ತೊಡೋಣ’

ಚಿಕ್ಕಬಳ್ಳಾಪುರ

ಮಾದಕ ವಸ್ತುಗಳ ಸೇವನೆಯು ವ್ಯಕ್ತಿಯ ಆರೋಗ್ಯ, ಶಿಕ್ಷಣ, ಕುಟುಂಬ ಹಾಗೂ ಸಮಾಜದ ಮೇಲೆ ಗಂಭೀರ ದುಷ್ಪರಿಣಾಮಗಳನ್ನು ಉಂಟುಮಾಡುವುದರ ಜೊತೆಗೆ ಅಪರಾಧ ಚಟುವಟಿಕೆಗಳಿಗೆ ದಾರಿಮಾಡಿಕೊಡುತ್ತದೆ ಎಂದು ಚಿಕ್ಕಬಳ್ಳಾಪುರ ಉಪ ವಿಭಾಗದ ಪೋಲಿಸ್ ಅಧೀಕ್ಷಕ ಪ್ರಕಾಶ್ ತಿಳಿಸಿದರು.

ತಾಲ್ಲೂಕಿನ ಪರೇಸಂದ್ರ ಗ್ರಾಮದಲ್ಲಿ ಶಾಂತ ಶಿಕ್ಷಣ ಸಂಸ್ಥೆಗಳು ಮತ್ತು ಪೋಲಿಸ್ ಇಲಾಖೆಯಿಂದ ವಿಶ್ವ ಮಾದಕ ವಿರೋಧಿ ದಿನ 2026ರ ಪ್ರಯುಕ್ತ ನಡೆದ ಜಾಥ, ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಕುರಿತ ಬೀದಿ ನಾಟಕ ಗಳಿಗೆ ಚಾಲನೆ ನೀಡಿ ಮಾತನಾಡಿ, ಸಾರ್ವಜನಿಕರು ವಿಶೇಷವಾಗಿ ಯುವಜನತೆ ಮತ್ತು ವಿದ್ಯಾರ್ಥಿಗಳು ಮಾದಕ ವ್ಯಸನದ ದುಷ್ಪರಿಣಾಮಗಳ ಬಗ್ಗೆ ಅರಿವು ಹೊಂದಿ, ಇಂತಹ ದುಷ್ಚಟಗಳಿಂದ ದೂರವಿದ್ದು ಆರೋಗ್ಯಕರ ಹಾಗೂ ಶಿಸ್ತುಬದ್ಧ ಜೀವನವನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯವಾಗಿದ್ದು ಮಾದಕ ವಸ್ತು ಮುಕ್ತ ಭಾರತ ನಿರ್ಮಾಣಕ್ಕೆ ಮುಂದಾಗ ಬೇಕು ಎಂದು ಯುವಜನತೆ ಮತ್ತು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶಾಂತ ಸಂಸ್ಥೆಗಳ ನಿರ್ದೇಶಕ ಡಾ.ಕೋಡಿರಂಗಪ್ಪ ಮಾತನಾಡಿ, ನಮ್ಮ ದೇಶದ ಭವಿಷ್ಯ ಯುವಕರ ಕೈಯಲ್ಲಿದೆ. ಆದರೆ ಇತ್ತೀಚಿನ ದಿನಗಳಲ್ಲಿ, ವಿಶೇಷವಾಗಿ ಕರ್ನಾಟಕದಂತಹ ರಾಜ್ಯಗಳಲ್ಲಿ ಡ್ರಗ್ಸ್ ಹಾವಳಿ ಹೆಚ್ಚುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಯುವಕರು ತಾತ್ಕಾಲಿಕ ಖುಷಿಗಾಗಿ ಅಥವಾ ಒತ್ತಡಕ್ಕೆ ಮಣಿದು ಈ ಚಟಕ್ಕೆ ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳ ಸೇವನೆಯು ಕೇವಲ ಒಬ್ಬ ವ್ಯಕ್ತಿಯ ಆರೋಗ್ಯವನ್ನು ಹಾಳು ಮಾಡುವುದಿಲ್ಲ. ಇದು ಅವರ ಮಾನಸಿಕ ಸ್ಥಿತಿಯನ್ನು ಕುಂದಿಸಿ, ಇಡೀ ಕುಟುಂಬವನ್ನು ಬೀದಿಗೆ ತರುತ್ತದೆ. ಒಂದು ಅಧ್ಯಯನದ ಪ್ರಕಾರ, ಡ್ರಗ್ಸ್ ಸೇವಿಸುವ ಪ್ರತಿ ನಾಲ್ಕು ಜನರಲ್ಲಿ ಒಬ್ಬರು ಸಾವಿಗೆ ತುತ್ತಾಗುತ್ತಿದ್ದಾರೆ ಮತ್ತು ಶೇಕಡಾ 70ರಷ್ಟು ಜನರು ಮಾನಸಿಕ ಖಿನ್ನತೆಗೆ ಒಳಗಾಗುತ್ತಿರುವುದು ದುರದುಷ್ಟಕರ ಎಂದ ಅವರು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ದೇಶದಾದ್ಯಂತ ‘ನಶಾ ಮುಕ್ತ ಭಾರತ್ ಅಭಿಯಾನ’ದ ಮೂಲಕ ಡ್ರಗ್ಸ್ ಮುಕ್ತ ಸಮಾಜ ನಿರ್ಮಿಸಲು ಶ್ರಮಿಸುತ್ತಿದೆ. ಆದರೆ ಕೇವಲ ಸರ್ಕಾರದ ಕ್ರಮಗಳು ಮಾತ್ರ ಸಾಕಾಗುವುದಿಲ್ಲ. ಇದಕ್ಕೆ ಪ್ರತಿಯೊಬ್ಬರ ಜವಾಬ್ದಾರಿಯೂ ಅತ್ಯಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪೆರೇಸಂದ್ರ ಪೋಲಿಸ್ ಠಾಣೆಯ ಪಿಎಸ್ಐ ಗುಣವತಿ, ಪಿಎಸ್ಐ ಮಂಜುನಾಥ್, ಡಾ.ನವೀನ್ ಸೈಮನ್, ಡಾ. ಗೋಪಿನಾಥ್, ನರೇಶ್ ಕುಮಾರ್, ದೈಹಿಕ ಸಂದೇಶ, ರಾಜೇಶ್, ಶಶಿಧರ್, ವಿಜಯ, ಪೋಲಿಸ್ ಸಿಬ್ಬಂದಿಗಳಾದ ಮಂಜುನಾಥ್, ಶ್ರೀನಿವಾಸ್, ಬಾಬಾಜಾನ್, ಅನುಸೂಯಮ್ಮ, ಯಾಮಿನಿ, ವಿಶ್ವನಾಥ್, ರವಿ, ಅಲೈಡ್ ಸೈನ್ಸ್, ಫಿಸಿಯೋ ಥೇರಫಿ ಕಾಲೇಜುಗಳ ಆಧ್ಯಾಪಕರುಗಳು ಸೇರಿ ವಿದ್ಯಾರ್ಥಿಗಳು ಇದ್ದರು.

## ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಮಾವು ಬೆಳೆ ವಿಮಾ ಯೋಜನೆ

ರಾಮನಗರ

2026–27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಮಾವು ಬೆಳೆ ವಿಮೆ ಯೋಜನೆಯ ಅನುಷ್ಠಾನಗೊಳಿಸಲಾಗುತ್ತಿದ್ದು, ಬೆಂಗಳೂರು ದಕ್ಷಿಣ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಎಲ್ಲಾ ಪಂಚಾಯಿತಿ ಹಾಗೂ ನಗರ ಸ್ಥಳೀಯ ಆಡಳಿತ ಸಂಸ್ಥೆಗಳನ್ನು ಮಾವು ಬೆಳೆಯ ವಿಮಾ ವ್ಯಾಪ್ತಿಗೆ ಒಳಪಡಿಸಲಾಗಿದೆ.

ರೈತರು ಉಳಿತಾಯ ಖಾತೆ ಹೊಂದಿರುವ ಬ್ಯಾಂಕ್‌ಗಳ ಮೂಲಕ ವಿಮಾ ಕಂತು ಪಾವತಿಸಿ ಯೋಜನೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಸಾಮಾನ್ಯ ಸೇವಾ ಕೇಂದ್ರಗಳು ಹಾಗೂ ಗ್ರಾಮ ಒನ್‌ಗಳ ಮೂಲಕವೂ ವಿಮಾ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ.

ನೋಂದಣಿಗೆ ಅವಶ್ಯವಾಗಿ ಬ್ಯಾಂಕ್ ಖಾತೆ, ಪಹಣಿ, ಆಧಾರ್ ಕಾರ್ಡ್ಗಳನ್ನು ಹೊಂದಿರಬೇಕು. ಪ್ರತಿ ಎಕರೆಗೆ 1,600 ರೂ. ಪ್ರೀಮಿಯಂ ಪಾವತಿಸಿ, ನೊಂದಣಿ ಮಾಡಿಕೊಳ್ಳಬೇಕಾಗಿದೆ. ವಿಮಾ ಕಂತು ಪಾವತಿಸಲು ಆಗಸ್ಟ್ 30 ಕೊನೆಯ ದಿನವಾಗಿದ್ದು, ಈ ಯೋಜನೆಯ ಉಪಯೋಗವನ್ನು ಎಲ್ಲಾ ರೈತರು ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ರಾಮನಗರ. ಮೊ.ಸಂಖ್ಯೆ: 9945424437, ಚನ್ನಪಟ್ಟಣ ಮೊ.ಸಂಖ್ಯೆ: 9901367430, ಮಾಗಡಿ ಮೊ.ಸಂಖ್ಯೆ: 9620696196 ಅಥವಾ ಕನಕಪುರ ಮೊ.ಸಂಖ್ಯೆ: 9632410677 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಕುರಿತು ಸಂಸತ್‌ನಲ್ಲಿ ಚರ್ಚೆಗೆ ಕೇಂದ್ರ ಸಿದ್ಧ

ನವದೆಹಲಿ

ದೇಶಾದ್ಯಂತ ತೀವ್ರ ಪ್ರತಿಭಟನೆಗೆ ಕಾರಣವಾಗಿರುವ ನೀಟ್–ಯುಜಿ 2026ರ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ಕುರಿತು ಸಂಸತ್‌ನಲ್ಲಿ ಚರ್ಚೆ ನಡೆಸಲು ಕೇಂದ್ರ ಸರ್ಕಾರ ಸಿದ್ಧವಾಗಿದೆ. ಈ ಸಂಬಂಧ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮತ್ತು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

ಸ್ಪೀಕರ್ ಅವರನ್ನು ಭೇಟಿಯಾದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಿರಣ್ ರಿಜಿಜು, ನೀಟ್–ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ವಿಷಯದ ಕುರಿತು ಸಂಸತ್‌ನಲ್ಲಿ ಚರ್ಚೆ ನಡೆಸಲು ಸರ್ಕಾರ ಸಿದ್ಧವಿದೆ. ಆದರೆ, ಯಾವ ನಿಯಮದ ಅಡಿಯಲ್ಲಿ ಚರ್ಚೆ ನಡೆಸಬೇಕು ಎಂಬುದನ್ನು ಇನ್ನೂ ನಿರ್ಧರಿಸಬೇಕಿದೆ ಎಂದು ಹೇಳಿದರು.

“ಮಳೆಗಾಲದ ಅಧಿವೇಶನ ಆರಂಭವಾದ ಮೊದಲ ದಿನದಿಂದಲೇ ಸರ್ಕಾರ ಈ ವಿಷಯದ ಕುರಿತು ಚರ್ಚೆಗೆ ಸಿದ್ಧವಿದೆ. ಕಳೆದ ಮೂರು ದಿನಗಳಿಂದಲೂ ಔಪಚಾರಿಕ ಚರ್ಚೆ ನಡೆಸುವಂತೆ ನಾವು ಸೂಚಿಸಿದ್ದೇವೆ. ಮೊದಲ ದಿನದಿಂದಲೇ ವಿರೋಧ ಪಕ್ಷಗಳ ನಾಯಕರಿಗೆ ಈ ಬಗ್ಗೆ ಮಾಹಿತಿ ನೀಡಿದ್ದೇವೆ. ಲೋಕಸಭೆ ಸ್ಪೀಕರ್ ಮತ್ತು ರಾಜ್ಯಸಭೆ ಸಭಾಪತಿಗೂ ತಿಳಿಸಿದ್ದೇವೆ” ಎಂದು ರಿಜಿಜು ಹೇಳಿದರು.

ಚರ್ಚೆಯ ದಿನಾಂಕ ಮತ್ತು ಅವಧಿಯನ್ನು ನಿರ್ಧರಿಸಬೇಕಿದೆ. ಮಕ್ಕಳ ಭವಿಷ್ಯದ ಮೇಲೆ ಪರಿಣಾಮ ಬೀರುವಂತಹ ಗಂಭೀರ ವಿಷಯವನ್ನು ಕೇವಲ ಚರ್ಚೆಗಾಗಿ ಚರ್ಚಿಸುವ ಬದಲು, ಸೂಕ್ತ ನಿಯಮಗಳ ಅಡಿಯಲ್ಲಿ ವಿಸ್ತೃತವಾಗಿ ಚರ್ಚಿಸಬೇಕು ಎಂಬುದು ಸರ್ಕಾರದ ಉದ್ದೇಶವಾಗಿದೆ. ಚರ್ಚೆ ಯಾವಾಗ ಮತ್ತು ಹೇಗೆ ನಡೆಯಬೇಕು ಎಂಬುದರ ಕುರಿತು ಎಲ್ಲ ಪಕ್ಷಗಳ ಸದನ ನಾಯಕರೊಂದಿಗೆ ಸಮಾಲೋಚನೆ ನಡೆಸಲಾಗುವುದು ಎಂದು ಅವರು ತಿಳಿಸಿದರು.

ಚರ್ಚೆಗೆ ವಿಪಕ್ಷಗಳಿಗೆ ಸ್ಪೀಕರ್ ಆಹ್ವಾನ: ಕೇಂದ್ರ ಸಚಿವರಿಂದ ಮಾಹಿತಿ ಪಡೆದ ಬಳಿಕ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಕುರಿತು ಚರ್ಚೆ ನಡೆಸಲು ಸರ್ಕಾರ ಸಿದ್ಧವಿದೆ ಎಂದು ತಿಳಿಸಿ, ಚರ್ಚೆಯ ಕಾರ್ಯಸೂಚಿ ನಿರ್ಧರಿಸಲು ವಿರೋಧ ಪಕ್ಷಗಳ ನಾಯಕರನ್ನು ಆಹ್ವಾನಿಸಿದ್ದಾರೆ.

ಕೇಂದ್ರದ ವಿರುದ್ಧ ವಿಪಕ್ಷಗಳ ಆಕ್ರೋಶ: ಇದೇ ವೇಳೆ, ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ಕುರಿತು ಸಂಸತ್‌ನ ಉಭಯ ಸದನಗಳಲ್ಲಿ ಚರ್ಚೆಗೆ ಅವಕಾಶ ನೀಡಬೇಕು ಎಂದು ಒತ್ತಾಯಿಸಿ ವಿಪಕ್ಷಗಳು ಪ್ರತಿಭಟನೆ ಮುಂದುವರಿಸಿವೆ. ಈ ಹಿನ್ನೆಲೆಯಲ್ಲಿ ಉಭಯ ಸದನಗಳ ಕಲಾಪದಲ್ಲಿ ಗದ್ದಲ ಉಂಟಾಗಿ, ಕಲಾಪವನ್ನು ಮುಂದೂಡಲಾಗಿದೆ..

# ಬೀದಿ ನಾಯಿಗಳ ಹಾವಳಿ: ಕುರಿಗಳು ಬಲಿ, ಗ್ರಾಮಸ್ಥರಲ್ಲಿ ಆತಂಕ

ಬೂದಿಕೋಟೆ

ಹೋಬಳಿಯ ಬಲಮಂದೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭೀಮಗಾನಹಳ್ಳಿ ಗ್ರಾಮದಲ್ಲಿ ಬೀದಿ ನಾಯಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಗ್ರಾಮಸ್ಥರಲ್ಲಿ ತೀವ್ರ ಆತಂಕ ಮನೆ ಮಾಡಿದೆ.

ಬುಧವಾರ ಗ್ರಾಮದ ರೈತ ಮಹಿಳೆ ಅಮೃತಮ್ಮ ಅವರಿಗೆ ಸೇರಿದ ಕುರಿಗಳ ಮೇಲೆ ಬೀದಿ ನಾಯಿಗಳು ದಾಳಿ ನಡೆಸಿ ಕಚ್ಚಿ ಸಾವಿಗೀಡು ಮಾಡಿರುವ ಘಟನೆ ನಡೆದಿದೆ.

ಕುರಿ ಸಾಕಾಣಿಕೆಯನ್ನೇ ಜೀವನೋಪಾಯವಾಗಿಸಿ ಕೊಂಡಿರುವ ಅಮೃತಮ್ಮ ಅವರಿಗೆ ಈ ಘಟನೆ ಆರ್ಥಿಕವಾಗಿ ಭಾರೀ ನಷ್ಟ ಉಂಟು ಮಾಡಿದ್ದು, ಸರ್ಕಾರ ಸೂಕ್ತ ಪರಿಹಾರ ನೀಡಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಇದೇ ಗ್ರಾಮದ ಬಿ.ಜಿ.ನಾರಾಯಣಪ್ಪ ಅವರಿಗೆ ಸೇರಿದ



ಹಸುವಿನ ಮೇಲೆಯೂ ಕಳೆದ ಒಂದು ವಾರದ ಹಿಂದೆ ಬೀದಿ ನಾಯಿಗಳು ದಾಳಿ ನಡೆಸಿದ್ದವು. ಅದೃಷ್ಟವಶಾತ್

> ಗ್ರಾಮದಲ್ಲಿ ಬೀದಿ ನಾಯಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಬಗ್ಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತಂದರು ಯಾವುದೇ ಪ್ರಯೋಜನವಾಗುತ್ತಿಲ್ಲ ಆದಷ್ಟು ಬೇಗನೆ ನಾಯಿಗಳನ್ನು ಬೇರೆಡೆಗೆ ಕಳುಹಿಸಿ ನಿರ್ಭೀತಿಯಾಗಿ ಜೀವನ ನಡೆಸಲು ಸಹಕಾರಿ ಮಾಡಿಕೊಡಬೇಕು”
>
> –ನಾಗೇಗೌಡ
> ಭೀಮಗಾನಹಳ್ಳಿ ಗ್ರಾಮಸ್ಥ

ಹಸುವಿನ ಪ್ರಾಣ ಉಳಿದಿದ್ದರೂ ಗಾಯಗಳಾಗಿದ್ದು, ಚಿಕಿತ್ಸೆ ನೀಡಲಾಗಿದೆ ಎಂದು ತಿಳಿದುಬಂದಿದೆ.

ಗ್ರಾಮದಲ್ಲಿ ಬೀದಿ ನಾಯಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಜಾನುವಾರುಗಳನ್ನು ಮೇಯಿಸಲು ಹಾಗೂ ಮಕ್ಕಳು ಶಾಲೆಗೆ ಹೋಗಿ ಬರುವುದಕ್ಕೂ ಗ್ರಾಮಸ್ಥರು ಭಯಪಡುವಂತಾಗಿದೆ. ನಾಯಿಗಳ ಹಾವಳಿಯಿಂದ ರೈತರು ಮತ್ತು ಸಾರ್ವಜನಿಕರು ಆತಂಕದಲ್ಲಿ ದಿನ ಕಳೆಯುವಂತಾಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಗ್ರಾಮಸ್ಥರ ಮನವಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳುವ ಮೂಲಕ ಜನರು ಹಾಗೂ ಜಾನುವಾರುಗಳ ಸುರಕ್ಷತೆಗೆ ಆದ್ಯತೆ ನೀಡಬೇಕೆಂಬ ಆಗ್ರಹ ವ್ಯಕ್ತವಾಗಿದೆ. ಸಂಬಂಧಪಟ್ಟ ಗ್ರಾಮ ಪಂಚಾಯಿತಿ, ಪಶುಸಂಗೋಪನಾ ಇಲಾಖೆ ಹಾಗೂ ತಾಲೂಕು ಆಡಳಿತ ತಕ್ಷಣ ಕ್ರಮ ಕೈಗೊಂಡು ಬೀದಿ ನಾಯಿಗಳನ್ನು ಸೆರೆಹಿಡಿದು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಬೇಕು. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

## ರೇಷ್ಮೆ ಬೆಳೆಗಾರರಿಗೆ 49.50 ಲಕ್ಷ ಮೌಲ್ಯದ ಸಬ್ಸಿಡಿ ಸಲಕರಣೆ ವಿತರಣೆ

ಶಿಡ್ಲಘಟ್ಟ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜಂಟಿ ಯೋಜನೆಯಡಿ ತಾಲ್ಲೂಕಿನ 279 ಅರ್ಹ ರೇಷ್ಮೆ ಬೆಳೆಗಾರರಿಗೆ ಒಟ್ಟು 430 ಘಟಕಗಳ ರೇಷ್ಮೆ ಸಾಕಾಣಿಕೆ ಸಲಕರಣೆಗಳನ್ನು 49.50 ಲಕ್ಷ ವೆಚ್ಚದಲ್ಲಿ ಸಬ್ಸಿಡಿ ದರದಲ್ಲಿ ವಿತರಿಸಲಾಗುತ್ತಿದೆ ಎಂದು ಶಾಸಕ ಬಿ.ಎನ್. ರವಿಕುಮಾರ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದ ಆವರಣದಲ್ಲಿ ರೇಷ್ಮೆ ಇಲಾಖೆ ಹಮ್ಮಿಕೊಂಡಿದ್ದ ರೇಷ್ಮೆ ಹುಳು ಸಾಕಾಣಿಕೆ ಫಲಾನುಭವಿಗಳಿಗೆ ಸಲಕರಣೆ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ತಾಲ್ಲೂಕಿನ 279 ರೇಷ್ಮೆ ಬೆಳೆಗಾರರನ್ನು ಯೋಜನೆಗೆ ಆಯ್ಕೆ ಮಾಡಲಾಗಿದ್ದು, ಅವರಿಗೆ ರೇಷ್ಮೆ ಹುಳು ಸಾಕಾಣಿಕೆಗೆ ಅಗತ್ಯವಿರುವ ಕ್ರಿಮಿನಾಶಕ ಸ್ಪ್ರೇಯರ್‌ಗಳು, ಶೇಡ್ ನೆಟ್ ಗಳು, ಚಂದ್ರಿಕೆಗಳು ಹಾಗೂ ಸೋಲಾರ್ ದೀಪಗಳನ್ನು ವಿತರಿಸಲಾಗುತ್ತಿದೆ ಎಂದು ಹೇಳಿದರು.

ಸರ್ಕಾರದ ನಿಯಮಾವಳಿಯಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ 90ರಷ್ಟು ಹಾಗೂ ಸಾಮಾನ್ಯ ವರ್ಗದ ರೈತರಿಗೆ



ಶೇ 75ರಷ್ಟು ಸಬ್ಸಿಡಿ ದರದಲ್ಲಿ ಸಲಕರಣೆಗಳನ್ನು ಒದಗಿಸಲಾಗುತ್ತಿದೆ ಎಂದರು.

ಸರ್ಕಾರದ ಎಲ್ಲ ಯೋಜನೆಗಳು ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ಪಾರದರ್ಶಕವಾಗಿ ನೈಜ ರೈತರಿಗೆ ತಲುಪಬೇಕು. ರೈತರು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಸೌಲಭ್ಯಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು. ರೇಷ್ಮೆ, ತೋಟಗಾರಿಕೆ ಹಾಗೂ ಕೃಷಿ ಇಲಾಖೆಗಳ ವಿವಿಧ ಯೋಜನೆಗಳ ಮಾಹಿತಿ ಪ್ರತಿಯೊಬ್ಬ ರೈತನಿಗೂ ತಲುಪುವಂತೆ ಅಧಿಕಾರಿಗಳು ಕರಪತ್ರಗಳನ್ನು ಮುದ್ರಿಸಿ ಹಂಚಿಕೆ ಮಾಡಬೇಕು ಎಂದು ಸೂಚಿಸಿದರು. ಕ್ಷೇತ್ರದಲ್ಲಿ ರೇಷ್ಮೆ ಬೆಳೆಗಾರರ ಸಂಖ್ಯೆ ಹೆಚ್ಚಿರುವ ಹಿನ್ನೆಲೆಯಲ್ಲಿ 2026–27ನೇ ಸಾಲಿನಲ್ಲಿ ಶಿಡ್ಲಘಟ್ಟಕ್ಕೆ ಹೆಚ್ಚಿನ ಅನುದಾನ ಮಂಜೂರು ಮಾಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಜಿ.ಪಂ. ರೇಷ್ಮೆ ಉಪ ನಿರ್ದೇಶಕ ಮಾರಪ್ಪರ ಬೀರಲದಿನ್ನಿ, ಅಕ್ಮಲ್ ಪಾಷಾ, ಜಗದೇವಪ್ಪ ಗುಗ್ಗರಿ, ಹರೀಶ್ ಗೌಡ, ಎಂ.ಸಿ. ಭಾರತಿ, ಸೋಮಣ್ಣ ಮಕಣಾಪುರ, ಮಂಜುನಾಥ ಜಗತಾಪ್, ಮುಖಂಡರಾದ ಮೇಲೂರು ಮಂಜುನಾಥ್, ತಾದೂರು ರಘು, ಹನುಮಂತಪುರ ವಿಜಯಕುಮಾರ್, ಸೊಣ್ಣೇನಹಳ್ಳಿ ಮೂರ್ತಿ, ನಂದ ಕಿಶಾನ್, ಪ್ರದೀಪ್ ಕ್ರೀಡಾಪಟು ಜಯಂತಿ ಗ್ರಾಮದ ನಾರಾಯಣಸ್ವಾಮಿ, ರೈತ

## ‘ಮಹಾನ್ ಸಾಧ್ವಿ ಶಿರೋಮಣಿ ಗಾಯಕಿ ಜಾನಕಿ ಮತ್ತು ಚನ್ನಮ್ಮ’

ಚಿಕ್ಕಬಳ್ಳಾಪುರ

ತಾಲ್ಲೂಕಿನ ಪೆರೆಸಂದ್ರ ಗ್ರಾಮದ ಶಾಂತ ಶಿಕ್ಷಣ ಸಂಸ್ಥೆಯಲ್ಲಿ ಇತ್ತೀಚೆಗೆ ನಿಧನ ಹೊಂದಿದ ಗಾನಕೋಗಿಲೆ ಎಸ್. ಜಾನಕಿ ಅಮ್ಮ ಮತ್ತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಧರ್ಮಪತ್ನಿ ಚನ್ನಮ್ಮ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಶ್ರದ್ಧಾಂಜಲಿ ಸಭೆಯಲ್ಲಿ ಕಾಲೇಜಿನ ಅಧ್ಯಾಪಕ ವರ್ಗ ಹಾಗೂ ವಿದ್ಯಾರ್ಥಿಗಳು ಈರ್ವರೂ ದಿವಂಗತರ ಭಾವಚಿತ್ರಗಳಿಗೆ ಪುಷ್ಪನಮನದ ಮೂಲಕ ಗೌರವ ಸಲ್ಲಿಸಿದರು ನಂತರ ಶಾಂತ ಸಂಸ್ಥೆಗಳ ನಿರ್ದೇಶಕ ಡಾ.ಕೋಡಿರಂಗಪ್ಪ ಮಾತನಾಡಿ ಖ್ಯಾತ ಗಾಯಕಿ ಜಾನಕಿ ಅಮ್ಮ ಮತ್ತು ಶ್ರೀಮತಿ ಚನ್ನಮ್ಮ ದೇವೇಗೌಡ ಅವರುಗಳು ಸೇವೆ ಮತ್ತು ಮಾನವೀಯತೆಗೆ ಆದ್ಯತೆ ನೀಡಿದ್ದ ಮಹಾನ್ ಸಾಧ್ವಿ ಶಿರೋಮಣಿಗಳಾಗಿದ್ದರು.ತಮ್ಮ ಗಾಯನದಿಂದಲೇ

ಕೋಟ್ಯಾಂತರ ಜನರಿಗೆ ಅಮ್ಮನಾದ ಗಾನ ಕೋಗಿಲೆ ಎಸ್ ಜಾನಕಿ ಅವರು ಅನ್ನದಾನದಿಂದ ಮತ್ತು ಪ್ರೀತಿಯ ಅತಿಥಿಸತ್ಕಾರ ಭಾವದಿಂದ



ಜನಮನ ಗೆದ್ದಿದ್ದ ಚನ್ನಮ್ಮ ದೇವೇಗೌಡ ಅವರು ತಮ್ಮ ಜೀವನವನ್ನು ಮೌನವಾಗಿಯೇ ಮುಗಿಸಿ ಜನಮಾನಸದಲ್ಲಿ ಚಿರಸ್ಥಾಯಿ ಆಗಿದ್ದಾರೆ.

ಕನ್ನಡ ಸಿನಿಮಾ ಜಗತ್ತಿಗೆ ಸಹೃದಯ ರೊಂದಿಗೆ ಭಾವನಾತ್ಮಕ ಬಾಂಧವ್ಯ ಬೆಳೆಸಿರುವ ಎಸ್ ಜಾನಕಿ ಅವರು ತಾವು ಗಾಯನ ಮಾಡುವ ಗೀತೆಗಳ ಸಾಹಿತ್ಯ ಮೀಮಾಂಸೆ, ಭಾವ ಮುಂತಾದ ಎಲ್ಲ ಮೌನ ಭಾವಗಳಿಗೆ ಧ್ವನಿ ನೀಡಿ ಚಲನಚಿತ್ರಕ್ಕೆ ಮತ್ತು ಮಹಾನ್ ಕಲಾವಿದರಿಗೆ ಉತ್ತೇಜನ ನೀಡಿದ ಗಾನಕೋಗಿಲೆ ಆಗಿದ್ದರು. ಸುಮಾರು 17ಕ್ಕೂ ಹೆಚ್ಚು ಭಾಷೆಗಳಲ್ಲಿ ಐವತ್ತು ಸಾವಿರಕ್ಕೂ ಹೆಚ್ಚು ಗೀತೆಗಳನ್ನು ಗಾಯನ ಮಾಡಿ ಗಾಯನ ಜಗತ್ತಿನ ಶಾರದೆಯಾಗಿ ದಕ್ಷಿಣ ಭಾರತದ ಜನಮನದಲ್ಲಿ ಜೀವಂತವಾಗಿರುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಶಾಂತ ಶಿಕ್ಷಣ ಸಂಸ್ಥೆಗಳ ಡೀನ್ ಹಾಗೂ ಪ್ರಾಂಶುಪಾಲ ಡಾ.ನವೀನ್ ಸೈಮನ್, ಶಾಂತ ವಿಜ್ಞಾನಿಕೇತನದ ಪ್ರಾಂಶುಪಾಲ ಪ್ರಸಾದ್, ಫಾರ್ಮಸಿ ಕಾಲೇಜಿನ ಪ್ರಾಂಶುಪಾಲ ಡಾ. ಗೋಪಿನಾಥ್, ದೈಹಿಕ ಶಿಕ್ಷಣ ನಿರ್ದೇಶಕರುಗಳಾದ ಸಂದೇಶ ಮತ್ತು ರಾಜೇಶ್, ಶಶಿಧರ್, ವಿಜಯ, ಶಾಂತ ಶಾಲೆ ಹಾಗೂ ಕಾಲೇಜುಗಳ ಆಧ್ಯಾಪಕ ವರ್ಗ ವಿದ್ಯಾರ್ಥಿಗಳು ಇದ್ದರು.

## *ಬದುಕಿಗೂ ನೆಮ್ಮದಿಯಿಲ್ಲ, ಸಾವಿನಲ್ಲೂ ನೆಮ್ಮದಿಯಿಲ್ಲ, ಸ್ಮಶಾನಗಳಿಗೆ ಭೂಮಿ ಮಂಜೂರಿಗೆ ಒತ್ತಾಯ*

ವಿಜಯಪುರ

*ಪಟ್ಟಣ, 23 ವಾರ್ಡ್‌ಗಳು, 50 ಸಾವಿರಕ್ಕೂ ಅಧಿಕ ಜನಸಂಖ್ಯೆ ಇರುವ ಬೆಳೆಯುತ್ತಿರುವ ಪಟ್ಟಣ. ಆದರೆ, ಇಲ್ಲಿ ಬದುಕಿರುವವರಿಗೆ ಮೂಲಭೂತ ಸೌಕರ್ಯದ ನೆಮ್ಮದಿ ಇಲ್ಲ, ಸತ್ತವರಿಗೆ ಮುಕ್ತಿ ಹೊಂದಲೂ ಜಾಗವಿಲ್ಲದಂತಹ ಹೃದಯ ವಿದ್ರಾವಕ ಪರಿಸ್ಥಿತಿ ನಿರ್ಮಾಣವಾಗಿದೆ.*

*ಪಟ್ಟಣದ ಹಿಂದೂ ಸಮುದಾಯದವರಿಗೆ ಇದು ಅತ್ಯಂತ ನೋವಿನ ಸಂಗತಿ. ತಮ್ಮ ಆತ್ಮೀಯರನ್ನು ಕಳೆದುಕೊಂಡ ದುಃಖ ಒಂದೆಡೆಯಾದರೆ, ಅವರ ಅಂತ್ಯಸಂಸ್ಕಾರವನ್ನು ಗೌರವಯುತವಾಗಿ ಮಾಡಲು ಜಾಗವೇ ಸಿಗುತ್ತಿಲ್ಲ ಎಂಬ ಚಿಂತೆ ಇನ್ನೊಂದೆಡೆ ಕಾಡುತ್ತಿದೆ.*

*ಮಂಜೂರಾಗಿ ರದ್ದಾದ ಸ್ಮಶಾನದ ಜಮೀನು:*

*ಸಮಸ್ಯೆಯನ್ನು ಅರಿತಿದ್ದ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳು, ವಿಜಯಪುರ ಹೋಬಳಿಯ ಕೊಂಡೇನಹಳ್ಳಿ ಸರ್ವೆ ನಂ. 1 ರಲ್ಲಿ 3 ಎಕರೆ 30 ಗುಂಟೆ ಜಮೀನನ್ನು ಹಿಂದೂ ರುದ್ರಭೂಮಿಗೆ ಮಂಜೂರು ಮಾಡಿ ಪಹಣಿಯಲ್ಲೂ ನಮೂದು ಮಾಡಿದ್ದರು. ಸಾರ್ವಜನಿಕರಲ್ಲಿ ಕೊಂಚ ಭರವಸೆ ಮೂಡಿತ್ತು.*

> ಸ್ಮಶಾನಗಳಿಗೆ ಜಾಗಕ್ಕಾಗಿ, ಜಿಲ್ಲಾಧಿಕಾರಿಗೆ ಮನವಿ ಮಾಡಿದ್ದೇವೆ. ಹಿಂದೆ ಸ್ಮಶಾನಕ್ಕೆ ಮಂಜೂರಾಗಿದ್ದ ಭೂಮಿ, ಪುರಸಭೆಗೆ ಹಸ್ತಾಂತರ ಮಾಡಿರಲಿಲ್ಲ. ಈಗ ಧರ್ಮಪುರದ ಬಳಿ ಮಂಜೂರು ಮಾಡಿಕೊಡುವಂತೆ ಮನವಿ ಮಾಡಿದ್ದೇವೆ.
>
> ವೈ.ಎನ್. ಸತ್ಯನಾರಾಯಣ
> ಪುರಸಭೆ ಮುಖ್ಯಾಧಿಕಾರಿ ವಿಜಯಪುರ

*ಆದರೆ ಇದೀಗ ಯಾವುದೇ ಕಾರಣ ನೀಡದೆ ಆ ಪಹಣಿಯನ್ನು ರದ್ದುಪಡಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಇದರಿಂದಾಗಿ ವಿಜಯಪುರ ಪಟ್ಟಣದ ಹಿಂದೂಗಳಿಗೆ ಅಧಿಕೃತವಾಗಿ ಸ್ಮಶಾನಕ್ಕೆಂದು ಒಂದು ಗುಂಟೆ ಜಾಗವೂ ಉಳಿದಿಲ್ಲ.*

*ಈಗ ಇರುವ ಹಳೆಯ ಸ್ಮಶಾನಗಳ ಪರಿಸ್ಥಿತಿ ಇನ್ನೂ ಭಯಾನಕವಾಗಿದೆ. ಅಂತ್ಯಸಂಸ್ಕಾರಕ್ಕೆ ಗುಂಡಿ ತೋಡಲು ಹೋದರೆ ಹೂತಿಟ್ಟ ಶವಗಳ ಮೂಳೆಗಳು ಸಿಗುತ್ತಿವೆ. ಜಾಗದ ಕೊರತೆಯಿಂದಾಗಿ ಒಂದೇ ಗುಂಡಿಯಲ್ಲಿ ಎರಡು ಮೂರು ಶವಗಳನ್ನು ಹೂಳುವ ಅನಿವಾರ್ಯತೆ ಎದುರಾಗಿದೆ ಎಂದು ಸ್ಥಳೀಯರು ಕಣ್ಣೀರಿಡುತ್ತಿದ್ದಾರೆ. “ನಮ್ಮ ತಂದೆಯ ಅಂತ್ಯಕ್ರಿಯೆ ಮಾಡಲು ಹೋದಾಗ ಅರ್ಧ ಗುಂಡಿ ತೋಡುವಷ್ಟರಲ್ಲಿ ಹಳೆಯ ಮೂಳೆಗಳು ಸಿಕ್ಕವು. ಇದು ನಮ್ಮ ಸಂಸ್ಕೃತಿಗೇ ಮಾಡಿದ ಅಪಮಾನ. ಬದುಕಿದ್ದಾಗ ಕುಡಿಯುವ ನೀರಿಗಾಗಿ, ರಸ್ತೆಗಾಗಿ ಪರದಾಡುತ್ತೇವೆ, ಸತ್ತ ಮೇಲೂ ಹೀಗೆ ಆದರೆ ನಾವೆಲ್ಲಿ ಹೋಗಬೇಕು?ಎಂದು ಸ್ಥಳೀಯ ನಿವಾಸಿಯೊಬ್ಬರು ಅಳಲು ತೋಡಿಕೊಂಡಿದ್ದಾರೆ.*

*ಸರಕಾರ ಈ ಕೂಡಲೇ ಮಧ್ಯಪ್ರವೇಶಿಸಬೇಕು. ಕೊಂಡೇನಹಳ್ಳಿ ಸರ್ವೆ ನಂ. 1 ರಲ್ಲಿ ರದ್ದುಗೊಳಿಸಿರುವ ಪಹಣಿಯನ್ನು ಮರುಸ್ಥಾಪಿಸಿ, 3 ಎಕರೆ 30 ಗುಂಟೆ ಜಮೀನನ್ನು ಶಾಶ್ವತವಾಗಿ ಹಿಂದೂ ರುದ್ರಭೂಮಿಗೆ ಮೀಸಲಿಡಬೇಕು. ಇಲ್ಲವೇ ಬೇರೆ ಕಡೆ 5 ಎಕರೆ ಭೂಮಿಯನ್ನು ಮಂಜೂರು ಮಾಡಿಕೊಡಬೇಕು. ಇಲ್ಲದಿದ್ದರೆ 50 ಸಾವಿರ ಜನರಿರುವ ಪಟ್ಟಣದಲ್ಲಿ ಮುಂದಿನ ದಿನಗಳಲ್ಲಿ ಶವವನ್ನಿಟ್ಟುಕೊಂಡು ಪ್ರತಿಭಟನೆ ಮಾಡಬೇಕಾದ ಪರಿಸ್ಥಿತಿ ಬರುತ್ತದೆ ಎಂದು ಸಾರ್ವಜನಿಕರು ಎಚ್ಚರಿಸಿದ್ದಾರೆ.*

*ಬದುಕಿದಾಗ ನೆಮ್ಮದಿ ಕೊಡಿ, ಸತ್ತಾಗಲಾದರೂ ಮುಕ್ತಿ ಸಿಗುವಂತೆ ಮಾಡಿ ಎಂಬುದು ವಿಜಯಪುರದ ಜನತೆಯ ಕಂಬನಿ ಮಿಡಿಯುವ ಒತ್ತಾಯವಾಗಿದೆ.*

## ಬರಗಾಲ ಘೋಷಣೆ, ರೈತರ ಸಾಲಮನ್ನಾಕ್ಕೆ ಆಗ್ರಹ

ಶಿಡ್ಲಘಟ್ಟ

ಬರಗಾಲ ಪೀಡಿತ ತಾಲ್ಲೂಕೆಂದು ಘೋಷಿಸಿ, ರೈತರ ಸಂಪೂರ್ಣ ಸಾಲವನ್ನು ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಸಾಮೂಹಿಕ ಬಣದ ಸದಸ್ಯರು ಮಂಗಳವಾರ ತಹಶೀಲ್ದಾರ್ ಗಗನಸಿಂಧು ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದರು.

ಈ ವರ್ಷ ವೇಳೆಗೆ ಸಾಮಾನ್ಯವಾಗಿ ಶೇ.60ರಷ್ಟು ಮುಂಗಾರು ಬಿತ್ತನೆ ಪೂರ್ಣಗೊಳ್ಳಬೇಕಾಗಿತ್ತು. ಆದರೆ ಸಮರ್ಪಕ ಮಳೆಯ ಕೊರತೆಯಿಂದ ಇದುವರೆಗೆ ಶೇ 10ರಷ್ಟು ಬಿತ್ತನೆಯೂ ಆಗಿಲ್ಲ. ಹೀಗಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದರು.

ರೈತರ ಸಂಪೂರ್ಣ ಸಾಲವನ್ನು ಮನ್ನಾ ಮಾಡಬೇಕು. ಫಸಲು ವಿಮಾ ಯೋಜನೆಯಲ್ಲಿ ವಿಮಾ ಕಂಪೆನಿಗಳಿಂದ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಯುವಂತೆ ಹಾಗೂ ಯೋಜನೆಯಲ್ಲಿರುವ ನ್ಯೂನತೆಗಳನ್ನು ಸರಿಪಡಿಸಬೇಕು. ಜೊತೆಗೆ ಹಾಲಿನ ಖರೀದಿ ದರವನ್ನು ಹೆಚ್ಚಿಸಿ ರೈತರಿಗೆ ನೆರವಾಗಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಸಾಮೂಹಿಕ ಬಣದ ರಾಜ್ಯ ಉಪಾಧ್ಯಕ್ಷ ಬೆಳ್ಳೂಟಿ ಮುನಿಕೆಂಪಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಕ್ತರಹಳ್ಳಿ ಪ್ರತೀಶ್, ಎಚ್.ಎನ್. ಕದಿರೇಗೌಡ, ಆಂಜಿನಪ್ಪ, ಸುಬ್ರಮಣಿ, ಮುನೇಗೌಡ, ನವೀನ್ ಕುಮಾರ್, ಬಸವಪಟ್ಟಣ ಆಂಜಿನಪ್ಪ, ಪ್ರಭುಗೌಡ, ಯಣ್ಣಂಗೂರಿನ ಈರಪ್ಪ, ನರಸಿಂಹಮೂರ್ತಿ, ಭೀಮಣ್ಣ ಹಾಗೂ ಆಂಜಿನಪ್ಪ ರಾಮದಾಸ್ ಹಾಜರಿದ್ದರು.

## ಗುರುವಂದನಾ ಕಾರ್ಯಕ್ರಮ

ಕೋಲಾರ

ತಾಲೂಕು ವ್ಯಾಪ್ತಿಯ ಮುದುವಾಡಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ 2004–2005 ನೇ ಸಾಲಿನ ಹತ್ತನೇ ತರಗತಿ ಹಳೆಯ ವಿದ್ಯಾರ್ಥಿಗಳ ವತಿಯಿಂದ ಗುರುವಂದನಾ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ಕಾರ್ಯಕ್ರಮ ಕುರಿತು ಹಳೇ ವಿದ್ಯಾರ್ಥಿಗಳು ಮಾತನಾಡಿ, 21 ವರ್ಷಗಳ ನಂತರ ನಮ್ಮ ಸ್ನೇಹಿತರೆಲ್ಲ ಒಂದಾಗಿರುವುದು ತುಂಬಾ ಸಂತೋಷದ ವಿಷಯವಾಗಿದೆ. ನಮ್ಮ ಹಳೇ ಸ್ನೇಹಿತರನ್ನ ಹುಡುಕಲು ಹರಸಾಹಸ ಪಟ್ಟಿದ್ದೇವೆ. ಯಾರೊಬ್ಬರನ್ನು ಬಿಡದೇ ಎಲ್ಲಾ ವಿದ್ಯಾರ್ಥಿಗಳ ಮೊಬೈಲ್ ಸಂಖ್ಯೆ ಪಡೆದು ವಾಟ್ಸಾಪ್ ಗ್ರೂಪ್ ಮಾಡುವ ಮುಖಾಂತರ ಪ್ರತಿದಿನ ಈ ವಿಷಯದ ಕುರಿತು ಚರ್ಚೆ ಮಾಡಿ ಎಲ್ಲಾ ವಿದ್ಯಾರ್ಥಿಗಳ ಸಹಕಾರದೊಂದಿಗೆ ಈ ವಿಜೃಂಭಣೆ ಕಾರ್ಯಕ್ರಮ ಆಯೋಜನೆ ಮಾಡಿದ್ದೇವೆ. ದೇವರು ನಮ್ಮ ಗುರುಗಳಿಗೆ ಇನ್ನಷ್ಟು ಆರೋಗ್ಯ, ಆಯಸ್ಸು, ಐಶ್ವರ್ಯ ನೀಡಲಿ ಎಂದು ವಿದ್ಯಾರ್ಥಿಗಳೆಲ್ಲ ಬಯಸುತ್ತೇವೆ ಎಂದರು. ಇದೆ ರೀತಿ ಪ್ರತಿ ವರ್ಷ ಭೇಟಿಯಾಗಬೇಕು. ಶಾಲೆಗೆ ಅವಶ್ಯಕ ಉಡುಗೊರೆ ಕೊಡಬೇಕು. ಗುರುಗಳನ್ನ ಇಂತಹ ಕಾರ್ಯಕ್ರಮಗಳ ಮೂಲಕ ಗೌರವಿಸುವ ಕೆಲಸ ಮಾಡಬೇಕು ಎಂದು ವಿದ್ಯಾರ್ಥಿಗಳೆಲ್ಲ ಮಾತನಾಡಿಕೊಂಡಿದ್ದೇವೆ ಎಂದರು. ಈ ಕಾರ್ಯಕ್ರಮದ ಅಂಗವಾಗಿ ಪ್ರಸ್ತುತ ಸಾಲಿನ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಮವಸ್ತ್ರ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರು, ಶಿಕ್ಷಕಿಯರು, ಹಳೇ ವಿದ್ಯಾರ್ಥಿಗಳು ಸೇರಿದಂತೆ ಗ್ರಾಮಸ್ಥರು ಇತರರು ಇದ್ದರು.

## ಮಕ್ಕಳಿಗೆ ನೋಟ್ ಬುಕ್ ವಿತರಣೆ



ದೊಡ್ಡಬಳ್ಳಾಪುರ

ತಾಲ್ಲೂಕಿನ ಮಧುರನಹೊಸಹಳ್ಳಿ ಗ್ರಾಮದ ನಿವೃತ್ತ ಯೋಧ ಮುನಿರಾಜುರವರು ಬಾಲ್ಯದಲ್ಲಿ ಓದಿದ ಸ್ವಗ್ರಾಮ ಶಾಲೆಯಲ್ಲಿ ಮಕ್ಕಳಿಗೆ ನೋಟ್ ಬುಕ್, ಪೆನ್ನು, ಪೆನ್ಸಿಲ್ ವಿತರಣೆ ಮಾಡುವ ಮೂಲಕ ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಂಡರು.

ಕಳೆದ 3–4 ವರ್ಷಗಳಿಂದ ನಿರಂತರವಾಗಿ ಶಾಲಾ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಪೂರಕವಾದ ಸಾಮಗ್ರಿಗಳನ್ನು ವಿತರಿಸುತ್ತಾ ಬರುತ್ತಿದ್ದಾರೆ. ಮಕ್ಕಳು ಓದಿ ದೇಶಕ್ಕೆ ಉತ್ತಮ ಪ್ರಜೆಗಳಾಗಬೇಕೆನ್ನುವುದು ನಿವೃತ್ತ ಯೋಧ ಮುನಿರಾಜುರವರ ಉದ್ದೇಶವಾಗಿದೆ. ಈ ವೇಳೆ ಶಿಕ್ಷಕರಾದ ಚಂಗಪ್ಪ, ಗ್ರಾಮಸ್ಥ ಕೆ.ವೆಂಕಟೇಶ್, ಎನ್.ಚೇತನ್ ಕುಮಾರ್. ಕೆ.ಮುಕುಂದ, ಪಿ.ಭೈರೇಗೌಡ, ಆಕಾಶ್ ಉಪಸ್ಥಿತರಿದ್ದರು.

# ಕುಡಿಯುವ ನೀರಿನ ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಿ: ಡಿಸಿ

ತುಮಕೂರು

ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸಹಕಾರ ಬೇಸಾಯ ಯೋಜನೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಬುಧವಾರ ಸ್ಥಳ ಪರಿಶೀಲನೆ ನಡೆಸಿದರು.

ಶಿರಾ ತಾಲ್ಲೂಕು ತರೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಾಂಧಿನಗರ ಗ್ರಾಮದಲ್ಲಿ ಖಾಸಗಿ ಕೊಳವೆ ಬಾವಿಯಿಂದ ಗ್ರಾಮಸ್ಥರಿಗೆ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ನೀರು ಪೂರೈಕೆಯ ಕುರಿತು ಅವರು ಪರಿಶೀಲನೆ ನಡೆಸಿದರು.

ಕಸಬಾ ಹೋಬಳಿಯ ಮೇಲುಕುಂಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹನುಮನಹಳ್ಳಿ ಗ್ರಾಮದಲ್ಲಿ ಹಾಲಿ ರೀ–ಡ್ರಿಲ್ ಮಾಡಿರುವ ಕೊಳವೆಬಾವಿಯಿಂದ ಗ್ರಾಮಸ್ಥರಿಗೆ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ. ಆದರೆ ಹೊಸದಾಗಿ ಕೊರೆದಿರುವ ಕೊಳವೆಬಾವಿಯಲ್ಲಿ ನೀರಿನ ಲಭ್ಯತೆ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಮತ್ತೊಂದು ಹೊಸ ಕೊಳವೆಬಾವಿಯನ್ನು



ಕೊರೆಯುವಂತೆ ಸ್ಥಳೀಯರು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಸ್ಥಳೀಯರ ಮನವಿಯನ್ನು ಆಲಿಸಿದ ಜಿಲ್ಲಾಧಿಕಾರಿಗಳು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ನಂತರ ಅಮ್ಮಾಜಮ್ಮ ದೇವಸ್ಥಾನದ ಸಮಿತಿ ಹಾಗೂ ಖಾಸಗಿ ಒಡೆತನದ ಕೊಳವೆಬಾವಿಯ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಂಡು ಕುಡಿಯುವ ನೀರನ್ನು ಸರಬರಾಜು ಮಾಡುತ್ತಿರುವ ಕುರಿತು ದೇವಸ್ಥಾನ ಸಮಿತಿಯ ಸದಸ್ಯರೊಂದಿಗೆ ಅವರು ಚರ್ಚಿಸಿದರು.

ಇದೇ ಸಂದರ್ಭದಲ್ಲಿ ಸಹಕಾರ ಬೇಸಾಯ ಯೋಜನೆಗೆ ಸಂಬಂಧಿಸಿದಂತೆ ಶಿರಾ ತಾಲ್ಲೂಕಿನ ಕರೆಜ್ಜೀವನಹಳ್ಳಿ ಹಾಗೂ ತೋರಪ್ಪನಹಳ್ಳಿಯ ಫಲಾನುಭವಿಗಳಿಗೆ ಸಾಗುವಳಿ ಹಕ್ಕು ನೀಡುವ ಕುರಿತು ಸ್ಥಳ ಪರಿಶೀಲನೆ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಶಿರಾ ತಾಲ್ಲೂಕು ತಹಶೀಲ್ದಾರ್ ಹಾಗೂ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತು ಪ್ರಾಯೋಜಿತ ತರಬೇತಿ



ತುಮಕೂರು

ಜಿಲ್ಲಾ ತರಬೇತಿ ಸಂಸ್ಥೆಯ ವತಿಯಿಂದ ಮೈಸೂರು ಆಡಳಿತ ತರಬೇತಿ ಸಂಸ್ಥೆಯ ಮಹಾನಿರ್ದೇಶಕರ ನಿರ್ದೇಶನದಂತೆ ಜಿಲ್ಲೆಯ ವಿವಿಧ ಇಲಾಖೆಗಳ 'ಸಿ' ದರ್ಜೆಯ ನೌಕರರಿಗೆ ಜುಲೈ 20 ಹಾಗೂ 21ರಂದು ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತು ಪ್ರಾಯೋಜಿತ ತರಬೇತಿ ನೀಡಲಾಯಿತು.

ತರಬೇತಿಯಲ್ಲಿ ತೋಟಗಾರಿಕೆ, ಶಾಲಾ ಶಿಕ್ಷಣ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ರೇಷ್ಮೆ, ಅರಣ್ಯ, ಕಾರ್ಮಿಕ, ಪಶುಪಾಲನಾ, ಗಣಿ ಮತ್ತು ಭೂ ವಿಜ್ಞಾನ, ಕೃಷಿ ಇಲಾಖೆ, ತಾಲ್ಲೂಕು ಪಂಚಾಯತಿ ಸೇರಿದಂತೆ ವಿವಿಧ ಇಲಾಖೆಗಳ 'ಸಿ' ದರ್ಜೆಯ ನೌಕರರು ಪಾಲ್ಗೊಂಡು ತರಬೇತಿಯ ಸದುಪಯೋಗ ಪಡೆದುಕೊಂಡರು.

ಮೈಸೂರು ಆಡಳಿತ ತರಬೇತಿ ಸಂಸ್ಥೆಯ ಹಿರಿಯ ಬೋಧಕ ಡಾ. ಸುದರ್ಶನ್ ಹೆಚ್.ಎಂ. ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಕೆ. ವಿಶ್ವಾಸ್ ಹಾಜರಿದ್ದರು.

## ಅಧ್ಯಕ್ಷರಾಗಿ ಮಂಜುನಾಥರೆಡ್ಡಿ ಆಯ್ಕೆ



ಚಿಂತಾಮಣಿ

ತಾಲೂಕು ವಕೀಲರ ಸಂಘದ ಅಧ್ಯಕ್ಷರಾಗಿ ಮಂಜುನಾಥರೆಡ್ಡಿಯವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮಂಜುನಾಥರೆಡ್ಡಿಯವರನ್ನು ಹೊರತುಪಡಿಸಿ ಬೇರೆ ಯಾವುದೇ ನಾಮಪತ್ರ ಸಲ್ಲಿಕೆ ಆಗದ ಕಾರಣ ಮಂಜುನಾಥರೆಡ್ಡಿ ಯವರು ಅಧ್ಯಕ್ಷರಾಗಿ ಆಯ್ಕೆಯಾಗಿದ್ದು, ಉಳಿದಂತೆ ಉಪಾಧ್ಯಕ್ಷ ನಾಥಬಾಬು, ಕಾರ್ಯದರ್ಶಿ ಕಿರಣ್ ಕುಮಾರ್, ಜಂಟಿ ಕಾರ್ಯದರ್ಶಿ ಮಂಜುನಾಥ, ಖಜಾಂಚಿ ಲಕ್ಷ್ಮಿ ನಂದಿತ, ಕಾರ್ಯಕಾರಿ ಸಮಿತಿ ಸದಸ್ಯರಾಗಿ ರಚನಾ, ಲಕ್ಷ್ಮಿ ನರಸಿಂಹಮೂರ್ತಿ, ನಾರಾಯಣಸ್ವಾಮಿ, ದೇವರಾಜ, ನಾಗೇಶ್, ವಿನಯ್ ರವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಗಳು ಹಾಗೂ ಹಿರಿಯ ವಕೀಲರೂ ಆದ ಸುರೇಶ್ ಬಾಬು ಘೋಷಣೆ ಮಾಡಿದ್ದಾರೆ.

ನೂತನವಾಗಿ ಅವಿರೋಧವಾಗಿ ಆಯ್ಕೆಯಾಗಿರುವ ನೂತನ ಅಧ್ಯಕ್ಷ ಮಂಜುನಾಥರೆಡ್ಡಿ ಸೇರಿದಂತೆ ಎಲ್ಲಾ ಪದಾಧಿಕಾರಿಗಳನ್ನು ವಕೀಲರು ಅಭಿನಂದಿಸಿದ್ದಾರೆ.

## ಬೆಳೆ ವಿಮೆ ನೋಂದಣಿ

### ಮಾಡಿಸಿಕೊಳ್ಳಲು ರೈತರಿಗೆ ಸೂಚನೆ

ಕೋಲಾರ

2026–27ನೇ ಸಾಲಿನ ಮುಂಗಾರು ಹಂಗಾಮಿನ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ವ್ಯಾಪ್ತಿಗೆ ಕೋಲಾರ ಜಿಲ್ಲೆಯ ಅಧೀನದ ಎಲ್ಲಾ ತಾಲ್ಲೂಕುಗಳಾದ ಬಂಗಾರಪೇಟೆ, ಕೆ.ಜಿ.ಎಫ್. ಕೋಲಾರ, ಮಾಲೂರು, ಮುಳಬಾಗಿಲು ಮತ್ತು ಶ್ರೀನಿವಾಸಪುರ ತಾಲ್ಲೂಕುಗಳನ್ನು ಒಳಪಡಿಸಲಾಗಿದೆ.

ಕೋಲಾರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ಮಾವು ಬೆಳೆಗೆ ಪ್ರತಿ ಹೇಕ್ಟರ್ ವಿಮಾ ಮೊತ್ತ ರೂ.80000/– ಗಳಾಗಿದ್ದು, ಶೇ.5ರಷ್ಟು ರೈತರು ಪಾವತಿಸಬೇಕಾದ ವಿಮಾ ಕಂತಿನ ಮೊತ್ತ ರೂ.4000/– ಗಳಾಗಿರುತ್ತದೆ.

ಜಿಲ್ಲೆಯಲ್ಲಿ ಬೆಳೆ ಸಾಲ ಪಡೆದ ರೈತರು ಹಾಗೂ ಸಾಲ ಪಡೆಯದ ರೈತರು ನೊಂದಣಿ ಮಾಡಿಕೊಳ್ಳಬಹುದಾಗಿದ್ದು, ಆಯಾ ತಾಲ್ಲೂಕಿಗೆ ಸಂಬಂಧಪಟ್ಟ ವಿಮೆ ಮಾಡಿಸಲು ಇಚ್ಛಿಸುವ ರೈತರು ನಿಗಧಿತ ಅರ್ಜಿಯೊಂದಿಗೆ ಪಹಣಿ, ಬ್ಯಾಂಕ್ ಖಾತೆ ಪಾಸ್ ಪುಸ್ತಕ, ಆಧಾರಕಾರ್ಡ್ ನಕಲು ಪ್ರತಿಗಳನ್ನು ಲಗತ್ತಿಸಿ ತಾವು ಖಾತೆ ಹೊಂದಿರುವ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಅಥವಾ ಗ್ರಾಮ ಪಂಚಾಯತ್ ಮಟ್ಟದಲ್ಲಿರುವ ಗ್ರಾಮ ಓನ್ ಕೇಂದ್ರಗಳಲ್ಲಿ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಖಫಃಅಖಖ ವಿಮೆ ಯೋಜನೆಯಡಿ ಜುಲೈ 31 ರೊಳಗೆ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲ್ಲೂಕು ತೋಟಗಾರಿಕೆ ಕಛೇರಿಗಳಿಗೆ ಹಾಗೂ ಹೋಬಳಿ ಮಟ್ಟದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಬಂಗಾರಪೇಟೆ, ದೂ: 9845024906. ಕೋಲಾರ. ದೂ: 9448949104. ಮಾಲೂರು, ದೂ: 9448955801. ಮುಳಬಾಗಿಲು, ದೂ: 9964749681. ಶ್ರೀನಿವಾಸಪುರ. ದೂ: 9008059912 ಯನ್ನು ಸಂಪರ್ಕಿಸಬಹುದೆಂದು ತೋಟಗಾರಿಕೆ ಉಪ

# ಜೀತ: 2 ಮಕ್ಕಳು ಸೇರಿ 9 ಮಂದಿ ರಕ್ಷಣೆ

ಕುಣಿಗಲ್

ತಾಲ್ಲೂಕಿನ ಹುಲಿಯೂರು ದುರ್ಗ ವ್ಯಾಪ್ತಿಯ ಪಾವಸಂದ್ರ ಗ್ರಾಮದ ಸರ್ಕಾರಿ ಭೂಮಿಯಲ್ಲಿ ಅಕ್ರಮವಾಗಿ ನಡೆಯುತ್ತಿದ್ದ ಕಲ್ಲು ಗಣಿಗಾರಿಕೆಯಲ್ಲಿ ಕಳೆದ ಇಪ್ಪತ್ತು ವರ್ಷಗಳಿಂದ ಜೀತ ಪದ್ಧತಿಯಲ್ಲಿ ದುಡಿಸಿಕೊಳ್ಳುತ್ತಿದ್ದ ಹಿನ್ನೆಲೆಯಲ್ಲಿ ಇಬ್ಬರು ಮಕ್ಕಳು ಸೇರಿದಂತೆ ಐವರು ಮಹಿಳೆಯರು ನಾಲ್ಕು ಮಂದಿ ಪುರುಷರು ಸೇರಿದಂತೆ ಒಂಭತ್ತು ಮಂದಿಯನ್ನು ಅಧಿಕಾರಿಗಳು ರಕ್ಷಣೆ ಮಾಡಿದ್ದಾರೆ.

ಮೈಸೂರು ಕೆ.ಆರ್.ಎಸ್ ಮೂಲದ ಕಲ್ಲು ಗಣಿಯಲ್ಲಿ ಕೆಲಸ ಮಾಡುವ ಕಾರ್ಮಿಕರನ್ನು ಕರೆತಂದು ಹಣ ನೀಡಿ ಜೀತಕ್ಕೆ ದುಡಿಸಿಕೊಳ್ಳುತ್ತಿದ್ದರು ಎಂಬ ಆರೋಪ ಕೇಳಿಬಂದಿದ್ದು, ಮುಕ್ತಿ ಸಂಸ್ಥೆಯ ದೂರು ಹಿನ್ನೆಲೆಯಲ್ಲಿ ಉಪ ವಿಭಾಗಾಧಿಕಾರಿ ನಾಹೀದ ಜಮ್.ಜಮ್ ನೇತೃತ್ವದ ಅಧಿಕಾರಿಗಳು ಸರ್ಕಾರಿ ಭೂಮಿಯಲ್ಲಿ ಅಕ್ರಮವಾಗಿ ಗಣಿಗಾರಿಕೆ ಮಾಡಿಕೊಂಡು ಕಾರ್ಮಿಕರನ್ನು ದುಡಿಸಿಕೊಳ್ಳುತ್ತಿದ್ದ ಹಿನ್ನೆಲೆಯಲ್ಲಿ ಕಾರ್ಮಿಕರ ರಕ್ಷಣೆ ಮಾಡಿ ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲು ಮಾಡಲಾಗಿದೆ.

ಕಂದಾಯ ಸಚಿವರ ತವರು ಜಿಲ್ಲೆಯಲ್ಲಿ ಜೀತ ಪದ್ಧತಿ ಇನ್ನೂ ಜೀವಂತವಾಗಿರುವುದು ನಿಜಕ್ಕೂ ದುರಂತ ಸರ್ಕಾರಿ ಭೂಮಿಯಲ್ಲಿ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸಿ ಪ್ರಾಕೃತಿಕ ಸಂಪತ್ತನ್ನು ದೋಚಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡುತ್ತಿರುವವರ ಮೇಲೆ ಅಧಿಕಾರಿಗಳು ಇದುವರೆಗೆ ಯಾವುದೆ ರೀತಿಯ ಕ್ರಮ ಕೈಗೊಂಡಿಲ್ಲ ಇಷ್ಟೆಲ್ಲ ಘಟನೆ ನಡೆದರು ಸಹ ಕಂದಾಯ ಇಲಾಖೆಯ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳ ಗಮನಕ್ಕೆ ಬಂದಿಲ್ಲ ಎಂದಾದರೆ ಅಧಿಕಾರಿಗಳು ಯಾವ ರೀತಿಯ ಕೆಲಸ ಮಾಡುತ್ತಿದ್ದಾರೆ ಎಂಬುದು ಸ್ಥಳೀಯರ ಪ್ರಶ್ನೆಯಾಗಿದೆ.



ಈ ಸಂದರ್ಭದಲ್ಲಿ ಕುಣಿಗಲ್ ತಹಶೀಲ್ದಾರ್ ಕರಿಯನಾಯ್ಕ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶಿವಲಿಂಗಯ್ಯ, ಸಿಡಿಪಿಒ ಕಮಲ ಕಾರ್ಮಿಕ ಇಲಾಖೆಯ ಅಧಿಕಾರಿ ಪುರುಷೋತ್ತಮ್, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ಹಾಗೂ ಪೊಲೀಸರು ಈ ವೇಳೆ ಉಪಸ್ಥಿತರಿದ್ದರು.

# ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ

ತುಮಕೂರು

ನಗರ ವಿಧಾನಸಭಾ ಕ್ಷೇತ್ರದ ಮಹಾನಗರ ಪಾಲಿಕೆ ವ್ಯಾಪ್ತಿಯ 23ನೇ ವಾರ್ಡ್‌ನ ಸತ್ಯಮಂಗಲದಿಂದ ಬೀರನಕಲ್ಲು ವರೆಗೆ 1360 ಅಡಿ ಉದ್ದದ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕರಾದ ಜಿ.ಬಿ.ಜ್ಯೋತಿ ಗಣೇಶ್ ಹಾಗೂ ಬಿ. ಸುರೇಶ್‌ಗೌಡ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ಅನುದಾನ 2 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡಿರುವ ಸತ್ಯಮಂಗಲದಿಂದ ಬೀರನಕಲ್ಲುವರೆಗಿನ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಚಾಲನೆ ನೀಡಿದ ಬಳಿಕ ಮಾತನಾಡಿದ ಶಾಸಕ ಜ್ಯೋತಿಗಣೇಶ್ ಅವರು, ಈ ಭಾಗದ ಜನರ ಹಲವು ವರ್ಷಗಳ ಬೇಡಿಕೆ ಇದೀಗ ಈಡೇರುತ್ತಿದ್ದು, ಅರ್ಧ ಕಿ.ಮೀ. ಉದ್ದದ ಕಾಂಕ್ರೀಟ್ ರಸ್ತೆ ನಿರ್ಮಾಣವಾಗುತ್ತಿದೆ ಎಂದರು.

ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನಾ ಪ್ರಗತಿ ಪಥ ಯೋಜನೆಯಡಿ ಕಾಮಗಾರಿ ಕೈಗೊಳ್ಳಲಾಗಿದ್ದು, ಈ ಕಾಮಗಾರಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನ ದಿಂದ ನಡೆಯುತ್ತದೆ ಎಂದು ಅವರು ಹೇಳಿದರು.

ಈ ಭಾಗದ ರಸ್ತೆಗಳಲ್ಲಿ ಹೈಮಾಸ್ಟ್ ದೀಪ ಹಾಗೂ ಬಸ್ ನಿಲ್ದಾಣ ನಿರ್ಮಾಣ ಮಾಡುವಂತೆ ಜನರ ಬೇಡಿಕೆಯಿದ್ದು, ಇನ್ನು ಎರಡು–ಮೂರು ತಿಂಗಳಲ್ಲಿ ಹೈಮಾಸ್ಟ್ ದೀಪಗಳ ಅಳವಡಿಕೆ ಹಾಗೂ ಬಸ್ ನಿಲ್ದಾಣ ನಿರ್ಮಾಣ ಮಾಡಿಕೊಡುವುದಾಗಿ ಅವರು ಭರವಸೆ ನೀಡಿದರು.



ಮುಂದಿನ ದಿನಗಳಲ್ಲಿ 23ನೇ ವಾರ್ಡ್ ವ್ಯಾಪ್ತಿಯಲ್ಲಿ ಇನ್ನು ಹಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ವಾರ್ಡ್ ವ್ಯಾಪ್ತಿಯ ಅಭಿವೃದ್ಧಿ ಕಾರ್ಯಗಳಿಗೆ ಗ್ರಾಮಾಂತರ ಶಾಸಕ ಸುರೇಶ್‌ಗೌಡ ರವರು ಸಹ ಸಹಕಾರ ನೀಡುತ್ತಿದ್ದಾರೆ ಎಂದು ಅವರು ಹೇಳಿದರು.

ಮುಖಂಡ ಮಾಜಿ ಕಾರ್ಪೋರೇಟರ್ ವೆಂಕಟಪ್ಪ, ಮಾಜಿ ಟೂಡಾ ಸದಸ್ಯ ಸತ್ಯಮಂಗಲ ಜಗದೀಶ್, ಮುಖಂಡ ಅಣೆತೋಟ ಶ್ರೀನಿವಾಸ್, ಹನುಮಂತಪುರ ಹನುಮಂತರಾಜು. ಹೆಚ್, ಬೀರನಕಲ್ಲು ಸತೀಶ್, ಟಿ.ಡಿ.ಕೃಷ್ಣಮೂರ್ತಿ, ಕೀರ್ತಿ, ಭರತ್, ವೈ. ಎನ್.ಡಿ.ಸಿದ್ದರಾಜು, ರುದ್ರೇಶ್, ರಮೇಶ್ ಯಲ್ಲಾಪುರ, ಕೋದಂಡರಾಮು, ಮುಂತಾದ ಹಾಜರಿದ್ದರು.

# ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಿ: ಮೇಘನಾ ಶೆಟ್ಟಿ

ಕುಣಿಗಲ್

ಮಹಿಳೆಯರು ಆರೋಗ್ಯದ ಕಾಳಜಿ ಸ್ವಚ್ಛತೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಆತ್ಮವಿಶ್ವಾಸವನ್ನ ರೂಡಿಸಿಕೊಳ್ಳಬೇಕಾಗಿದೆ ಎಂದು ಚಲನಚಿತ್ರ ನಟಿ ಮೇಘನಾ ಶೆಟ್ಟಿ ತಿಳಿಸಿದರು

ಅವರು ಪಟ್ಟಣದ ಗವಿಮಠ ಎಸ್.ವಿ.ಬಿ ಕಲ್ಯಾಣ ಮಂಟಪದಲ್ಲಿ ಡಿ.ಕೆ. ಚಾರಿಟೇಬಲ್ ಟ್ರಸ್ಟ್ ಹಾಗೂ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಸಹಯೋಗದೊಂದಿಗೆ ಮಹಿಳೆಯರ ಆರೋಗ್ಯ ಶುಚಿ ಪೆರೇಡ್ ಪರಿವರ್ತನೆ ಅಭಿಯಾನ ಹಾಗೂ ಮುಟ್ಟಿನ ಕಪ್ಪು ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಮಹಿಳೆಯರು ಆತ್ಮವಿಶ್ವಾಸದಿಂದ ಆರೋಗ್ಯ ಬಗ್ಗೆ ಹೆಚ್ಚಿನ ಕಾಳಜಿ ಸ್ವಚ್ಛತೆ ಆದ್ಯತೆ ನೀಡುವುದರಿಂದ ಆರೋಗ್ಯವಂತ ಮಹಿಳೆಯಾಗಿ ಇಂದಿನ ಆಧುನಿಕ ಸಮಾಜದಲ್ಲಿ ಬದಲಾವಣೆಯಿಂದ ಆರೋಗ್ಯವಂತ ಸುರಕ್ಷಿತ ಕ್ರಮಗಳನ್ನು ಅನುಸರಿಸುವ ಮೂಲಕ ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ತಿಳಿಸಿದರು.




ಈ ವೇಳೆ ಶಾಸಕ ಡಾಕ್ಟರ್ ರಂಗನಾಥ್,, ಡಾ. ಸುಮ ರಂಗನಾಥ್ ಮಾತನಾಡಿ, ಮಹಿಳೆಯರು ಹೆಚ್ಚಿನ ಕಂದಾಚಾರ ಅನುಸರಿಸುತ್ತಾ ಮುಟ್ಟಿನ ಬಗ್ಗೆ ಯಾವುದೇ ವೈಜ್ಞಾನಿಕ ಅರಿವು ಇಲ್ಲದೆ ಅನೇಕ ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿರುವುದರಿಂದ ಮುಟ್ಟಿನ ಕಪ್ಪು ಬಳಕೆ ಯಾವುದೇ ವಿಧವಾದ ಆರೋಗ್ಯ ಸಮಸ್ಯೆ ಇಲ್ಲದೆ ಉತ್ತಮವಾದ ದೈನಂದಿನ ಬದುಕನ್ನ ರೂಡಿಸಿಕೊಳ್ಳುವುದರೊಂದಿಗೆ ಮಹಿಳೆಯರು ಮುಕ್ತವಾಗಿ ತಮ್ಮ ಆರೋಗ್ಯ ಸಮಸ್ಯೆಗಳ ಬಗ್ಗೆ ಹರಿವು ಮತ್ತು ಜಾಗೃತಿಗೊಳ್ಳಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಚಂದ್ರಶೇಖರ್, ಕ್ಷೇತ್ರ ಶಿಕ್ಷಣಾಧಿಕಾರಿ ಮಮತಾ ಮಣಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಕಮಲ, ಕಾರ್ಮಿಕ ಅಧಿಕಾರಿ ಪುರುಷೋತ್ತಮ್, ತಾಲೂಕು ಆರೋಗ್ಯ ಅಧಿಕಾರಿ ಡಾ. ಮರಿಯಪ್ಪ, ಜಿಲ್ಲಾ ಮಹಿಳಾ

# 'ದ್ವಿಚಕ್ರ ವಾಹನ ಸವಾರರಿಗೆ ಕಂಟಕವಾಗುತ್ತಿರುವ ರಸ್ತೆ'

ಚಿಂತಾಮಣಿ

ನಗರದ ಪತ್ರಕರ್ತರ ಭವನದ ಮುಂದಿನ ಮುಖ್ಯ ರಸ್ತೆಯಲ್ಲಿ ನೀರಿನ ಪೈಪುಗಳನ್ನು ಅಳವಡಿಸಲು ರಸ್ತೆಯ ಮಧ್ಯ ಭಾಗದಲ್ಲಿ ಅಗೆದಿರುವ ಕಾಲುವೆಯನ್ನು ಹಾಗೆ ಬಿಟ್ಟಿರುವುದರಿಂದ ದ್ವಿಚಕ್ರ ವಾಹನ ಸವಾರರಿಗೆ ತೀವ್ರ ನರಕವಾಗಿದ್ದು, ಅಕಸ್ಮಾತ್ ಕೊಂಚ ಯಾಮಾರಿದ್ರು ಸಾಕು ಕೈ ಕಾಲು ಮುರಿದು ಅಂಗವಿಕಲರಾಗುವುದು ಗ್ಯಾರಂಟಿ ಎಂಬ ಆಕ್ರೋಶ ಸಾರ್ವಜನಿಕರದ್ದಾಗಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿನಿತ್ಯ ದ್ವಿಚಕ್ರ ವಾಹನಗಳ ಓಡಾಟದ ರಸ್ತೆ ಇದಾಗಿದ್ದು, ಪ್ರಮುಖವಾಗಿ ಶಾಲಾ ಕಾಲೇಜುಗಳೂ ಸೇರಿದಂತೆ ಪಿಲ್ಟರ್ ಬೆಡ್ ಸರ್ಕಲ್, ಅಂಜನಿ ಬಡಾವಣೆ, ಟ್ಯಾಂಕ್ ಬಂಡ್ ರೋಡ್, ಆಶ್ರಯ ಬಡಾವಣೆ, ರಾಯಲ್ ಏರಿಯ, ಟೀಚರ್ಸ್ ಕಾಲೋನಿ, ಗಂಗಾನಗರ ಸೇರಿದಂತೆ ಹೆಚ್ಚಿನ ಪ್ರದೇಶಗಳಿಗೆ ಹೋಗುವ ಸಂಪರ್ಕ ರಸ್ತೆ ಇದಾಗಿದ್ದು ದ್ವಿಚಕ್ರ ವಾಹನದಲ್ಲಿ ಓಡಾಡುವವರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದು, ಈಗ ಈ ರಸ್ತೆ ಮಧ್ಯೆ ಭಾಗದಲ್ಲಿ ಅಗೆದಿರುವ ಕಾಲುವೆಯನ್ನು ಮುಚ್ಚದೆ ಹಾಗೆ ಬಿಟ್ಟಿರುವು ದರಿಂದ ವಾಹನ ಸವಾರರು ಕೊಂಚ ಯಾಮಾರಿದರೇ ಸಾಕು ಆಸ್ಪತ್ರೆಗೆ ದಾಖಲು ಆಗುವ ದುಸ್ಥಿತಿ ಬಂದಿದ್ದರೂ ಕೇಳುವವರೇ ಇಲ್ಲದಂತಾಗಿದೆ. ಗುತ್ತಿಗೆದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಇಂತಹ ವಸ್ತು ಸ್ಥಿತಿ ಗೊತ್ತಿದ್ದರೂ ನಿರ್ಲಕ್ಷ್ಯ ಧೋರಣೆ ತೋರಿರುವುದು ಎಷ್ಟು ಸರಿ ಎಂಬ ಪ್ರಶ್ನೆ ಜನರಿಂದ ಕೇಳಿ ಬರುತ್ತಿದೆ. ಈಗಾಗಲೇ ಕಾಲುವೆ ತೋಡಿ ತಿಂಗಳೇ ಕಳೆದಿದೆ, ಆದರೂ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಲು ಮುಂದಾಗಿಲ್ಲ, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಓಡಾಡುವ ಪ್ರಮುಖ ರಸ್ತೆ ಇದು ಎಂಬ ಜ್ಞಾನವಿಲ್ಲದೆ ಕಾಲುವೆ ತೋಡಿ ತಿಂಗಳಾನುಗಟ್ಟಲೆ ಹಾಗೆ ಬಿಟ್ಟರೆ ಹೇಗೆಂಬ ಮಾತು ಜನರಿಂದ ಕೇಳಿ ಬರುತ್ತಿದೆ. ಈಗಲಾದರೂ ಸಂಬಂಧ ಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಈ ಕುರಿತು ಎಚ್ಚೆತ್ತು ಆದಷ್ಟು ಬೇಗ ಅಪಾಯ ಆಗುವ ಮುನ್ನವೇ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಬೇಕೆಂಬ ಆಗ್ರಹ ಸಾರ್ವಜನಿಕರದ್ದಾಗಿದೆ.



## ಇಂದು ವಿದ್ಯುತ್ ವ್ಯತ್ಯಯ

ತುಮಕೂರು

ಬೆಸ್ಕಾಂ ಗ್ರಾಮೀಣ ಉಪವಿಭಾಗ–2ರ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಕೈಗೊಂಡಿರುವುದರಿಂದ ಗುರುವಾರ ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ನಾಗವಲ್ಲಿ, ಅರಿಯೂರು, ಗಂಗೋನಹಳ್ಳಿ ಮತ್ತು ಗಳಿಗೇನಹಳ್ಳಿ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಎನ್.ಜೆ.ವೈ. ಮತ್ತು ಐಪಿ ಫೀಡರ್‌ಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

## ಕುಂದು ಕೊರತೆ ಮಾಸಿಕ ಸಭೆ

ಮಾಲೂರು

ತಾಲ್ಲೂಕಿನ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮುದಾಯದ ಮೇಲಿನ ದೌರ್ಜನ್ಯ ತಡೆಗಟ್ಟುವ ಜೊತೆಗೆ ಅವರ ವಿವಿಧ ಸಮಸ್ಯೆಗಳನ್ನು ಹಂತ ಹಂತವಾಗಿ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಪೊಲೀಸ್ ಇನ್ಸ್‌ಪೆಕ್ಟರ್ ರಾಮಪ್ಪ ಬಿ.ಗುತ್ತೇರ್ ತಿಳಿಸಿದರು.

ನಗರದ ಪೊಲೀಸ್ ಠಾಣೆ ಸಭಾಂಗಣದಲ್ಲಿ ಆಯೋಜಿಸಿದ್ದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಕುಂದುಕೊರತೆಗಳ ಮಾಸಿಕ ಸಭೆಯಲ್ಲಿ ಅವರು ಮಾತನಾಡಿದರು.

ಸಭೆಯಲ್ಲಿ ವಿವಿಧ ಗ್ರಾಮಗಳ ದಲಿತ ಕಾಲೊನಿಗಳಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟ, ದಲಿತರ ಸ್ಮಶಾನಗಳ ಒತ್ತುವರಿ ಸೇರಿದಂತೆ ಸಮುದಾಯ ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಕುರಿತು ದಲಿತ ಮುಖಂಡರು ಅಧಿಕಾರಿಗಳ ಗಮನಕ್ಕೆ ತರಲಾಯಿತು.

ಸಮಸ್ಯೆಗಳಿಗೆ ಸಂಬಂಧಿಸಿದ ಇಲಾಖೆಗಳ ಸಮನ್ವಯ ದೊಂದಿಗೆ ಕ್ರಮ ಕೈಗೊಂಡು ಹಂತ ಹಂತವಾಗಿ ಸಮಸ್ಯೆಗಳ ಬಗೆಹರಿಸಲಾಗುವುದು ಎಂದು ಪೋಲಿಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಭರವಸೆ ನೀಡಿದರು.

ಸಭೆಯಲ್ಲಿ ಪೊಲೀಸ್ ಉಪನಿರೀಕ್ಷಕಿ ಪವಿತ್ರ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ವಿ. ಶಿವಕುಮಾರ್, ರಾಜ್ ಕುಮಾರ್, ಎನ್.ವೆಂಕಟರಾಮ್, ತಿಪ್ಪಸಂದ್ರ ಶ್ರೀನಿವಾಸ್, ಎಟ್ಟಕೋಡಿ ವೆಂಕಟೇಶ್, ಎಸ್.ಎಂ.ವೆಂಕಟೇಶ್, ಎ.ಎಸ್.ಎಸ್. ಕೆ ಜಿಲ್ಲಾ ಸಂಚಾಲಕ ಕಾಂತರಾಜ್, ದೊಡ್ಡ ಕಲ್ಲಹಳ್ಳಿ ವೆಂಕಟೇಶ್, ವಕೀಲ ಕುಪ್ಪೂರು ಈಶ್ವರ್, ಮೂಲನಿವಾಸಿ ತಿಮ್ಮರಾಯಪ್ಪ, ಡಿ.ಎನ್.ನಾರಾಯಣಸ್ವಾಮಿ, ಎಚ್.ನಾರಾಯಣಪ್ಪ, ಎಚ್. ಕೆ.ವೆಂಕಟೇಶ್, ಚೊಕ್ಕಂಡಹಳ್ಳಿ ವೆಂಕಟೇಶ್, ಶ್ರೀನಿವಾಸ್, ಶ್ಯಾಮಣ್ಣ, ನಾರಾಯಣಸ್ವಾಮಿ, ಎಂ.ಅಂಬರೀಶ್, ಮಿಟ್ಟಗಾನಹಳ್ಳಿ ವೆಂಕಟೇಶ್, ಚಿನ್ನಪ್ಪ, ನವೀನ್, ಮಿಟ್ಟಗಾನಹಳ್ಳಿ ಚಲಪತಿ, ಮಡಿವಾಳ ಶ್ರೀನಿವಾಸ್, ಪೊಲೀಸ್ ಸಿಬ್ಬಂದಿ ಮೋಹನ್, ನಾಗರಾಜ್ ತಳವಾರ್, ನಾಗರಾಜ್ ಪೂಜಾರ್, ಪೋಲಿಸ್ ಇಲಾಖೆ, ಅಬಕಾರಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸೇರಿದಂತೆ ದಲಿತ ಮುಖಂಡರು ಹಾಜರಿದ್ದರು.

### ಮುಮ್ಮಡಿ ನಿರ್ವಾಣ ಮಹಾಸ್ವಾಮಿಜಿಗಳ

## ಪ್ರಥಮ ಪುಣ್ಯಸ್ಮರಣೆ

ಕನಕಪುರ

ಇಲ್ಲಿನ ಶ್ರೀದೇಗುಲಮಠದ ಲಿಂಗೈಕ್ಯ ಪರಮಪೂಜ್ಯ ಡಾ. ಶ್ರೀಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಜಿಗಳ ಪ್ರಥಮ ಪುಣ್ಯ ಸ್ಮರಣೆ ಕಾರ್ಯಕ್ರಮವು ಗುರುವಾರ ನಡೆಯಲಿದೆ.

ಬೆಳಿಗ್ಗೆ 9 ಗಂಟೆಗೆ ಬೆಂಗಳೂರಿನ ಬಿಟಿಎಮ್ 2 ನೇ ಹಂತ, 16ನೇ ಮುಖ್ಯ ರಸ್ತೆಯಲ್ಲಿರುವ ಸ್ವಾಧಿಷ್ಟ ಹೋಟೆಲ್ ಸರ್ಕಲ್ ಬಳಿ ಏರ್ಪಡಿಸಲಾಗಿದೆ.

ಈ ಪುಣ್ಯ ಸ್ಮರಣೆ ಕಾರ್ಯಕ್ರಮಕ್ಕೆ ಶ್ರೀಮಠದ ಸದ್ಭಕ್ತರು, ಮಠದ ಹಳೇ ವಿದ್ಯಾರ್ಥಿಗಳು ಹಾಗೂ ನಾಗರೀಕರು ಪಾಲ್ಗೊಂಡು ಗುರುಕೃಪೆಗೆ ಪಾತ್ರರಾಗುವಂತೆ ಶ್ರೀದೇಗುಲಮಠದ ಆಡಳಿತ ಮಂಡಲಿ ಮತ್ತು ಹಳೇ ವಿದ್ಯಾರ್ಥಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಮ್ಮು-ಕಾಶ್ಮೀರದಲ್ಲಿ ಭಾರಿ ಮಳೆ: ಹೆದ್ದಾರಿ ಬಂದ್, ಅಮರನಾಥ ಯಾತ್ರೆ ರದ್ದು

ಶ್ರೀನಗರ (ಜಮ್ಮು ಮತ್ತು ಕಾಶ್ಮೀರ)

ಜಮ್ಮು ಮತ್ತು ಕಾಶ್ಮೀರದಲ್ಲಿ ಸಾಧಾರಣದಿಂದ ಭಾರಿ ಮಳೆಯಾಗುತ್ತಿದ್ದು, ಹಲವೆಡೆ ಭೂಕುಸಿತ ಸಂಭವಿಸಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಶ್ರೀನಗರ–ಜಮ್ಮು ರಾಷ್ಟ್ರೀಯ ಹೆದ್ದಾರಿಯನ್ನು ಬಂದ್ ಮಾಡಲಾಗಿದ್ದು, ಅಮರನಾಥ ಯಾತ್ರೆಯನ್ನೂ ತಾತ್ಕಾಲಿಕವಾಗಿ ರದ್ದುಗೊಳಿಸಲಾಗಿದೆ.

ಮಳೆಯ ಪರಿಣಾಮ ಹಲವು ಪ್ರದೇಶಗಳಲ್ಲಿನ ಸ್ಥಳೀಯ ತೊರೆಗಳು ಹಾಗೂ ಜಲಮೂಲಗಳಲ್ಲಿ ನೀರಿನ ಮಟ್ಟ ಏರಿಕೆಯಾಗಿದೆ. ಹೀಗಾಗಿ ಜನರು ಇಂತಹ ಜಲಮೂಲಗಳಿಂದ ದೂರವಿರುವಂತೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಶ್ರೀನಗರ–ಜಮ್ಮು ರಾಷ್ಟ್ರೀಯ ಹೆದ್ದಾರಿಯ ರಾಂಬನ್ ಮತ್ತು ಉಧಂಪುರ ಭಾಗಗಳಲ್ಲಿ ಭೂಕುಸಿತದ ಹಲವು ಘಟನೆಗಳು ಸಂಭವಿಸಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ಹೆದ್ದಾರಿಯಲ್ಲಿ ಎರಡೂ ದಿಕ್ಕಿನ ವಾಹನ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ ಎಂದು ಸಂಚಾರ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಹವಾಮಾನ ಸುಧಾರಿಸುವವರೆಗೆ ಹಾಗೂ ರಸ್ತೆ ಸಂಚಾರಕ್ಕೆ ಸುರಕ್ಷಿತವಾಗಿದೆ ಎಂದು ಘೋಷಿಸುವವರೆಗೆ ರಾಷ್ಟ್ರೀಯ ಹೆದ್ದಾರಿ–44ರಲ್ಲಿ ಪ್ರಯಾಣಿಸದಂತೆ ಪ್ರಯಾಣಿಕರಿಗೆ ಸೂಚಿಸಲಾಗಿದೆ.

ಆದಾಗ್ಯೂ, ಪ್ರಯಾಣಿಕರು ಪ್ರಯಾಣ ಆರಂಭಿಸುವ ಮುನ್ನ ಸಂಚಾರಕ್ಕೆ ಸಂಬಂಧಿಸಿದ ಇತ್ತೀಚಿನ ಮಾಹಿತಿಯನ್ನು ಪರಿಶೀಲಿಸಬೇಕು ಎಂದು ಸಂಚಾರ ಪೊಲೀಸರು ಸಲಹೆ ನೀಡಿದ್ದಾರೆ. ಜುಲೈ 20ರಿಂದ ಜಮ್ಮು ಮತ್ತು ಕಾಶ್ಮೀರದಲ್ಲಿ ವ್ಯಾಪಕವಾಗಿ ಭಾರಿ ಮಳೆಯಾಗುತ್ತಿದ್ದು, ಜುಲೈ 24ರವರೆಗೆ ಪ್ರತಿಕೂಲ ಹವಾಮಾನ ಮುಂದುವರಿಯುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

# ಹೆಣ್ಣು ಮಕ್ಕಳು ಯಾವುದರಲ್ಲಿಯೂ ಕಡಿಮೆ ಇಲ್ಲ: ಡಿಡಿಪಿಐ ರಾಧಾ

ತುಮಕೂರು

ಕೇವಲ ಒಳ್ಳೆಯ ಅಂಕ ಗಳಿಕೆಯಷ್ಟೇ ಶಿಕ್ಷಣದ ಉದ್ದೇಶವಲ್ಲ, ಅಂಕಗಳ ಜೊತೆಗೆ ಉತ್ತಮ ಚಾರಿತ್ರ್ಯ, ಒಳ್ಳೆಯ ನಡತೆ, ಮಾನವೀಯ ಗುಣಗಳನ್ನು ಬೆಳೆಸುವುದು ಸಹ ಆಗಿದೆ ಎಂದು ತುಮಕೂರು ಜಿಲ್ಲಾ ಪಿಯು ಡಿಡಿಪಿಐ ರಾಧಾ ಎಂ.ಎಸ್. ತಿಳಿಸಿದ್ದಾರೆ.

ನಗರದ ಶ್ರೀಸಿದ್ದಗಂಗಾ ಮಹಿಳಾ ಪದವಿ ಪೂರ್ವ ಕಾಲೇಜಿನ ಸಂಸ್ಕೃತಿ–2026–27 ರಲ್ಲಿ ಪ್ರತಿಭಾ ಪುರಸ್ಕಾರ, ಮತ್ತು ವಾರ್ಷಿಕ ಚಟುವಟಿಕೆಗಳ ಉದ್ಘಾಟನೆ ನೆರವೇರಿಸಿ ಮಾತನಾಡಿ, ಅವರು, ಶಿಕ್ಷಣವೆಂಬುದು ವ್ಯಕ್ತಿಯ ವ್ಯಕ್ತಿತ್ವ ರೂಪಿಸುವ ಒಂದು ಮಹತ್ ಸಾಧನ ಎಂದರು.

ನಾನು ವಿಧ್ಯಾರ್ಥಿ ದಿಸೆಯಿಂದಲೂ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರನ್ನು ಭೇಟಿಯಾಗಿ ಅವರ ಆಶೀರ್ವಾದ ಪಡೆಯಬೇಕು ಎಂಬ ಹಂಬಲವಿತ್ತು. ಆದರೆ ಅದು ಸಾಧ್ಯವಾಗಲಿಲ್ಲ ಇಂದು ಅವರೇ ಹುಟ್ಟು ಹಾಕಿದ ಕಾಲೇಜಿನಲ್ಲಿ ಮಾತನಾಡುವ ಅವಕಾಶ ದೊರೆತಿರುವುದು ನನ್ನ ಭಾಗ್ಯ, ವಿಧ್ಯಾರ್ಥಿಗಳಿಗೆ ತಮ್ಮ ತಂದೆ, ತಾಯಿಗಳೇ ರೋಲ್ ಮಾಡಲ್ ಆಗಬೇಕು. ಗುರು, ಹಿರಿಯರು ಸಹೋದರರೊಂದಿಗೆ ಒಳ್ಳೆಯ ಭಾಂಧ್ಯವ್ಯ ಹೊಂದಿ ತಾವು ಕೂಡ ತಮಗಿಂತ ಕಿರಿಯರಿಗೆ ಮಾದರಿಯಾದ ವ್ಯಕ್ತಿತ್ವ ರೂಪಿಸಿಕೊಂಡಾಗ ಮಾತ್ರ ನಿಮ್ಮ ವಿದ್ವತ್‌ಗೆ ಬೆಲೆ ಬರುತ್ತದೆ. ಸಮಾಜದಿಂದ ಎಲ್ಲವನ್ನು ಪಡೆಯುವ ನೀವು ಅವಕಾಶ ಸಿಕ್ಕಂತ ಸಂದರ್ಭದಲ್ಲಿ ಸಮಾಜಕ್ಕೆ ಎನ್ನನ್ನಾದರೂ ನೀಡುವ ಗುಣ ಬೆಳೆಸಿಕೊಳ್ಳಿ ಎಂದು ಸಲಹೆ ನೀಡಿದರು. ಹೆಣ್ಣು ಮಕ್ಕಳು ಯಾವುದರಲ್ಲಿಯೂ ಕಡಿಮೆ ಇಲ್ಲ, ಸಾಧನೆಗೆ ಮಿತಿ ಎಂಬುದಿಲ್ಲ, ಅಸೂಯೆಯನ್ನು ಬದಿಗಿಟ್ಟು ಗುರಿಯಡೆಗೆ ಸಹಬಾಳ್ವೆಯೊಂದಿಗೆ ಮುನ್ನಡೆದರೆ ಯಶಸ್ಸು ನಿಮ್ಮದಾಗುತ್ತದೆ ಎಂದು ಪಿಯು ಡಿಡಿಪಿಐ ರಾಧಾ ಎಂ.ಎಸ್. ತಿಳಿಸಿದರು.



ಈ ವೇಳೆ ಸಿದ್ದಗಂಗಾ ಪದವಿಪೂರ್ವ ಕಾಲೇಜುಗಳ ಸಂಯೋಜಕ ಪ್ರೊ.ಜಿ.ಎಸ್. ರೇಣುಕಪ್ಪ, ಸಿದ್ದಗಂಗಾ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಡಾ.ಟಿ.ಕೆ.ನಂಜುಂಡಪ್ಪ, ಸಿದ್ದಗಂಗಾ ಮಹಿಳಾ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಪಿ.ಚಂದ್ರಶೇಖರ್, ಲೇಖಕಿ ಮತ್ತು ಯುವ ವಾಗ್ಮಿ ಹಾರಿಕ ಮಂಜುನಾಥ್ ಮಾತನಾಡಿ, ಭಾರತೀಯ ಸಂಸ್ಕೃತಿಯ ಗುಡಿ ಗೋಪುರಗಳಲ್ಲಿ ಅಡಕವಾಗಿಲ್ಲ. ಅದು ವೇದ, ವಚನಗಳಲ್ಲಿ ಅಡಕವಾಗಿದೆ. ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರಂತ ಸಂತರು ಒಂದು ಶತಮಾನಗಳ ಕಾಲ ಬದುಕಿದ್ದು ಹತ್ತಾರು ಶತಮಾನಗಳಿಗೆ ಆಗುವಂತಹ ಪರಂಪರೆಯನ್ನು ಬಿಟ್ಟು ಹೋಗಿದ್ದಾರೆ. ನಮ್ಮ ಸಂಸ್ಕೃತಿಯ ವಾರಸುದಾರರೇ ಯುವಜನರು, ಅದರಲ್ಲಿಯೂ ಮಹಿಳೆಯರು. ನಮ್ಮ ಪೂರ್ವಜರು ಈ ನಾಡಿನ ಕಲೆ,ಸಾಹಿತ್ಯ, ವಿಜ್ಞಾನ, ಗಣಿತ ಹೀಗೆ ಎಲ್ಲಾ ವಿಷಯಗಳಿಗೂ ಅಪಾರ ಕೊಡುಗೆ ನೀಡಿದ್ದಾರೆ. ಅದನ್ನು ಮುಂದುವರೆಸಿಕೊಂಡು ಹೋಗುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಇದೇ ಸಂದರ್ಭದಲ್ಲಿ ಕಳೆದ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ 112 ಜನ ವಿದ್ಯಾರ್ಥಿನಿಯರಿಗೆ, ಹಾಗು ವಿಷಯವಾರು ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಂಸ್ಕೃತಿ ವೇದಿಕೆಯ ಸಂಚಾಲಕ ಸಮಾಜಶಾಸ್ತ್ರ ಉಪನ್ಯಾಸಕಿ ಮಂಜುಳ ಬಿ.ಎಸ್. ಕಾಲೇಜಿನ ಭೋಧಕ, ಭೋಧಕೇತರ ಸಿಬ್ಬಂದಿಗಳು ಹಾಗೂ ಮಕ್ಕಳು ಪೋಷಕರು ಪಾಲ್ಗೊಂಡಿದ್ದರು.

24/07/2026
ಭಾರತ ಸಾರಥಿ
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಬುಧವಾರ ಮಾಜಿ ಸಚಿವ ಶಾಸಕ ಜಮೀರ್ ಅಹಮದ್ ಖಾನ್ ಬೆಂಗಳೂರಿನ ಪದ್ಮನಾಭ ನಗರ ನಿವಾಸದಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರನ್ನು ಭೇಟಿ ಮಾಡಿ ಅರೋಗ್ಯ ವಿಚಾರಿಸಿದರು.



ಕಳೆದ ಶನಿವಾರ ನಿಧನರಾದ ಮಾಜಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು, ಅವರ ಧರ್ಮಪತ್ನಿ ಚೆನ್ನಮ್ಮ ಅವರು ಸಮಾಧಿಗೆ ಕುಟುಂಬ ಸದಸ್ಯರು ಹಾಲು ತುಪ್ಪ ಸಮರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಸೇರಿದಂತೆ ಎಲ್ಲರೂ ಹಾಲು ತುಪ್ಪ ಸಮರ್ಪಣೆ ಮಾಡಿದರು.

# 'ಬೊಮ್ಮನಹಳ್ಳಿ ಕ್ಷೇತ್ರದ 13 ಸಾವಿರಕ್ಕೂ ಹೆಚ್ಚು ಮತದಾರರ ಹೆಸರು ಕೈಬಿಟ್ಟಿದ್ದಾರೆ

ಬೆಂಗಳೂರು



ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆ ವಿರುದ್ಧ ಮತ್ತೊಂದು ಗಂಭೀರ ಆರೋಪ ಕೇಳಿಬಂದಿದೆ. ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಎಚ್ಎಸ್ಆರ್ ಲೇಔಟ್‌ನ 174ನೇ ವಾರ್ಡ್ ವ್ಯಾಪ್ತಿಯ 54ನೇ ಮತಗಟ್ಟೆಯಲ್ಲಿ 13 ಸಾವಿರಕ್ಕೂ ಹೆಚ್ಚು ಅರ್ಹ ಮತದಾರರ ಹೆಸರುಗಳನ್ನು ಶಾಶ್ವತವಾಗಿ ಸ್ಥಳಾಂತರಗೊಂಡವರು ಎಂದು ದಾಖಲಿಸಿ ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಆರೋಪಿಸಿದ್ದಾರೆ.

ಈ ಸಂಬಂಧ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಅವರಿಗೆ ಲಿಖಿತ ದೂರು ಸಲ್ಲಿಸಿರುವ ತೇಜಸ್ವಿ ಸೂರ್ಯ, ಯಾವುದೇ ಭೌತಿಕ ಪರಿಶೀಲನೆ ನಡೆಸದೆ ಹಾಗೂ ಮತಗಟ್ಟೆ ಮಟ್ಟದ ಏಜೆಂಟರಿಗೆ ಮಾಹಿತಿ ನೀಡದೆ ಅಧಿಕಾರಿಗಳು ಏಕಪಕ್ಷೀಯವಾಗಿ ಸಾವಿರಾರು ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಟ್ಟಿದ್ದಾರೆ ಎಂದು ದೂರಿದ್ದಾರೆ.

ಎಸ್ಐಆರ್ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಹಲವು ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂದು ಆರೋಪಿಸಿರುವ ಅವರು, ಜಿಪಿಎಸ್ ಆಧಾರಿತ ಛಾಯಾಚಿತ್ರ ಸಾಕ್ಷ್ಯ ಸಂಗ್ರಹಿಸಿಲ್ಲ, ಮನೆಗಳಿಗೆ ಅಂಟಿ ಸಬೇಕಿದ್ದ ಗಣತಿ ನಮೂನೆಗಳ ಗುರುತು ಚೀಟಿಗಳನ್ನು ಅಂಟಿಸಿಲ್ಲ ಹಾಗೂ ಮನೆ–ಮನೆಗೆ ಭೇಟಿ ನೀಡದೆ ಸುಳ್ಳು ವರದಿಗಳನ್ನು ಸಿದ್ಧಪಡಿಸಲಾಗಿದೆ ಎಂದು ಹೇಳಿದ್ದಾರೆ.

ಇದು ಕೇವಲ ಅಧಿಕಾರಿಗಳ ನಿರ್ಲಕ್ಷ್ಯವಲ್ಲ, ಅಧಿಕಾರದಲ್ಲಿರುವವರ ಕುಮ್ಮಕ್ಕಿನಿಂದ ನಡೆದಿರುವ ಬೃಹತ್ ಚುನಾವಣಾ ಅಕ್ರಮ ಎಂದು ತೇಜಸ್ವಿ ಸೂರ್ಯ ಆರೋಪಿಸಿದ್ದಾರೆ.

ಲಕ್ಷಾಂತರ ಜನರ ಮತದಾನದ ಹಕ್ಕಿಗೆ ಧಕ್ಕೆ ತರುವಂತಹ ಬೆಳವಣಿಗೆ ಇದಾಗಿದ್ದು, ಇದರ ಹಿಂದೆ ಇರುವವರ ವಿರುದ್ಧ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಸುಳ್ಳು ವರದಿ ನೀಡಿರುವ ಅಧಿಕಾರಿಗಳನ್ನು ತಕ್ಷಣ ಅಮಾನತುಗೊಳಿಸಬೇಕು. ಅಕ್ರಮವಾಗಿ ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎನ್ನಲಾದ 13 ಸಾವಿರಕ್ಕೂ ಹೆಚ್ಚು ಮತದಾರರ ಮಾಹಿತಿ ಯನ್ನು ಮರುಪರಿಶೀಲಿಸಿ, ಅರ್ಹ ಮತದಾರರ ಹೆಸರುಗಳನ್ನು ಮತ್ತೆ ಪಟ್ಟಿಗೆ ಸೇರಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಆದರೆ, ಈ ಆರೋಪಗಳ ಕುರಿತು ಚುನಾವಣಾ ಅಧಿಕಾರಿಗಳ ಅಧಿಕೃತ ಪ್ರತಿಕ್ರಿಯೆ ಇನ್ನಷ್ಟೇ ಹೊರಬೀಳಬೇಕಿದೆ. ಹೀಗಾಗಿ ಆರೋಪಗಳ ಸತ್ಯಾಸತ್ಯತೆ ಸಮಗ್ರ ಪರಿಶೀಲನೆ ಮತ್ತು ತನಿಖೆಯ ಬಳಿಕವೇ ಸ್ಪಷ್ಟವಾಗಲಿದೆ.

# ಕೋಲಾರದಲ್ಲಿ ಮತದಾರರ ಮಾಹಿತಿ ಗಣಕೀಕರಣ ಚುರುಕು

ಕೋಲಾರ

ಕೋಲಾರ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯು ಮಹತ್ವದ ಮೈಲಿಗಲ್ಲು ತಲುಪಿದ್ದು, ವಿತರಿಸಲಾದ ಎನುಮರೇಷನ್ ಫಾರ್ಮ್‌ಗಳ (EF) ಪೈಕಿ ಶೇಕಡಾ 75.95 ರಷ್ಟು (9,83,782) ಅರ್ಜಿಗಳ ಗಣಕೀಕರಣ (Digitization) ಕಾರ್ಯ ಯಶಸ್ವಿಯಾಗಿ ಪೂರ್ಣಗೊಂಡಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ಜಿಲ್ಲೆಯಾದ್ಯಂತ ಒಟ್ಟು 12,95,265 ಮತದಾರರಿಗೆ ಎನುಮರೇಷನ್ ಫಾರ್ಮ್ ವಿತರಿಸುವ ಮೂಲಕ ಶೇಕಡಾ 100 ರಷ್ಟು ವಿತರಣೆಯ ಸಾಧನೆ ಮಾಡಲಾಗಿದ್ದು, ಸಾರ್ವಜನಿಕರ ಅನುಕೂಲಕ್ಕಾಗಿ ಡಿಜಿಟಲ್ ಸೌಲಭ್ಯ ಒದಗಿಸಿದ ಹಿನ್ನೆಲೆಯಲ್ಲಿ 5,874 ಮತದಾರರು ಆನ್‌ಲೈನ್ ಮೂಲಕವೇ ತಮ್ಮ ವಿವರಗಳನ್ನು ಯಶಸ್ವಿಯಾಗಿ ಸಲ್ಲಿಸಿದ್ದಾರೆ.

ವಿವಿಧ ವಿಧಾನಸಭಾ ಕ್ಷೇತ್ರಗಳ ಗಣಕೀಕರಣ ಪ್ರಗತಿಯನ್ನು ಗಮನಿಸಿದರೆ, ಕೋಲಾರ ವಿಧಾನಸಭಾ ಕ್ಷೇತ್ರವು 1,85,464 ನಮೂನೆಗಳನ್ನು ಗಣಕೀಕರಿಸಿ ಜಿಲ್ಲೆಯಲ್ಲೇ ಮೊದಲ ಸ್ಥಾನದಲ್ಲಿದ್ದರೆ, ಮುಳಬಾಗಿಲು (1,78,058) ಹಾಗೂ ಶ್ರೀನಿವಾಸಪುರ (1,73,762) ಕ್ಷೇತ್ರಗಳು ನಂತರದ ಸ್ಥಾನಗಳಲ್ಲಿವೆ. ಬಂಗಾರಪೇಟೆಯಲ್ಲಿ 1,58,032, ಮಾಲೂರು ಕ್ಷೇತ್ರದಲ್ಲಿ 1,50,557 ಹಾಗೂ ಕೆ.ಜಿ.ಎಫ್ ಕ್ಷೇತ್ರದಲ್ಲಿ 1,37,909 ನಮೂನೆಗಳ ಗಣಕೀಕರಣ ಕಾರ್ಯ ಪೂರ್ಣಗೊಂಡಿದೆ.

ಇನ್ನು ನೈಜ ಸಮಯದ ಈ ಡಿಜಿಟಲ್ ತಪಾಸಣೆ ಮತ್ತು ಪರಿಶೀಲನೆಯ ವೇಳೆ ಜಿಲ್ಲಾದ್ಯಂತ ಒಟ್ಟು 63,036 ಆಕ್ಷೇಪಾರ್ಹ ಹಾಗೂ ಅನರ್ಹ (ASDDO) ನಮೂನೆಗಳನ್ನು ಪತ್ತೆಹಚ್ಚಿ ಪ್ರತ್ಯೇಕಿಸಲಾಗಿದೆ. ಈ ಪೈಕಿ 18,967 ಮೃತರಾದ ಮತದಾರರು, 29,660 ಖಾಯಂ ಆಗಿ ಸ್ಥಳಾಂತರಗೊಂಡವರು, 7,608 ದ್ವಿಪ್ರತಿ (ಈಗಾಗಲೇ ನೋಂದಾಯಿತ) ಮತದಾರರು, 6,138 ಗೈರುಹಾಜರಿ ಮತದಾರರು ಹಾಗೂ 663 ಇತರ ಕಾರಣಗಳ ನಮೂನೆಗಳು ಸೇರಿವೆ. ಬಾಕಿ ಉಳಿದಿರುವ ನಮೂನೆಗಳ ಗಣಕೀಕರಣ ಪ್ರಕ್ರಿಯೆಯನ್ನು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸಿ, ಪಾರದರ್ಶಕ ಮತದಾರರ ಪಟ್ಟಿಯನ್ನು ಶೀಘ್ರವೇ ಪ್ರಕಟಿಸಲಾಗುವುದು ಎಂದು ಜಿಲ್ಲಾಡಳಿತ

# ಚಿಕ್ಕತಿರುಪತಿ ದೇಗುಲದಲ್ಲಿ ಹುಂಡಿ ಎಣಿಕೆ

ಮಾಲೂರು

ತಾಲ್ಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾದ ಚಿಕ್ಕತಿರುಪತಿ ಶ್ರೀಪ್ರಸನ್ನ ವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆಯಿತು.

ಕಳೆದ 4 ತಿಂಗಳಲ್ಲಿ 60,84,745 ರೂಪಾಯಿ ಹಾಗೂ 32 ಗ್ರಾಂ ಬಂಗಾರ ಹಾಗೂ 303 ಗ್ರಾಂ ಬೆಳ್ಳಿ, ಸಂಗ್ರಹವಾಗಿದೆ ಎಂದು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಗಣೇಶ್ ಗೌಡ ರವರು ಹೇಳಿದರು.

ದೇವಸ್ಥಾನದ ಅನ್ನದಾಸೋಹ ಆವರಣದಲ್ಲಿ ನಡೆದ ಹುಂಡಿ ಎಣಿಕೆ ಕಾರ್ಯವು ಬೆಳಿಗ್ಗೆ ಆರಂಭವಾಗಿ ಸಂಜೆವರೆಗೂ ನಡೆಯಿತು, ಈ ಹುಂಡಿ ಎಣಿಕೆ ಕಾರ್ಯದಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಕೆನರಾ ಬ್ಯಾಂಕ್ ಸಿಬ್ಬಂದಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾಲೂರು ತಹಶೀಲ್ದಾರ್ ಎಂ.ವಿ.ರೂಪ, ಮುಜರಾಯಿ ಇಲಾಖೆಯ ಪ್ರಥಮ ದರ್ಜೆ ಸಹಾಯಕರಾದ ಪದ್ಮಾವತಿ, ದೇವಾಲಯದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಆಲಂಬಾಡಿ ಎಂ.ಗೋಪಾಲ್, ಲಕ್ಕೂರು ಹೋಬಳಿ ಉಪತಹಶೀಲ್ದಾರ್ ಕೆ.ಎಸ್.ಚೇತನ್, ರಾಜಸ್ವ ನಿರೀಕ್ಷಕರಾದ ಶ್ರೀಪತಿ, ಚಿಕ್ಕತಿರುಪತಿ ಗ್ರಾಮ ಆಡಳಿತ ಅಧಿಕಾರಿ ರೂಪೇಂದ್ರ, ವ್ಯವಸ್ಥಾಪನಾ ಸಮಿತಿ ಸದಸ್ಯರಾದ ಕೃಷ್ಣಮೂರ್ತಿ, ಜಯಮಂಗಲ ಶ್ರೀನಿವಾಸ್, ಭಾಗ್ಯಶ್ರೀ, ಶ್ರೀನಿವಾಸನ್, ಡಿ.ಎಲ್. ತಿಮ್ಮರಾಯಪ್ಪ ಸೇರಿದಂತೆ ಮಾಜಿ ವ್ಯವಸ್ಥಾಪನ ಸಮಿತಿಯ ಅಧ್ಯಕ್ಷ ಟಿ.ಆರ್.ವೆಂಕಟೇಶ್ ಗೌಡ, ಸದಸ್ಯ ಸುರೇಶ್ ಬಾಬು, ಪೋಲಿಸ್ ಇಲಾಖೆಯ ನಾಗರಾಜ್, ಚೌಡಪ್ಪ ದೇವಸ್ಥಾನದ ಸಿಬ್ಬಂದಿ ವೆಂಕಟೇಶ್, ಸೇರಿದಂತೆ ಮತ್ತಿತರರು ಹಾಜರಿದ್ದರು.



# ಎರಡು ರೈಲುಗಳ ಸಂಚಾರ ಸಮಯ ಬದಲು

ಬೆಂಗಳೂರು

ಕಾರ್ಯಾಚರಣೆಯ ಕಾರಣಗಳಿಂದಾಗಿ ಎರಡು ರೈಲುಗಳ ವೇಳಾಪಟ್ಟಿಯಲ್ಲಿ ಪರಿಷ್ಕರಣೆ ಮಾಡಲಾಗಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ. ಯಶವಂತಪುರ–ಖಾತಿಪುರ ಸಾಪ್ತಾಹಿಕ ಎಕ್ಸ್‌ಪ್ರೆಸ್ ಹಾಗೂ ತಿರುಪತಿ–ಚಿಕ್ಕಮಗಳೂರು ಎಕ್ಸ್‌ಪ್ರೆಸ್ ರೈಲುಗಳ ಕೆಲವು ನಿಲ್ದಾಣಗಳ ಆಗಮನ ಮತ್ತು ನಿರ್ಗಮನ ಸಮಯದಲ್ಲಿ ಬದಲಾವಣೆ ಮಾಡಲಾಗಿದೆ.

ಯಶವಂತಪುರ–ಖಾತಿಪುರ ರೈಲು ಸಮಯ ಬದಲು: ರೈಲು ಸಂಖ್ಯೆ 20667 ಯಶವಂತಪುರ–ಖಾತಿಪುರ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲಿನ ಪರಿಷ್ಕೃತ ವೇಳಾಪಟ್ಟಿ ಜುಲೈ 23, 2026ರಿಂದ ಆರಂಭವಾಗುವ ಪ್ರಯಾಣಕ್ಕೆ ಅನ್ವಯವಾಗಲಿದೆ. ಯಶವಂತಪುರದಿಂದ ಜೈಪುರದವರೆಗಿನ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಆದರೆ ಜೈಪುರ ನಿಲ್ದಾಣಕ್ಕೆ ಈ ರೈಲು ಪ್ರಸ್ತುತ 05:25ಕ್ಕೆ ಆಗಮಿಸಿ 05:35ಕ್ಕೆ ನಿರ್ಗಮಿಸುತ್ತಿದ್ದರೆ, ಪರಿಷ್ಕೃತ ವೇಳಾಪಟ್ಟಿಯಂತೆ 05:10ಕ್ಕೆ ಆಗಮಿಸಿ 05:20ಕ್ಕೆ ನಿರ್ಗಮಿಸಲಿದೆ. ಗಾಂಧಿನಗರ ಜೈಪುರ ನಿಲ್ದಾಣದಲ್ಲಿ ಪ್ರಸ್ತುತ 05:46ಕ್ಕೆ ಆಗಮಿಸಿ 05:49ಕ್ಕೆ ನಿರ್ಗಮಿಸುತ್ತಿದ್ದ ರೈಲು ಇನ್ನು ಮುಂದೆ 05:29ಕ್ಕೆ ಆಗಮಿಸಿ 05:31ಕ್ಕೆ ನಿರ್ಗಮಿಸಲಿದೆ. ಖಾತಿಪುರ ನಿಲ್ದಾಣಕ್ಕೆ ರೈಲು ನಿಗದಿತ ಸಮಯದಂತೆ ಬೆಳಗ್ಗೆ 06:05ಕ್ಕೆ ತಲುಪಲಿದೆ.

ತಿರುಪತಿ–ಚಿಕ್ಕಮಗಳೂರು ರೈಲು ವೇಳಾಪಟ್ಟಿಯಲ್ಲೂ ಬದಲು: ರೈಲು ಸಂಖ್ಯೆ 17423 ತಿರುಪತಿ–ಚಿಕ್ಕಮಗಳೂರು ಎಕ್ಸ್‌ಪ್ರೆಸ್ ರೈಲಿನ ವೇಳಾಪಟ್ಟಿಯನ್ನೂ ನೈರುತ್ಯ ರೈಲ್ವೆ ಪರಿಷ್ಕರಿಸಿದೆ. ಸೆಪ್ಟೆಂಬರ್ 24, 2026ರಿಂದ ಆರಂಭವಾಗುವ ಪ್ರಯಾಣಕ್ಕೆ ಈ ಬದಲಾವಣೆ ಅನ್ವಯವಾಗಲಿದೆ.

ಪರಿಷ್ಕೃತ ವೇಳಾಪಟ್ಟಿಯಂತೆ ರೈಲು ಅರಸೀಕೆರೆ ನಿಲ್ದಾಣಕ್ಕೆ ಬೆಳಗ್ಗೆ 06:25ಕ್ಕೆ ಆಗಮಿಸಿ 6:45ಕ್ಕೆ ನಿರ್ಗಮಿಸಲಿದೆ. ದೇವನೂರಿಗೆ 07:05ಕ್ಕೆ ಆಗಮಿಸಿ 7:06ಕ್ಕೆ ಹೊರಡಲಿದೆ. ಕಡೂರು ನಿಲ್ದಾಣಕ್ಕೆ 07:20ಕ್ಕೆ ಆಗಮಿಸಿ 7:22ಕ್ಕೆ ನಿರ್ಗಮಿಸಲಿದೆ. ಬೀರೂರು ಜಂಕ್ಷನ್‌ಗೆ 08:20ಕ್ಕೆ ಆಗಮಿಸಿ 08:45ಕ್ಕೆ ನಿರ್ಗಮಿಸಲಿದೆ. ರೈಲು ಚಿಕ್ಕಮಗಳೂರು ನಿಲ್ದಾಣವನ್ನು ತಲುಪುವ ಸಮಯದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಪ್ರಸ್ತುತ ವೇಳಾಪಟ್ಟಿಯಂತೆ ಬೆಳಗ್ಗೆ 10:30ಕ್ಕೆ

# ಪ್ರತೀ ಶುಕ್ರವಾರ ಆಯುಕ್ತರ ಫೋನ್-ಇನ್ ಕಾರ್ಯಕ್ರಮ

ಬೆಂಗಳೂರು



ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಸಾರ್ವಜನಿಕರ ಅಹವಾಲುಗಳನ್ನು ನೇರವಾಗಿ ಆಲಿಸುವ ಉದ್ದೇಶದಿಂದ ಉತ್ತರ ನಗರ ಪಾಲಿಕೆ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರು ಪ್ರತೀ ಶುಕ್ರವಾರ ಫೋನ್–ಇನ್ ಕಾರ್ಯಕ್ರಮ ಆರಂಭಿಸಿದ್ದಾರೆ. ಈ ವಾರದ ಫೋನ್–ಇನ್ ಕಾರ್ಯಕ್ರಮವು ಜುಲೈ 24ರಂದು ಶುಕ್ರವಾರ ಬೆಳಿಗ್ಗೆ 7ರಿಂದ 9 ಗಂಟೆಯವರೆಗೆ ನಡೆಯಲಿದೆ.

ಈ ಸಂದರ್ಭದಲ್ಲಿ ನಾಗರಿಕರು ರಸ್ತೆ ಗುಂಡಿಗಳು ಹಾಗೂ ದುರಸ್ತಿ ಕಾರ್ಯ, ಬೀದಿ ದೀಪಗಳ ನಿರ್ವಹಣೆ, ಮನೆಮನೆ ಕಸ ಸಂಗ್ರಹಣೆ ಮತ್ತು ವಿಲೇವಾರಿ, ಅಪಾಯಕಾರಿಯಾದ ಮರಗಳು ಹಾಗೂ ಕೊಂಬೆಗಳ ತೆರವು, ಸೊಳ್ಳೆ ನಿಯಂತ್ರಣ, ಬೀದಿ ನಾಯಿಗಳ ನಿಯಂತ್ರಣ, ಉದ್ಯಾನವನಗಳ ಅಭಿವೃದ್ಧಿ ಮತ್ತು ಸಂರಕ್ಷಣೆ, ಅನಧಿಕೃತ ಬ್ಯಾನರ್ ಹಾಗೂ ಪೋಸ್ಟರ್‌ಗಳ ತೆರವು, ಪಾದಚಾರಿ ಮಾರ್ಗಗಳ ಒತ್ತುವರಿ ತೆರವು, ಇ-ಖಾತಾ ಸೇರಿದಂತೆ ವಿವಿಧ ನಾಗರಿಕ ಸಮಸ್ಯೆಗಳ ಕುರಿತು ಆಯುಕ್ತರೊಂದಿಗೆ ನೇರವಾಗಿ ಮಾತನಾಡಿ ತಮ್ಮ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ. ಫೋನ್–ಇನ್ ಕಾರ್ಯಕ್ರಮದಲ್ಲಿ ಸ್ವೀಕರಿಸಲಾದ ಎಲ್ಲಾ ಅಹವಾಲುಗಳನ್ನು 'ಸಹಾಯ 2.0' ಪೋರ್ಟಲ್‌ನಲ್ಲಿ ದಾಖಲಿಸಿ, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ತಕ್ಷಣವೇ ರವಾನಿಸಲಾಗುತ್ತದೆ. ನಾಗರಿಕರು ಮೊಬೈಲ್ ಅಥವಾ ವಾಟ್ಸ್‌ಆ್ಯಪ್ ಮೂಲಕ 9480685705 ಸಂಖ್ಯೆಗೆ ಹಾಗೂ ದೂರವಾಣಿ ಮೂಲಕ 080–22975936 ಅಥವಾ 080–23636671 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ. ಅಲ್ಲದೆ, ತಮ್ಮ ದೂರುಗಳನ್ನು 'ಸಹಾಯ 2.0'

# ಕೃಷ್ಣಾವರಂ ಬಳಿ ಬೃಹತ್ ಸೇತುವೆ ಕಾಮಗಾರಿ ಅಂತಿಮ ಹಂತಕ್ಕೆ

ಕೆಜಿಎಫ್



ಕೆಜಿಎಫ್‌ನಿಂದ ಬೇತಮಂಗಲಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ಮುಖ್ಯ ರಸ್ತೆಯಾದ ಕೃಷ್ಣಾವರಂ ಬಳಿ ನಿರ್ಮಿಸಲಾಗುತ್ತಿರುವ ಬೃಹತ್ ಸೇತುವೆ ಹಾಗೂ ರಸ್ತೆ ಅಗಲೀಕರಣ ಕಾಮಗಾರಿ ತೀವ್ರ ಗತಿಯಲ್ಲಿ ಸಾಗುತ್ತಿದ್ದು, ಪ್ರಗತಿ ಪರಿಶೀಲನೆಯನ್ನು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಾಜಶೇಖರ್ ನಡೆಸಿದರು.

50 ವರ್ಷಗಳ ಕಾಯುವಿಕೆಗೆ ಮುಕ್ತಿ: ಈ ರಸ್ತೆಯನ್ನು ಸುಮಾರು 50ಕ್ಕೂ ಅಧಿಕ ವರ್ಷಗಳ ಹಿಂದೆ ನಿರ್ಮಿಸಲಾಗಿತ್ತು. ರಸ್ತೆಯ ಮಧ್ಯದಲ್ಲಿದ್ದ ಅಪಾಯಕಾರಿ ಬೃಹತ್ ತಿರುವುಗಳಿಂದಾಗಿ ಇಲ್ಲಿ ನಿರಂತರವಾಗಿ ಅಪಘಾತಗಳು ಸಂಭವಿಸುತ್ತಿದ್ದವು.

ಅನೇಕ ಸವಾರರು ಜೀವ ಕಳೆದುಕೊಂಡಿದ್ದರೆ, ಇನ್ನು ಕೆಲವರು ಗಂಭೀರವಾಗಿ ಗಾಯಗೊಂಡು ಅಂಗವಿಕಲತೆ ಅನುಭವಿಸಿದ್ದರು. ಈ ರಸ್ತೆಯನ್ನು ಸರಿಪಡಿಸುವಂತೆ ಸಾರ್ವಜನಿಕರಿಂದ ದಶಕಗಳಿಂದ ಕೂಗು ಕೇಳಿಬರುತ್ತಿತ್ತು.

7.50 ಕೋಟಿ ವೆಚ್ಚದ ಡ್ರೀಮ್ ಪ್ರಾಜೆಕ್ಟ್: ಸಾರ್ವಜನಿಕರು ಹಾಗೂ ವಾಹನ ಸವಾರರ ಪರದಾಟಕ್ಕೆ ಸ್ಪಂದಿಸಿದ ಶಾಸಕಿ ಎಂ. ರೂಪಕಲಾ ಶಶಿಧರ್ ಅವರು ವಿಶೇಷ ಗಮನ ಹರಿಸಿ, 7.50 ಕೋಟಿ ರೂ. ಅನುದಾನ ಬಿಡುಗಡೆ ಮಾಡಿಸಿ, ಕಾಮಗಾರಿಗೆ ಶಂಕುಸ್ಥಾಪನೆ (ಗುದ್ದಲಿ ಪೂಜೆ) ನೆರವೇರಿಸಿದ್ದರು.

1–2 ತಿಂಗಳಲ್ಲಿ ಸಂಚಾರಕ್ಕೆ ಮುಕ್ತ: ಸ್ಥಳ ಪರಿಶೀಲನೆ ನಡೆಸಿದ ಅಧಿಕಾರಿಗಳು ಈಗಾಗಲೇ ಸೇತುವೆಯ ಕಾಂಕ್ರೀಟ್ ಹಾಗೂ ತಡೆಗೋಡೆ ಕಾಮಗಾರಿ ಸೇರಿದಂತೆ ಬಹುತೇಕ ಕೆಲಸಗಳು ಪೂರ್ಣಗೊಂಡಿವೆ ಎಂದು ತಿಳಿಸಿದ್ದಾರೆ. ಇನ್ನು ಕೇವಲ 1 ರಿಂದ 2 ತಿಂಗಳ ಅವಧಿಯಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ರಸ್ತೆಯನ್ನು ಮುಕ್ತಗೊಳಿಸಲಾಗುವುದು ಎಂದು ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಯಾವುದೇ ರಸ್ತೆ ಯೋಜನೆಯಲ್ಲಿ 'ಬ್ಲ್ಯಾಕ್ ಸ್ಪಾಟ್'ಗಳನ್ನು (ಅಪಘಾತ ನಿರಂತರ ವಲಯ) ಸರಿಪಡಿಸುವುದು ಅತ್ಯಂತ ಮುಖ್ಯವಾಗಿದೆ. ಕೃಷ್ಣಾವರಂ ಬಳಿಯ ಬೃಹತ್ ತಿರುವು ಹತ್ತಾರು ಕುಟುಂಬಗಳ ಕಣ್ಣೀರಿಗೆ ಕಾರಣವಾಗಿತ್ತು. ಹೊಸ ಸೇತುವೆ ಮತ್ತು ನೇರವಾದ ರಸ್ತೆ ನಿರ್ಮಾಣದಿಂದ ಈ ಅಪಾಯ ಪೂರ್ಣವಾಗಿ ತಪ್ಪಲಿದೆ. ಸುಗಮ ಸಂಚಾರ: ಬೃಹತ್ ಸೇತುವೆಯು ಮಳೆಗಾಲದಲ್ಲಿ ನೀರು ರಸ್ತೆ ಮೇಲೆ ಹರಿಯುವುದನ್ನು ತಡೆದು, ನಿರಂತರ ಹಾಗೂ ಸುರಕ್ಷಿತ ಸಂಚಾರಕ್ಕೆ ಅನುವು ಮಾಡಿಕೊಡುತ್ತದೆ.

ಆರ್ಥಿಕ ಮತ್ತು ಪ್ರಾದೇಶಿಕ ಪ್ರಗತಿ: ವ್ಯಾಪಾರ–ವಾಣಿಜ್ಯಕ್ಕೆ ವೇಗ ಕೆಜಿಎಫ್ ಮತ್ತು ಬೇತಮಂಗಲ ನಡುವೆ ಪ್ರತಿನಿತ್ಯ ನೂರಾರು ರೈತರು, ವ್ಯಾಪಾರಿಗಳು, ಉದ್ಯೋಗಿಗಳು ಹಾಗೂ ವಿದ್ಯಾರ್ಥಿಗಳು ಸಂಚರಿಸುತ್ತಾರೆ. ರಸ್ತೆ ಹಾಗೂ ಸೇತುವೆ ಸುಧಾರಣೆಯಿಂದ ಪ್ರಯಾಣದ ಸಮಯ ಉಳಿತಾಯವಾಗಲಿದ್ದು, ಪ್ರಾದೇಶಿಕ ಆರ್ಥಿಕತೆಗೆ ಉತ್ತೇಜನ ಸಿಗಲಿದೆ.

ತುರ್ತು ಸೇವೆಗಳಿಗೆ ಅನುಕೂಲ: ಆಸ್ಪತ್ರೆಗೆ ತೆರಳುವ ಅಂಬುಲೆನ್ಸ್‌ಗಳಿಗೆ ಹಾಗೂ ತುರ್ತು ವಾಹನಗಳಿಗೆ ಈ ರಸ್ತೆ ಪ್ರಮುಖ ಸಂಪರ್ಕ ಸೇತುವೆಯಾಗಲಿದೆ.

ನಾಗೇಂದ್ರ ಬುದ್ದಿ ಮಾಜಿ ಗ್ರಾಪಂ ಸದಸ್ಯ: ಶಾಸಕರ ಜನಪರ ಕಾಳಜಿ ಹಾಗೂ ಲೋಕೋಪಯೋಗಿ ಇಲಾಖೆಯ ಸಕ್ರಿಯ ನಿರ್ವಹಣೆಯಿಂದಾಗಿ 50 ವರ್ಷಗಳ ಹಳೆಯ ಮಾರಣಾಂತಿಕ ಸಮಸ್ಯೆಯೊಂದು ಶಾಶ್ವತವಾಗಿ ಪರಿಹಾರಗೊಳ್ಳುತ್ತಿರುವುದು ಕೆಜಿಎಫ್ ಹಾಗೂ ಬೇತಮಂಗಲ ಭಾಗದ ಜನತೆಗೆ ದೊಡ್ಡ ರಿಲೀಫ್ ತಂದಿದೆ.

ಕಾಮಗಾರಿಯ ಗುಣಮಟ್ಟ: ಪ್ರಸ್ತುತ ಬೃಹತ್ ಆರ್‌ಸಿಸಿ ಕಾಂಕ್ರೀಟ್ ತಡೆಗೋಡೆಗಳನ್ನು ನಿರ್ಮಿಸಲಾಗುತ್ತಿದ್ದು, ಇವು ತಾಂತ್ರಿಕವಾಗಿ ದೃಢವಾಗಿವೆ. ಸಮಯಕ್ಕೆ ಸರಿಯಾಗಿ ಪೂರ್ಣಗೊಳಿ: ಮುಂಗಾರು/ಮಳೆಯ ವಾತಾವರಣ ಇರುವ ಕಾರಣ, ಮುಂದಿನ 1–2 ತಿಂಗಳಲ್ಲಿ ಡಾಂಬರೀಕರಣ ಹಾಗೂ ಕಾವಲು ಗೋಡೆಗಳ ಕೆಲಸವನ್ನು ತೀವ್ರಗೊಳಿಸಿ ನಿಗದಿತ ಸಮಯಕ್ಕೆ ಸಾರ್ವಜನಿಕರಿಗೆ ಮುಕ್ತಗೊಳಿಸಬೇಕಿದೆ.

# 24ಕ್ಕೆ ಜಲಮಂಡಳಿಯಿಂದ ನೇರ ಫೋನ್–ಇನ್

ಬೆಂಗಳೂರು

ಬೆಂಗಳೂರು ಜಲಮಂಡಳಿಯ ವತಿಯಿಂದ ಜಲಮಂಡಳಿ ಅಧ್ಯಕ್ಷರಾದ ಡಾ. ಮಂಜುಳ ಎನ್., ಭಾ.ಆ.ಸೇ., ಅವರ ಅಧ್ಯಕ್ಷತೆಯಲ್ಲಿ ಇದೇ 24ರಂದು ಶುಕ್ರವಾರ ಬೆಳಿಗ್ಗೆ 9.30ರಿಂದ 10.30ರವರೆಗೆ ನೇರ ಫೋನ್–ಇನ್ ಕಾರ್ಯಕ್ರಮ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ತಮ್ಮ ವಲಯ ಹಾಗೂ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ, ಒಳಚರಂಡಿ ಕೊಳವೆ ಅಥವಾ ಇಳಿಗುಂಡಿಗಳಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಸಮಸ್ಯೆ, ಜಲಮಾಪನ ಹಾಗೂ ನೀರಿನ ಬಿಲ್‌ಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ನೇರವಾಗಿ ಮಾತನಾಡಿ, ತಮ್ಮ ಕುಂದು ಕೊರತೆಗಳನ್ನು ಸಲ್ಲಿಸಬಹುದಾಗಿದೆ. ಸಾರ್ವಜನಿಕರು 080–22945119 ಹಾಗೂ 080–22229639 ದೂರವಾಣಿ ಸಂಖ್ಯೆಗಳ ಮೂಲಕ ಸಂಪರ್ಕಿಸಬಹುದಾಗಿದೆ. ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್. ಸಂಖ್ಯೆಯನ್ನು ತಿಳಿಸಿ ದೂರು ದಾಖಲಿಸುವಂತೆ ಜಲಮಂಡಳಿ ಕೋರಿದೆ.

ನೇರ ಫೋನ್–ಇನ್ ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡು ತಮ್ಮ ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುವಂತೆ ಸಾರ್ವಜನಿಕರಿಗೆ ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

# ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಕಾನೂನು ಅರಿವು ಕಾರ್ಯಕ್ರಮ

ದೊಡ್ಡಬಳ್ಳಾಪುರ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀಶೈಲ್ ಭೀಮಸ್ ಬಾಗಡಿ ಅವರ ಆದೇಶದ ಮೇರೆಗೆ, ಜಿಲ್ಲಾ ಅರೆಕಾಲಿಕ ಸ್ವಯಂಸೇವಕರಾದ ಕೃಷ್ಣಪ್ರಸಾದ್ ಅವರು ಭಾಶೆಟ್ಟಿ ಹಳ್ಳಿಯ ಅಜಾಕ್ಸ್ ಗವರ್ನಮೆಂಟ್ ಪಬ್ಲಿಕ್ ಸ್ಕೂಲ್‌ಗೆ ಬುಧವಾರ ಭೇಟಿ ನೀಡಿ 6.7ಮತ್ತು 8ನೇ ತರಗತಿ ವಿದ್ಯಾರ್ಥಿಗಳಿಗೆ ಕಾನೂನು ಅರಿವು ಕಾರ್ಯಕ್ರಮ ನಡೆಸಿಕೊಟ್ಟರು.

ಕಾರ್ಯಕ್ರಮಕ್ಕೂ ಮುನ್ನ ಶಾಲೆಯ ಸ್ವಚ್ಛತೆ, ಅಕ್ಷರ ದಾಸೋಹ, ತರಗತಿ ಕೊಠಡಿಗಳು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಆಟದ ಮೈದಾನ ಹಾಗೂ ಶಾಲಾ ಕೈತೋಟವನ್ನು ಪರಿಶೀಲಿಸಿದರು.

ಬಳಿಕ ವಿದ್ಯಾರ್ಥಿಗಳಿಗೆ ಬಾಲ್ಯ ವಿವಾಹದ ದುಷ್ಪರಿಣಾಮಗಳು, ಹೊರಗಡೆ ಮಾರಾಟವಾಗುವ ಅನಾರೋಗ್ಯಕರ ಆಹಾರ ಸೇವನೆಯ ಅಪಾಯಗಳು ಹಾಗೂ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಅರಿವು ಮೂಡಿಸಿದರು. ಎಸ್ಐಆರ್ ಕುರಿತು ವಿದ್ಯಾರ್ಥಿಗಳಿಗೆ ಎಷ್ಟರ ಮಟ್ಟಿಗೆ ಮಾಹಿತಿ ಇದೆ ಎಂಬುದನ್ನು ಪ್ರಶ್ನೆಗಳ ಮೂಲಕ ತಿಳಿದುಕೊಂಡ ಅವರು, ಅರ್ಹ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡುವುದು, ತಪ್ಪುಗಳನ್ನು ತಿದ್ದುಪಡಿ ಮಾಡುವುದು ಹಾಗೂ ಮೃತ ಮತ್ತು ಸ್ಥಳಾಂತರಗೊಂಡ ಮತದಾರರ ಹೆಸರುಗಳನ್ನು ಕೈಬಿಡುವ ಮಹತ್ವದ ಪ್ರಕ್ರಿಯೆಯೇ ಎಸ್ಐಆರ್ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕಿ ಆರ್. ರಾಜೇಶ್ವರಿ, ಸುನಿಲ್ ಸಿಬಿ, ಕೌಸಲ್ಯ, ಸಿ.ವೈ. ರೂಪ, ಸುಮಾ ಸಿ.ಆರ್., ಗೀತಾ ಆರ್., ನಾಗರಾಜು, ನಾಜೀಮಾ, ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.


# ವಿದ್ಯಾರ್ಥಿಗಳ ಪ್ರತಿಭಟನೆಗೆ ಶಾಸಕಿ ರೂಪಕಲಾ ಬೆಂಬಲ

ಕೆಜಿಎಫ್

ದೇಶದಲ್ಲಿ ಪದೇ ಪದೇ ನೀಟ್‌ನಂತಹ ಪ್ರಮುಖ ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗುತ್ತಿರುವುದನ್ನು ಪ್ರಶ್ನಿಸಿ ವಿದ್ಯಾರ್ಥಿಗಳು ನಡೆಸುತ್ತಿರುವ ಶಾಂತಿಯುತ ಪ್ರತಿಭಟನೆ ಅವರ ಪ್ರಜಾಪ್ರಭುತ್ವದ ಹಕ್ಕಾಗಿದೆ ಹಾಗಾಗಿ ವಿದ್ಯಾರ್ಥಿಗಳು ಹೋರಾಟಕ್ಕೆ ತಮ್ಮ ಸಂಪೂರ್ಣ ಬೆಂಬಲ ವಿದೆ ಎಂದು ಶಾಸಕಿ ರೂಪಕಲಾ ಶಶಿಧರ್ ಹೇಳಿದರು.

ಸಿಎಂ ಐಡಿಪಿ ಯೋಜನೆಯಡಿ ನಗರದ ವಾರ್ಡ್ 32, 33, 35ರಲ್ಲಿ ವಿವಿಧ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಸುದ್ದಿಗಾರರೊಂದಿಗೆ ಮಾತನಾಡಿದರು. ಕಳೆದ 21 ದಿನಗಳಿಂದ ವಿದ್ಯಾರ್ಥಿಗಳು ನಡೆಸುತ್ತಿದ್ದ ಶಾಂತಿಯುತ ಹೋರಾಟಕ್ಕೆ ಕೇಂದ್ರ ಸರ್ಕಾರ ಮಣಿಯದಿದ್ದರಿಂದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಬೀದಿಗಿಳಿದು ಹೋರಾಟ ಮಾಡಿದ್ದು ಅವರನ್ನು ಎಳೆದುಕೊಂಡು ಬಂಧಿಸಿದ್ದು ಸರಿಯಲ್ಲ ಎಂದು ಕಿಡಿ ಕಾರಿದರು.

ಭಾರತದ ಶಿಕ್ಷಣ ವ್ಯವಸ್ಥೆ ಏಕೆ ಹದಗೆಡುತ್ತಿದೆ? ಪದೇ ಪದೇ ಪ್ರಶ್ನೆ ಪತ್ರಿಕೆಗಳು ಏಕೆ ಸೋರಿಕೆಯಾಗುತ್ತಿವೆ? ಇದು ಲಕ್ಷಾಂತರ ಯುವಕರ ಭವಿಷ್ಯದೊಂದಿಗೆ ಆಡುತ್ತಿರುವ ಚೆಲ್ಲಾಟದಂತಾಗಿದೆ ಎಂದು ಕೇಂದ್ರ ಸರ್ಕಾರದ ಧೋರಣೆಯ ವಿರುದ್ಧ ಕಿಡಿಕಾರಿದರು.



ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಹಿನ್ನಲೆಯಲ್ಲಿ ದೆಹಲಿಯಲ್ಲಿ ಯುವಕರು 21 ದಿನಗಳಿಂದ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದರು. ಆಗ ಕೇಂದ್ರ ಸರ್ಕಾರದ ಸಚಿವರು, ಪ್ರತಿನಿಧಿಗಳು ವಿದ್ಯಾರ್ಥಿಗಳ ಅಹವಾಲುಗಳನ್ನು ಆಲಿಸಲಿಲ್ಲ. ಆದರೆ ಸಂಸತ್ ಭವನಕ್ಕೆ ಮುತ್ತಿಗೆ ಹಾಕಲು ಬಂದಾಗ ಯುವಕರು, ಹೆಣ್ಣು ಮಕ್ಕಳು ಎನ್ನದೆ ಅವರನ್ನು ಥಳಿಸಿದ್ದು ಖಂಡನೀಯವಾಗಿದ್ದು, ನಾವು ಯಾವ ವ್ಯವಸ್ಥೆಯಲ್ಲಿ ಇದ್ದೇವೆ ಎಂಬ ಪ್ರಶ್ನೆ ಮೂಡುತ್ತದೆ ಎಂದು ಬೇಸರವನ್ನು ವ್ಯಕ್ತಪಡಿಸಿದರು.

ತಾಲೂಕಿನಲ್ಲಿ ಪಡಿತರದಾರರ ಕಾರ್ಡ್‌ಗಳು ಹಾಗೂ ವೃದ್ಧಾಪ್ಯ, ಅಂಗವಿಕಲ, ವಿಧವಾ ವೇತನಗಳನ್ನು ರದ್ದುಪಡಿಸಿರುವುದಕ್ಕೆ ಸಂಬಂಧಿಸಿದಂತೆ ಮಾತನಾಡಿ, ಕುಟುಂಬದಲ್ಲಿ ತಂದೆ ಅಥಾವ ಮಗ ನೌಕರಿ ಮಾಡುತ್ತಿದ್ದರೆ, ಅವರ ವೇತನ ಆಧಾರ ಕಾರ್ಡ್‌ಗೆ ಲಿಂಕ್ ಆಗಿರುವುದರಿಂದ ಹಲವು ಪಡಿತರ ಕಾರ್ಡ್‌ಗಳು ಹಾಗೂ ಪೆನ್ಷನ್‌ಗಳು ರದ್ದುಗೊಂಡಿದೆ. ಆದರೆ ಯಾರು ಸಹ ಆತಂಕಪಡುವ ಅವಶ್ಯಕತೆ ಇಲ್ಲ. ನಗರಸಭೆ ವ್ಯಾಪ್ತಿಯ 35 ವಾರ್ಡ್‌ಗಳಲ್ಲಿ ವಾರದ 3 ದಿನಗಳ ಕಾಲ ಪ್ರತಿ ವಾರ್ಡ್‌ನಲ್ಲಿ ಕಂದಾಯ ಅದಾಲತ್ ಸಭೆಗಳನ್ನು ಹಮ್ಮಿಕೊಂಡು ಸಮಸ್ಯೆಗಳನ್ನು ಪರಿಹರಿಸಲಾಗುವುದು. ನೀವು ಸಹ ನಿಮ್ಮ ಮನೆಯಲ್ಲಿನ ಮಕ್ಕಳ ಹೆಸರು ರೇಷನ್ ಕಾರ್ಡ್‌ನಲ್ಲಿ ಇದ್ದರೆ ರದ್ದುಪಡಿಸಿ, ನಂತರ ನಿಮಗೆ ರೇಷನ್ ಕಾರ್ಡ್ ಸಿಗುತ್ತದೆ ಮತ್ತು ಪೆನ್ಷನ್ ಸಹ ಬರುತ್ತದೆ ಎಂದು ಹೇಳಿದರು.

ಸಿಎಂ ಐಡಿಪಿ ಯೋಜನೆಯಡಿ ಅಂದಾಜು 10 ಕೋಟಿ ವೆಚ್ಚದಲ್ಲಿ ಹಲವು ರಸ್ತೆ ಅಭಿವೃದ್ಧಿಗೆ ಚಾಲನೆ ನೀಡಲಾಗಿದೆ. ಈಗಾಗಲೇ ಹಲವು ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿಗಳು ಪ್ರಗತಿಯಲ್ಲಿ ಇದ್ದು, ಗುಣಮಟ್ಟದ ಕಾಮಗಾರಿ ಮಾಡಬೇಕು ಎಂದು ಗುತ್ತಿಗೆದಾರರಿಗೆ ಸೂಚನೆ ನೀಡಿದರು. ನಗರಸಭೆ ಇಂಜಿನೀಯರ್‌ಗಳು ಸಹ ಸ್ಥಳ ಪರಿಶೀಲನೆ ನಡೆಸಬೇಕು ಎಂದು ಹೇಳಿದರು. ಈ ವೇಳೆ ನಗರಸಭೆ ಮಾಜಿ ಅಧ್ಯಕ್ಷ ವಳ್ಳಲ್ ಮುನಿಸ್ವಾಮಿ, ಇಂಧಿರಾಗಾಂಧಿ, ಮಾಜಿ ಉಪಾಧ್ಯಕ್ಷ ಜರ್ಮನ್, ನಗರಸಭೆ ಮಾಜಿ ಸದಸ್ಯರಾದ ಕರುಣಾಕರನ್, ವೇಣುಗೋಪಾಲ್, ಕಾಂಗ್ರೆಸ್ ವರ್ಕಿಂಗ್ ಕಮಿಟಿ ಅಧ್ಯಕ್ಷ ಮೋಹನ್‌ರಾಜ್, ಕಾಂಗ್ರೆಸ್ ಲೇಬರ್ ಸೆಲ್ ಅಧ್ಯಕ್ಷ ವಿಷ್ಣುಕಾಂತ್, ಶಶಿಕುಮಾರ್, ಪ್ರವೀಣ್ ಹಾಗೂ ಇತರರು ಹಾಜರಿದ್ದರು.

# ಕ್ರೀಡಾ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಕೋಲಾರ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಹಸಾಧಕ ಕ್ರೀಡಾಪಟುಗಳು ಹಾಗೂ ಇತರರಿಂದ ವಿವಿಧ ಪ್ರಶಸ್ತಿಗಳನ್ನು ವಿತರಿಸುವ ಹಾಗೂ ಹಲವು ಪ್ರೋತ್ಸಾಹಧನ ನೀಡುವ ಯೋಜನೆಗಳು ಚಾಲ್ತಿಯಲ್ಲಿದ್ದು, ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ, ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ, ಗುರಿ–ಒಲಂಪಿಕ್ ಪದಕ, ನಗದು ಪುರಸ್ಕಾರ, ಶೈಕ್ಷಣಿಕ ಶುಲ್ಕ ಮರುಪಾವತಿ, ಕ್ರೀಡಾ ವಿದ್ಯಾರ್ಥಿ ವೇತನದ ಕಾರ್ಯಕ್ರಮಗಳಡಿ ಅರ್ಜಿ ಆಹ್ವಾನಿಸಲಾಗಿದೆ. ಕೋಲಾರ ಜಿಲ್ಲೆಯ ಅರ್ಹ ಕ್ರೀಡಾಪಟುಗಳು ಅರ್ಜಿಗಳನ್ನು ವೆಬ್‌ಸೈಟ್ https://sevasindhu.karnataka.gov.in ಕಡ್ಡಾಯವಾಗಿ ಆನ್‌ಲೈನ್ ಮೂಲಕ ಜುಲೈ 31 ರಂದು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂ.ಸಂ.9620543700 ಯನ್ನು ಸಂಪರ್ಕಿಸಬಹುದೆಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy